22 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 22 | ಸಂಚಿಕೆ 76 | ನವದೆಹಲಿ | ಬೆಲೆ ₹ 10 | ಸೆಪ್ಟೆಂಬರ್ 16 2024 ಸೋಮವಾರ

# ಕಾರ್ಮಿಕ ಇಲಾಖೆ ಸಕ್ರಿಯಗೊಳಿಸಿದ ಸಚಿವ ಸಂತೋಷ್ ಲಾಡ್



ಕಾರ್ಮಿಕ ಸಚಿವ ಖಾತೆ ಎಂದರೆ ಎಲ್ಲರಿಗೂ ಬೇಡವಾದದ್ದು. ಆದರೆ, ಕಾರ್ಮಿಕ ಖಾತೆಯ ಮೂಲಕವೇ ಹೆಚ್ಚು ಜನರಿಗೆ ತಲುಪಬಹುದು. ಯಾರಿಗೂ ಬೇಡವಾದದ್ದು ಎಲ್ಲರಿಗೂ ಬೇಕಾಗುವಂತೆ ಹೆಚ್ಚಿನ ಸೇವೆ ಮಾಡಬಹುದು. ಹೆಚ್ಚು ಜನರಿಗೆ ತಲುಪಬಹುದು ಎಂಬುದು ಸಚಿವ ಸಂತೋಷ್ ಲಾಡ್ ಅವರ ಅಭಿಪ್ರಾಯ.

ಸಂಘಟಿತ ಕಾರ್ಮಿಕರಿಗೆ ಎಲ್ಲ ಸೌಲಭ್ಯಗಳೂ ದೊರೆಯುತ್ತವೆ ಮತ್ತು ಕಾನೂನು ಪ್ರಕಾರ ಪಡೆಯುತ್ತಾರೆ. ಆದರೆ ಅಸಂಖ್ಯಾತ ಪ್ರಮಾಣದಲ್ಲಿರುವ ಅಸಂಘಟಿತ ಕಾರ್ಮಿಕರಿಗೆ ಸರ್ಕಾರದ ಸೌಲಭ್ಯಗಳನ್ನು ದೊರಕಿಸಿಕೊಡುವುದು ಕಷ್ಟದ ಕೆಲಸ. ಬಹಳಷ್ಟು ಅಸಂಘಟಿತ ಕಾರ್ಮಿಕರಿಗೆ ತಮಗೆ ದೊರೆಯುವ ಸೌಲಭ್ಯಗಳ ಬಗ್ಗೆ ತಿಳಿದೇ ಇಲ್ಲ. ಹೀಗಾಗಿ ಅವರಲ್ಲಿ ಜಾಗೃತಿ ಮೂಡಿಸಿ, ಅವರನ್ನು ಸಂಘಟಿತ ವಲಯಕ್ಕೆ ತಂದು ಸರ್ಕಾರದ ವಿವಿಧ ಸೌಕರ್ಯಗಳನ್ನು ಕಲ್ಪಿಸುವ ದಿಸೆಯಲ್ಲಿ ಸಚಿವ ಸಂತೋಷ್ ಲಾಡ್ ಅವರು ಮಹತ್ತರ ಪಾತ್ರ ವಹಿಸಿದ್ದಾರೆ.



ಕಾರ್ಮಿಕ ಇಲಾಖೆಯಲ್ಲಿ ಏನೇನು ಕೆಲಸ ಮಾಡಬಹುದು ಎಂಬುದನ್ನು ಸರಿಯಾಗಿ ಅಧ್ಯಯನ ಮಾಡಿದ ನಂತರವೇ ಮುಂದಡಿ ಇಡುವ ಸಚಿವ ಸಂತೋಷ್ ಲಾಡ್ ಅವರು ಕೇಂದ್ರ ಸರ್ಕಾರದಲ್ಲೂ ಕಾರ್ಮಿಕ ವರ್ಗಕ್ಕೆ ಅನೇಕ ಯೋಜನೆಗಳಿದ್ದು, ಅವು ರಾಜ್ಯಕ್ಕೆ ಬರುತ್ತಿಲ್ಲವೆಂದು ಅರಿತ ಸಚಿವರು, ಕೇಂದ್ರ ಕಾರ್ಮಿಕ ಖಾತೆಯೊಂದಿಗೂ ಸಂಪರ್ಕಿಸಿ, ರಾಜ್ಯದ ಕಾರ್ಮಿಕ ವರ್ಗಕ್ಕೆ ಕೇಂದ್ರದ ಯೋಜನೆಗಳ ಮೂಲಕ ದೊರೆಯುವ ಸೌಲಭ್ಯಗಳನ್ನು ಕೈತಪ್ಪಿ ಹೋಗದಂತೆ ರಾಜಕ್ಕೆ ಬರುವಂತೆ ಮಾಡಿ, ರಾಜ್ಯದ ಲಕ್ಷಾಂತರ ಕಾರ್ಮಿಕ ವರ್ಗಕ್ಕೆ ಕೇಂದ್ರ ಮತ್ತು ರಾಜ್ಯ ಸರ್ಕಾರದ ಸೌಲಭ್ಯಗಳನ್ನು ನೀಡುವ ದಿಸೆಯಲ್ಲಿ ತಮ್ಮ ಶಕ್ತಿ ಮೀರಿ ಸೇವೆ ಸಲ್ಲಿಸುವ ಮೂಲಕ ಕಾರ್ಮಿಕರ ಆರ್ಥಿಕ ಸ್ಥಿತಿ ಸುಧಾರಣೆಯಲ್ಲಿ ಮಹತ್ತರ ಪಾತ್ರ ವಹಿಸುತ್ತಿದ್ದಾರೆ.

ಸಂಘಟಿತ ಕಾರ್ಮಿಕ ವರ್ಗದವರು ಎಲ್ಲ ಸೌಲಭ್ಯಗಳನ್ನು ಪಡೆಯುತ್ತಾರೆ. ಆದರೆ, ಅಸಂಘಟಿತ ಕಾರ್ಮಿಕರಿಗೆ ಕನಿಷ್ಠ ವೇತನ ದೊರೆಯುವಂತೆ ಮಾಡುವುದು, ಅವರ ಆರೋಗ್ಯ, ವಸತಿ ಕಲ್ಪಿಸುವುದು ಮತ್ತು ಕಾರ್ಮಿಕರ ಮಕ್ಕಳ ಶಿಕ್ಷಣದ ಬಗ್ಗೆ ವಿಶೇಷ ಮುತುವರ್ಜಿ ವಹಿಸಿ, ಕಾರ್ಮಿಕ ವರ್ಗದ ಜೀವನ ಮಟ್ಟ ಸುಧಾರಣೆಗಾಗಿ ವಿವಿಧ ಕಲ್ಯಾಣ ಯೋಜನೆಗಳು ಅವರಿಗೆ ತಲುಪಿಸುವ ದಿಸೆಯಲ್ಲಿ ಸಚಿವ ಸಂತೋಷ್ ಲಾಡ್ ಅವರು ಹಗಲಿರಳೂ ಶ್ರಮಿಸುತ್ತಿದ್ದಾರೆ.

## ಆರಂಭಿಕ ಜೀವನ

ಮೂಲತಃ ಬಳ್ಳಾರಿ ಜಿಲ್ಲೆಯ ಸಂಡೂರು ತಾಲ್ಲೂಕಿನವರಾದ ಸಂತೋಷ್ ಲಾಡ್ ಅವರಿಗೆ ರಾಜಕೀಯ ಮತ್ತು ಸಮಾಜಸೇವೆ ಹೊಸದೇನಲ್ಲ.

ಸಂಡೂರಿನ ಶಿವಾಜಿ ಲಾಡ್ ಮತ್ತು ಶೈಲಜಾ ಲಾಡ್ ದಂಪತಿಯ ಪುತ್ರ ಸಂತೋಷ್ ಲಾಡ್ ಅವರು ಫೆಬ್ರವರಿ 27, 1975 ರಂದು ಜನಿಸಿದವರು. ಅವರಿಗೆ ಒಬ್ಬ ಸಹೋದರಿ ಇದ್ದು, ಒಬ್ಬ ಸಹೋದರ ಸಂಡೂರ್ ಎಜುಕೇಶನ್ ಸೊಸೈಟಿಯ ಕಲೆ, ವಿಜ್ಞಾನ ಮತ್ತು ವಾಣಿಜ್ಯ ಕಾಲೇಜು ನೋಡಿಕೊಳ್ಳುತ್ತಿದ್ದಾರೆ.

ಸಂತೋಷ್ ಲಾಡ್ ಕುಟುಂಬವು 1950 ರ ದಶಕದಿಂದಲೂ ಗಣಿಗಾರಿಕೆ ಉದ್ಯಮದಲ್ಲಿ ತೊಡಗಿಸಿಕೊಂಡಿದ್ದರಿಂದ ಶ್ರೀಮಂತ ಮನೆತನದಿಂದ ಬಂದವರು. ರಾಜಕೀಯ ಅವರಿಗೆ ಸೇವೆಗಾಗಿ ಮಾತ್ರ. ಸಂತೋಷ್ ಲಾಡ್ ಅವರು ಕ್ರೀಡಾ ಸಮುದಾಯದ ಸಕ್ರಿಯ ಸದಸ್ಯರಾಗಿದ್ದರು ಮತ್ತು ಸ್ಥಳೀಯ ಪಂದ್ಯಾವಳಿ ಮತ್ತು ರಾಜ್ಯ ಮಟ್ಟದ ಸ್ಪರ್ಧೆಗಳಲ್ಲಿ ಸಕ್ರಿಯವಾಗಿ ಭಾಗವಹಿಸಿದ್ದರು. ಅವರ ಯು–21 ಕ್ರಿಕೆಟ್ ರಾಜ್ಯ ಮಟ್ಟದ ಪಂದ್ಯಾವಳಿಯಲ್ಲಿ ತುಮಕೂರು ವಲಯವನ್ನು ಪ್ರತಿನಿಧಿಸುವ ತಂಡದ ಸದಸ್ಯರಾಗಿ ಮತ್ತು ನಾಯಕರಾಗಿ ಭಾಗವಹಿಸಿದ್ದರು.

## ರಾಜಕೀಯ ವೃತ್ತಿಜೀವನ

ಸಂಡೂರು ತಾಲೂಕಿನಿಂದ ಸಲಹೆಗಾರರಾಗಿ ರಾಜಕೀಯ ಜೀವನ ಆರಂಭಿಸಿದ ಸಂತೋಷ್ ಲಾಡ್, ತಾಲೂಕಾ ಪಂಚಾಯತಿ ಚುನಾವಣೆಗಳಲ್ಲಿ ಸ್ಪರ್ಧಿಸಿ ಎರಡು ಬಾರಿ ಆಯ್ಕೆಯಾಗಿ, ತಾವು ಪ್ರತಿನಿಧಿಸುವ ಪಕ್ಷ ಬಹುಮತ ಗಳಿಸಲು ಕೊಡುಗೆ ನೀಡಿದರು.

ಅಂದಿನ ಕಾಲದಲ್ಲಿ ಜನತಾ ದಳದೊಂದಿಗೆ ಗುರುತಿಸಿಕೊಂಡಿದ್ದು, ಸಂಡೂರಿನ ಕಾಂಗ್ರೆಸ್ ಪಕ್ಷದ ಪ್ರಬಲ ಸ್ಪರ್ಧಿ ವಿರುದ್ಧ ಸಂತೋಷ್ ಲಾಡ್ ಶಾಸಕ ಚುನಾವಣೆಯಲ್ಲಿ ಸ್ಪರ್ಧಿಸಿ ಸಂಡೂರ್ ಕ್ಷೇತ್ರವನ್ನು ಗೆದ್ದ ಜನತಾದಳದ ಪ್ರಥಮ ಪ್ರತಿನಿಧಿ ಎಂಬ ಹೆಗ್ಗಳಿಕೆಗೆ ಪಾತ್ರರಾದರು. ಆಗ ಅವರಿಗೆ ಕೇವಲ 29 ವರ್ಷ ವಯಸ್ಸು. ಯುವಕರಾಗಿದ್ದ ಅವರು ಈ ಚುನಾವಣೆಯಲ್ಲಿ ದಾಖಲೆಯ ಮತಗಳ ಅಂತರದಿಂದ ಜಯಗಳಿಸಿದರು.

2008ರಲ್ಲಿ ಕಾಂಗ್ರೆಸ್ ಪಕ್ಷದೊಂದಿಗೆ ಗುರುತಿಸಿಕೊಂಡ ಅವರು, ಧಾರವಾಡ ಜಿಲ್ಲೆಯ ಕಲಘಟಗಿ ಕ್ಷೇತ್ರದಿಂದ ಸ್ಪರ್ಧಿಸಿ ಗೆಲುವು ಸಾಧಿಸಿದರು.

2013 ರ ವಿಧಾನಸಭಾ ಚುನಾವಣೆಯಲ್ಲಿ, ಸಂತೋಷ್ ಲಾಡ್



ಸಿಎಂ ಸಿದ್ದರಾಮಯ್ಯ ಅವರರೊಂದಿಗೆ ಸಚಿವ ಸಂತೋಷ್ ಲಾಡ್ ದಂಪತಿ

ಅವರು ಪುನಃ ಕಲಘಟಗಿ ಕ್ಷೇತ್ರದಿಂದ ಸ್ಪರ್ಧಿಸಿ, 45,000 ಕ್ಕೂ ಹೆಚ್ಚು ಮತಗಳ ಅಂತರದಿಂದ ಆಯ್ಕೆಯಾದರು. ಅನಂತರ 2018ರಲ್ಲೂ ಕಲಘಟಗಿಯಿಂದ ಸತತವಾಗಿ ಎರಡನೇ ಬಾರಿಗೆ ಮತ್ತು ಮೂರನೇ ಬಾರಿಗೆ ಗೆಲುವು ಸಾಧಿಸಿದರು.

## ಸವಾಲಿನ ಕೆಲಸ

2013ರಲ್ಲಿ ಸಂತೋಷ್ ಲಾಡ್ ಅವರು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ಮೂಲಸೌಕರ್ಯ ಖಾತೆಯ ರಾಜ್ಯ ಸಚಿವರಾಗಿ ಸೇವೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಉತ್ತರಾಖಂಡ ರಾಜ್ಯದಲ್ಲಿ ಭಾರೀ ಮಳೆ ಮತ್ತು ಪ್ರವಾಹದಿಂದ ಚಾರ್‌ಧಾಮ್ ಯಾತ್ರೆಗೆ ತೆರಳಿದ್ದ ಕರ್ನಾಟಕದ ಯಾತ್ರಿಕರು ಸಿಲುಕಿಕೊಂಡಿದ್ದರು. ಆಗ ಸಚಿವ ಸಂತೋಷ್ ಲಾಡ್ ಅವರ ನೇತೃತ್ವದಲ್ಲಿ, ಹೇಮಂತ್ ನಿಂಬಾಳ್ಕರ್, ಕರೀಗೌಡ ಮತ್ತು ನವೀನ್‌ರಾಜ್ ಸಿಂಗ್ ತಂಡದೊಂದಿಗೆ ಉತ್ತರಾಖಂಡದ ಅತ್ಯಂತ ಕೆಟ್ಟ ಪ್ರವಾಹ ಪ್ರದೇಶದಲ್ಲಿ ರಕ್ಷಣಾ ಕಾರ್ಯಾಚರಣೆಯ ಮೇಲ್ವಿಚಾರಣೆ ಮಾಡಲು ರಾಜ್ಯದ ಪ್ರತಿನಿಧಿಯಾಗಿ ನೇಮಿಸಲಾಯಿತು. ಹತ್ತು ದಿನಗಳ ರಕ್ಷಣಾ ಕಾರ್ಯಾಚರಣೆಯ ನಂತರ, ತಂಡವು 14 ಜನರನ್ನು ಹೊರತುಪಡಿಸಿ, ಎಲ್ಲರನ್ನೂ ರಕ್ಷಿಸಲು ಸಾಧ್ಯವಾಯಿತು, ಅವರಿಗಾಗಿ ವ್ಯಾಪಕ ಹುಡುಕಾಟವನ್ನೂ ಸಚಿವರು ನಡೆಸಿದರು.



ಅಪಘಾತಕ್ಕೀಡಾದವರನ್ನು ತಮ್ಮ ವಾಹನದಲ್ಲಿ ಆಸ್ಪತ್ರೆಗೆ ಕರೆದೊಯ್ದ ಸಚಿವ ಲಾಡ್

## ರಾಜಕೀಯ

* 1998 – ಚುನಾಯಿತ ಕೌನ್ಸಿಲರ್, ಸಂಡೂರು ಪಟ್ಟಣ ಪಂಚಾಯತ್
* 2003 – ಜನತಾದಳ (ಜಾತ್ಯತೀತ) ಪ್ರತಿನಿಧಿಸಿ ಸಂಡೂರಿನಿಂದ ಚುನಾಯಿತ ಶಾಸಕ
* 2007 – ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ಸೇರಿದರು
* 2008 – ಭಾರತೀಯ ರಾಷ್ಟ್ರೀಯ ಕಾಂಗ್ರೆಸ್‌ನಿಂದ ಧಾರವಾಡ ಜಿಲ್ಲೆಯ ಕಲಘಟಗಿಯಿಂದ ಸ್ಪರ್ಧಿಸಿ ಆಯ್ಕೆಯಾದರು.
* 2010 – ಕೆಪಿಸಿಸಿ ಪ್ರಧಾನ ಕಾರ್ಯದರ್ಶಿಯಾಗಿ ನೇಮಕ
* 2010 ಕೆಪಿಸಿಸಿಯಿಂದ ರಾಯಚೂರು ಜಿಲ್ಲಾ ಉಸ್ತುವಾರಿಯಾಗಿ ನೇಮಕ
* 2013 – ಕಲಘಟಗಿಯಿಂದ ಶಾಸಕರಾಗಿ ಸತತ ಎರಡನೇ ಬಾರಿಗೆ ಗೆಲುವು
* 2013 ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ಮೂಲಸೌಕರ್ಯ ರಾಜ್ಯ ಸಚಿವರಾಗಿ ನೇಮಕಗೊಂಡರು
* 2018 ಮತ್ತು 2023 ರ ವಿಧಾನಸಭಾ ಚುನಾವಣೆಗಳಲ್ಲಿ ಪುನಃ ಕಲಘಟಗಿ ಕ್ಷೇತ್ರದಿಂದ ಆಯ್ಕೆಯಾಗುವ ಮೂಲಕ ಜನಪ್ರಿಯ ಶಾಸಕರೆನಿಸಿಕೊಂಡ ಸಂತೋಷ್ ಲಾಡ್ ಅವರು, ಕಾರ್ಮಿಕ ಖಾತೆಯೊಂದಿಗೆ ಸದ್ಯ ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವರಾಗಿಯೂ ಕಾರ್ಯನಿರ್ವಹಿಸುತ್ತಿದ್ದಾರೆ.

❖

## ನಿತ್ಯ ಪಂಚಾಂಗ 16.09.2024 ಸೋಮವಾರ



ಶ್ರೀ ಕ್ರೋಧಿ ನಾಮ ಸಂವತ್ಸರ,
ಉತ್ತರಾಯಣ–ವಸಂತ ಋತು,
ಚಾಂದ್ರಮಾನ, ಭಾದ್ರಪದ ಶುದ್ಧ

ತ್ರಯೋದಶಿ, ಧನಿಷ್ಠ ನಕ್ಷತ್ರ,
ಊದ್ ಮಿಲಾದ್.
ಅನಂತಪದ್ಮನಾಭ ವ್ರತ,
ಅನಧ್ಯಯನ ಚತುಷ್ಟಯ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 – 12.00 | 1.30 – 3.00 |
| ಮಂಗಳ | 3.00 – 4.30 | 9.00 – 10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 – 12.00 |
| ಗುರು | 1.30 – 3.00 | 6.00 – 7.30 | 9.00 – 10.30 |
| ಶುಕ್ರ | 10.30 – 12.00 | 3.00 – 4.30 | 7.30 – 9.00 |
| ಶನಿ | 9.00 – 10.30 | 1.30 – 3.00 | 6.00 – 7.30 |

# ನಾಗಮಂಗಲ ಗಲಭೆ ಪ್ರಕರಣ ಕೇರಳ ಮೂಲದ ಇಬ್ಬರ ಸೆರೆ ಚಲುವರಾಯಸ್ವಾಮಿ ಸ್ಪಷ್ಟನೆ




**ಮಂಡ್ಯ, ಸೆ.15–** ಮಂಡ್ಯ ಜಿಲ್ಲೆಯ ನಾಗಮಂಗಲ ತಾಲೂಕಿನಲ್ಲಿ ಗಣೇಶ ವಿಸರ್ಜನೆ ವೇಳೆ ನಡೆದ ಗಲಭೆ ಪ್ರಕರಣಕ್ಕೆ ಸಂಬಂಧಿಸಿದಂತೆ ಕೇರಳ ಮೂಲದ ಇಬ್ಬರನ್ನು ಬಂಧಿಸಲಾಗಿದೆ ಎಂದು ಸಚಿವ ಚಲುವರಾಯ ಸ್ವಾಮಿ ಸ್ಪಷ್ಟನೆ ನೀಡಿದರು.

ಇಂದು ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ನಾಗಮಂಗಲ ಗಲಭೆಯಲ್ಲಿ ಸಂಬಂಧ ಅಲ್ಲೇ ಬೇಕರಿಯಲ್ಲಿ ಕೆಲಸ ಮಾಡುತ್ತಿದ್ದ ಇಬ್ಬರು ಕೇರಳ ಮೂಲದವರನ್ನು ಘಟನೆಯಲ್ಲಿ ಭಾಗಿಯಾಗಿದ್ದಾರೆ ಎಂದು ಬಂಧಿಸಲಾಗಿದೆ. ಹಾಗೆಂದು ಕೇರಳದವರು ಗಲಭೆಗೆ ಬಂದು ಹೋಗಿದ್ದಾರೆ ಎಂದಲ್ಲ. ಗಲಭೆ ಸಂಬಂಧ ಸಂಪೂರ್ಣವಾಗಿ ವರದಿ ತರಿಸಿಕೊಳ್ಳೋಣ ಎಂದು ಸಚಿವ ಚಲುವರಾಯಸ್ವಾಮಿ ಹೇಳಿದರು.

ಗಣೇಶಮೂರ್ತಿ ನಿಮಜ್ಜನ ಮೆರವಣಿಗೆ ಎರಡು ಕೋಮುಗಳ ನಡುವೆ ಘರ್ಷಣೆ ಆಗಲಿಕ್ಕೆ ಅವಕಾಶವಾಗಿದೆ. ನಾಳೆ ಕೂಡ ಮುಸ್ಲಿಂ ಹಬ್ಬ ಈದ್ ಮಿಲಾದ್ ಇದೆ. ಅಂಗಡಿಗಳಿಗೆ ಬೆಂಕಿಹಾಕಿದ್ದು ಮತ್ತು ಕಲ್ಲು ತೂರಲು ಮೊದಲು ಪ್ರಾರಂಭ ಮಾಡಿದ್ದು ಯಾರು ಎಂಬ ಮಾಹಿತಿ ಬೇಕಾಗುತ್ತದೆ. ಒಟ್ಟಾರೆ ಎರಡೂ ಕೋಮಿನವರು ಒಟ್ಟಾಗಿ ಎಲ್ಲಾ ಹಬ್ಬಗಳನ್ನು ಮಾಡ ಬೇಕೆಂಬ ತೀರ್ಮಾನವನ್ನು ಸಭೆಯಲ್ಲಿ ತೆಗೆದುಕೊಂಡಿದ್ದೇವೆ ಎಂದು ತಿಳಿಸಿದರು. ಮಂಡ್ಯ ಜಿಲ್ಲೆಯ ನಾಗಮಂಗಲ ಹಿಂಸಾಚಾರ ಕುರಿತಂತೆ ಸಿಐಡಿ ತನಿಖೆ ನಡೆಸುವ ಬಗ್ಗೆ ಚಿಂತನೆ ನಡೆಸಲಾಗಿದೆ ಎಂದು ಕೃಷಿ ಹಾಗೂ ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವ ಎನ್. ಚಲುವರಾಯಸ್ವಾಮಿ, ತಿಳಿಸಿದ್ದಾರೆ.

### ಡಾ. ಸರ್.ಎಂ.ವಿಶ್ವೇಶ್ವರಯ್ಯ ಜನ್ಮದಿನ

# ಎಂಜಿನಿಯರ್‌ಗಳಿಗೆ ಪ್ರಧಾನಿ ಮೋದಿ, ಅಮಿತ್ ಶಾ ಅವರಿಂದ ಶುಭ ಹಾರೈಕೆ



**ಬೆಂಗಳೂರು, ಸೆ.15–** ಎಂಜಿನಿಯರ್‌ಗಳ ದಿನವನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು. ಮೈಸೂರು ಸಂಸ್ಥಾನದ ದಿವಾನರಾಗಿ ಸೇವೆ ಸಲ್ಲಿಸಿದ ವಿಶ್ವವಿಖ್ಯಾತ ಇಂಜಿನಿಯರ್ ಡಾ. ಸರ್. ಎಂ.ವಿಶ್ವೇಶ್ವರಯ್ಯ ಅವರ ಜನ್ಮದಿನದ ಪ್ರಯುಕ್ತ ಈ ದಿನವನ್ನು ಆಚರಿಸಲಾಯಿತು.

ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ ಸೇರಿದಂತೆ ಗಣ್ಯರು ದೇಶದ ಎಂಜಿನಿಯರ್‌ಗಳಿಗೆ ಶುಭ ಕೋರಿದ್ದಾರೆ.

ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಪ್ರಧಾನಿ ನರೇಂದ್ರ ಮೋದಿ, ವಿವಿಧ ಕ್ಷೇತ್ರಗಳಾದ್ಯಂತ ಪ್ರಗತಿ, ನಾವೀನ್ಯತೆ ಮತ್ತು ನಿರ್ಣಾಯಕ ಸವಾಲುಗಳನ್ನು ಎದುರಿಸುವಲ್ಲಿ ಎಂಜಿನಿಯರ್‌ಗಳ ಮಹತ್ವದ ಕೊಡುಗೆಗಳನ್ನು ಸ್ಮರಿಸಿದರು.

ಸರ್ ಎಂ.ವಿಶ್ವೇಶ್ವರಯ್ಯ ಅವರಿಗೆ ಗೌರವ ಸಲ್ಲಿಸಿದ ಅವರು, ಎಂಜಿನಿಯರಿಂಗ್ ಕ್ಷೇತ್ರಕ್ಕೆ ಅವರ ಕೊಡುಗೆಗಳು ಸ್ಫೂರ್ತಿ ನೀಡುತ್ತಲೇ ಇರುತ್ತವೆ ಎಂದು ಹೇಳಿದರು. ದೂರದೃಷ್ಟಿಯುಳ್ಳ ಎಂಜಿನಿಯರ್ ಭಾರತರತ್ನ, ಸರ್ ಎಂ.ವಿಶ್ವೇಶ್ವರಯ್ಯ ಅವರಿಗೆ ಗೌರವ ನಮನ. ಅವರ ನಿರಂತರ ಸೇವಾ ಪರಂಪರೆಯು ಭಾರತದ ಭವಿಷ್ಯವನ್ನು ರೂಪಿಸುವಾಗ ಎಂಜಿನಿಯರ್ಗಳಿಗೆ ಸ್ಫೂರ್ತಿ ನೀಡುತ್ತದೆ ಎಂದು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ. ಕೇಂದ್ರ ಸಚಿವ ಕುಮಾರಸ್ವಾಮಿ ಸಾಮಾಜಿಕ ಜಾಲತಾಣದಲ್ಲಿ ಇಂಜಿನಿಯರ್‌ಗೆ ಶುಭ ಹಾರೈಸಿದ್ದಾರೆ.

ನಾಡಿನ ನನ್ನೆಲ್ಲಾ ಶ್ರಮಜೀವಿ ಅಭಿಯಂತರ ಮಿತ್ರರಿಗೆ "ರಾಷ್ಟ್ರೀಯ ಅಭಿಯಂತರರ ದಿನ"ದ ಶುಭಾಶಯಗಳು. ಕರ್ನಾಟಕದ ನವನಿರ್ಮಾಣಕ್ಕೆ ನಿಮ್ಮ ಸೇವೆ–ಸಹಕಾರ ನಮ್ಮ ಸರ್ಕಾರದ ಜೊತೆ ಸದಾ ಇರಲಿ ಎಂದು ಆಶಿಸುತ್ತೇನೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಎಕ್ಸ್‌ನಲ್ಲಿ ತಿಳಿಸಿದ್ದಾರೆ.

ವಿಜ್ಞಾನ–ತಂತ್ರಜ್ಞಾನ, ನೀರಾವರಿ, ವಿದ್ಯುತ್ ಉತ್ಪಾದನೆ ಹೀಗೆ ಆಧುನಿಕ ಮೈಸೂರು ರಾಜ್ಯ ನಿರ್ಮಾಣದಲ್ಲಿ ಸರ್.ಎಂ.ವಿ ಅವರ ಅನನ್ಯ ಕೊಡುಗೆಯನ್ನು ಈ ದಿನ ಹೆಮ್ಮೆಯಿಂದ ಸ್ಮರಿಸುತ್ತೇನೆ ಎಂದು ತಿಳಿಸಿದ್ದಾರೆ.

# ಬೆಂಗಳೂರಲ್ಲಿ ಸ್ಕೈಡೆಕ್ ನಿರ್ಮಾಣದ ಕನಸು– ಡಿಸಿಎಂ ಡಿಕೆಶಿ ನ್ಯೂಯಾರ್ಕ್‌ನ 'ದ ಎಡ್ಜ್' ಸ್ಕೈಡೆಕ್ ವೀಕ್ಷಣೆ



**ನ್ಯೂಯಾರ್ಕ್, ಸೆ.15–**ಪ್ರವಾಸಿಗರ ಆಕರ್ಷಣೆಗಾಗಿ ಬೆಂಗಳೂರಿನಲ್ಲಿ ಸ್ಕೈ ಡೆಕ್ ನಿರ್ಮಾಣ ಮಾಡುವ ಕನಸು ಕಂಡಿರುವ ಡಿಸಿಎಂ ಡಿಕೆ ಶಿವಕುಮಾರ್ ಅವರು ಅಮೆರಿಕ ಪ್ರವಾಸ ಕೈಗೊಂಡಿದ್ದು, ಅಲ್ಲಿ ನ್ಯೂಯಾರ್ಕ್ ನಗರದ ಹಡ್ಸನ್ ಯಾರ್ಡ್ಸ್‌ನಲ್ಲಿರುವ "ದ ಎಡ್ಜ್" ಸ್ಕೈ ಡೆಕ್‌ಗೆ ಭೇಟಿ ನೀಡಿ, ಅದರ ವಾಸ್ತುಶಿಲ್ಪ, ವಿನ್ಯಾಸ ಮತ್ತಿತರ ವಿಚಾರಗಳನ್ನು ಪರಿಶೀಲಿಸಿದ್ದಾರೆ. ಡಿಕೆಶಿ ಅವರು ಪತ್ನಿ ಉಷಾ ಅವರೊಂದಿಗೆ ಅಮೆರಿಕ ಪ್ರವಾಸದಲ್ಲಿದ್ದು, ಅಲ್ಲಿನ ಸ್ಕೈಡೆಕ್‌ನ ಮನೋಹರ ನೋಟವನ್ನು ಕಣ್ತುಂಬಿಕೊಂಡಿದ್ದಾರೆ.

ಹಡ್ಸನ್ ಯಾರ್ಡ್ಸ್ 30 ವೆಸ್ಟರ್ನ್ ಹೆಮಿಸ್ಫರ್ ನಲ್ಲಿರುವ ಕಟ್ಟಡದ 100 ನೇ ಮಹಡಿಯಲ್ಲಿ 7500 ಚದರಡಿಯ ಈ ಡೆಕ್ ಅನ್ನು ವೀಕ್ಷಣೆ ಮಾಡಿದ್ದಾರೆ. ಈ ಡೆಕ್ ನೆಲದಿಂದ ಹಿಡಿದು ಸೀಲಿಂಗ್ ವರೆಗೂ ಪಾರದರ್ಶಕ ಗಾಜಿನಿಂದ ಕೂಡಿದ್ದು, ನ್ಯೂಯಾರ್ಕ್ ಸಿಟಿಯ ಆಕರ್ಷಣೆಗಳಲ್ಲೊಂದಾಗಿದೆ. ಬೆಂಗಳೂರಿನ ಸ್ಕೈ ಡೆಕ್ ನಿರ್ಮಾಣ ವಿಚಾರವಾಗಿ ಶಿವಕುಮಾರ್ ಅವರು ಖ್ಯಾತ ವಾಸ್ತುಶಿಲ್ಪ ವಿನ್ಯಾಸಗಾರ ಡಾ. ಬಾಬು ಕೀಲಾರ ಅವರೊಂದಿಗೆ ಚರ್ಚಿಸಿದ್ದಾರೆ.

ಈ ಪ್ರವಾಸದಲ್ಲಿ ಶಿವಕುಮಾರ್ ಅವರು ಕೀಲಾರ ಅವರ ಜತೆಗೂಡಿ ಹಡ್ಸನ್ ಯಾರ್ಡ್ ಸೇರಿದಂತೆ ಹಲವು ಸ್ಕೈಡೆಕ್ ಗಗನಚುಂಬಿ ಕಟ್ಟಡಗಳ ವೀಕ್ಷಣೆ ನಡೆಸಿದ್ದಾರೆ. ನ್ಯೂಯಾರ್ಕ್‌ನ ವಿಶ್ವ ವಾಣಿಜ್ಯ ಕಟ್ಟಡ, ಚೀನಾದ ಶಾಂಘೈ ಟವರ್, ದುಬೈನ ಬುರ್ಜ್ ಖಲೀಫಾದ ವಿನ್ಯಾಸ ಮಾಡಿರುವ ಎಚ್‌ಓಕೆಯ ವಾಸ್ತುಶಿಲ್ಪ ವಿನ್ಯಾಸಗಾರ ಕೆನ್ನೆತ್ ಡ್ರಕರ್ ಅವರೊಂದಿಗೆ ಡಿಸಿಎಂ ಚರ್ಚೆ ನಡೆಸಿದ್ದಾರೆ.

ಈ ವೇಳೆ ಡಿಸಿಎಂ, "ಅತ್ಯಾಧುನಿಕ ತಂತ್ರಜ್ಞಾನ ಹಾಗೂ ಸುಸ್ಥಿರ ಆಲೋಚನೆಗಳನ್ನು ಒಟ್ಟುಗೂಡಿಸಿದರೆ ಬೆಂಗಳೂರಿನ ಸ್ಕೈಲೈನ್‌ಗೆ ಹೊಸ ವ್ಯಾಖ್ಯಾನ ನೀಡುವುದರ ಜೊತೆಗೆ ನಗರಾಭಿವೃದ್ಧಿಯ ಗುಣಮಟ್ಟವನ್ನು ಹೆಚ್ಚಿಸಲಿದೆ" ಎಂದು ಹೇಳಿದ್ದಾರೆ.

# ನಾಗಮಂಗಲಕ್ಕೆ ಇಂದು ಬಿಜೆಪಿ ಸತ್ಯಶೋಧನಾ ಸಮಿತಿ ಭೇಟಿ

**ಬೆಂಗಳೂರು, ಸೆ.15–**ಬಿಜೆಪಿ ಸತ್ಯಶೋಧನಾ ಸಮಿತಿಯು ಸೋಮವಾರ ನಾಗಮಂಗಲಕ್ಕೆ ಭೇಟಿ ಕೊಡಲಿದೆ. ಅಲ್ಲಿನ ಮಾಹಿತಿಯನ್ನು ಪಡೆಯಲಿದೆ ಎಂದು ರಾಜ್ಯದ ಮಾಜಿ ಉಪಮುಖ್ಯಮಂತ್ರಿ ಡಾ. ಸಿ.ಎನ್. ಅಶ್ವತ್ಥನಾರಾಯಣ್ ತಿಳಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನನ್ನ ನೇತೃತ್ವದಲ್ಲಿ ಬಿಜೆಪಿ ಸತ್ಯಶೋಧನಾ ಸಮಿತಿ ರಚಿಸಿದ್ದು, ಮಾಜಿ ಸಚಿವರು ಮತ್ತು ಬಿಜೆಪಿ ರಾಜ್ಯ ಉಪಾಧ್ಯಕ್ಷ ಬೈರತಿ ಬಸವರಾಜ್, ಮಾಜಿ ಸಚಿವ ಕೆ.ಸಿ. ನಾರಾಯಣಗೌಡ, ಬಿಜೆಪಿ ರಾಜ್ಯ ಕಾರ್ಯದರ್ಶಿ ಲಕ್ಷ್ಮೀ ಅಶ್ವಿನ್‌ಗೌಡ, ನಿವೃತ್ತ ಐಪಿಎಸ್ ಅಧಿಕಾರಿ ಭಾಸ್ಕರ್ ರಾವ್ ಅವರನ್ನು ಸಮಿತಿ ಒಳಗೊಂಡಿದೆ ಎಂದರು.

ನಾಗಮಂಗಲದಲ್ಲಿ ಗಣೇಶೋತ್ಸವ ಸಂದರ್ಭದಲ್ಲಿ ಗೃಹ ಇಲಾಖೆ ಸಂಪೂರ್ಣ ವಿಫಲವಾಗಿದೆ. ಪ್ರಾರಂಭದಲ್ಲಿ ಅದೇನೂ ಇಲ್ಲ ಎಂಬಂತೆ ಹೇಳಿಕೆ ಕೊಟ್ಟರು. ನಂತರ ಗುಪ್ತಚರ ಮುಖ್ಯಸ್ಥರನ್ನು ವರ್ಗಾಯಿಸಿದರು. ಇನ್‌ಸ್ಪೆಕ್ಟರ್‌ರನ್ನು ಅಮಾನತು ಮಾಡಿದ್ದು, ಕಾನೂನು– ಸುವ್ಯವಸ್ಥೆ ನಿರ್ವಹಿಸುವಲ್ಲಿನ ವೈಫಲ್ಯವು ನಾಗಮಂಗಲ ಘ ಟ ನ ಮೂಲಕ ವ್ಯಕ್ತವಾಗಿದೆ ಎ ೦ ದ ು ತಿ ಳಿ ಸಿ ದ ರ ು . ಕೇರಳದವರು ಇದರ ಹಿಂದಿದ್ದು, ಎಸ್‌ಡಿ ಪಿ ಐ ನ ವ ರು ಎ ೦ ಬ ಅನುಮಾನ ಗ ಳಿ ವ ಎ ೦ ದ ು ವಿವರಿಸಿದರು.



ನಾಗಮಂಗಲದಲ್ಲಿ ಒಂದು ಕೋಮಿನವರು ಪ್ರಚೋದನೆ ಮಾಡಿದ್ದಾರೆ. ನಮ್ಮ ಸಂಸ್ಕೃತಿ ಎನಿಸಿದ ವಿನಾಯಕನ ಚತುರ್ಥಿ ಕಾರ್ಯಕ್ರಮವು ದೇಶದ ಸದೃಢತೆಗೆ ಶಕ್ತಿ ತುಂಬುತ್ತದೆ. ಅಂಥ ಸಂದರ್ಭದಲ್ಲಿ ಅಡಚಣೆ, ಅನವಶ್ಯಕವಾಗಿ ತೊಂದರೆ ಕೊಡುತ್ತಿದ್ದು, ಇದಕ್ಕೆ ಗೃಹ ಇಲಾಖೆ ಬೆಂಬಲ ಕೊಡುತ್ತಿದೆ ಎ ೦ ದ ು ಟೀಕಿಸಿದರು. ಈ ಸರಕಾರ ಒಂದು ವರ್ಗ, ಒಂದು ಧರ್ಮಕ್ಕೆ ಸೀಮಿತವಾಗಿ ವರ್ತಿಸುತ್ತಿದೆ.

ಎಷ್ಟೋ ಕಡೆ ಗಣೇಶಮೂರ್ತಿ ಇಡಲು ಬಿಟ್ಟಿಲ್ಲ. ಮೆರವಣಿಗೆಗೆ ಕಡಿವಾಣ ಹಾಕಿದ್ದಾರೆ. ಫ್ರೀಡಂ ಪಾರ್ಕಿನಲ್ಲಿ ಗಣೇಶ ಮೂರ್ತಿಯನ್ನೇ ಅರೆಸ್ಟ್ ಮಾಡಿದ್ದಾರೆ ಎಂದು ಆಕ್ಷೇಪಿಸಿದರು.

ಕರ್ನಾಟಕದಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದ ದಿನದಿಂದ ರಾಜ್ಯದಲ್ಲಿ ಕಾನೂನು, ಸುವ್ಯವಸ್ಥೆ ಕಾಪಾಡಲು ಸಂಪೂರ್ಣವಾಗಿ ವಿಫಲವಾಗಿದೆ ಎಂದು ಟೀಕಿಸಿದರು. ನೂರಾರು ಘಟನೆಗಳು ಕಣ್ಣೆದುರು ಇವೆ. ತುಷ್ಟೀಕರಣದ ಪರಿಣಾಮ, ಆಡಳಿತದ ಮೇಲೆ ಹಿಡಿತ– ಸ್ಪಷ್ಟತೆ ಇಲ್ಲದ ಕಾರಣ ಸಮಾಜದಲ್ಲಿ ತುಂಬ ಗೊಂದಲ, ಭಯ, ಅತೃಪ್ತಿಯ ವಾತಾವರಣ ನಿರ್ಮಾಣ ಮಾಡಿದ್ದಾರೆ ಎಂದು ಆರೋಪಿಸಿದರು..

# ಪ್ರಜಾಪ್ರಭುತ್ವ ಮಹತ್ವದ ಬಗ್ಗೆ ಮುಂದಿನ ಪೀಳಿಗೆಗೆ ಅರಿವು ಮೂಡಿಸುವುದು ನಮ್ಮ ಕರ್ತವ್ಯ: ಸಚಿವ ಎನ್.ಎಸ್. ಬೋಸರಾಜು



**ಮಡಿಕೇರಿ, ಸೆ.15–** ಸ್ವಾತಂತ್ರ್ಯ, ಸಮಾನತೆ ಮತ್ತು ಸಹೋದರತ್ವದ ಅಂಶಗಳ ಮೂಲಕ ನಾವೆಲ್ಲರೂ ಒಂದೇ ಎಂಬ ಭಾವನೆಯನ್ನು ಮೂಡಿಸಿರುವ ಪ್ರಜಾಪ್ರಭುತ್ವದ ಮಹತ್ವದ ಬಗ್ಗೆ ನಮ್ಮ ಮುಂದಿನ ಪೀಳಿಗೆಯಲ್ಲಿ ಅರಿವು ಮೂಡಿಸಿ ಅವರನ್ನ ಹೆಚ್ಚು ಜಾಗೃತರನ್ನಾಗಿಸುವುದು ನಮ್ಮ ಕರ್ತವ್ಯವಾಗಿದೆ ಎಂದು ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೊಡಗು ಜಿಲ್ಲಾ ಉಸ್ತುವಾರಿ ಸಚಿವರಾದ ಎನ್ ಎಸ್ ಭೋಸರಾಜು ಹೇಳಿದರು.

ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನದ ಅಂಗವಾಗಿ ಕರ್ನಾಟಕ ಸರಕಾರದ ವತಿಯಿಂದ ಆಯೋಜಿಸಲಾಗಿದ್ದ ಉದ್ದದ ಮಾನವ ಸರಪಳಿ ಕಾರ್ಯಕ್ರಮಕ್ಕೆ ಕೊಡಗು ಜಿಲ್ಲೆಯ ಮಡಿಕೇರಿಯಲ್ಲಿ ಚಾಲನೆ ನೀಡಿ ಮಾತನಾಡಿದರು.

ಪ್ರಜಾಪ್ರಭುತ್ವ ಅನುಷ್ಠಾನಕ್ಕೆ ಬಂದ ನಂತರ ದೇಶದ ಜನರ ಬದುಕು ಬಹಳಷ್ಟು ಸುಧಾರಿಸಿದೆ. ಜಾತಿ, ಮತ, ಲಿಂಗ, ಧರ್ಮ, ಭೇದಗಳನ್ನು ನಿರ್ಮೂಲನೆ ಮಾಡಿ ಸರ್ವರಿಗೂ ಸಾಮಾಜಿಕ ಆರ್ಥಿಕ ಹಾಗೂ ರಾಜಕೀಯ ನ್ಯಾಯ ಒದಗಿಸುವ ವ್ಯವಸ್ಥೆಯಾಗಿ ಮುನ್ನಡೆಯುತ್ತಿದೆ. ಸ್ವಾತಂತ್ರ್ಯ, ಸಮಾನತೆ ಮತ್ತು ಸಹೋದರತ್ವದ ಅಂಶಗಳು ಜನರಲ್ಲಿ ನಾವೆಲ್ಲರೂ ಒಂದೇ ಎಂಬ ಭಾವನೆಯನ್ನು ಮೂಡಿಸುವ ಆಶಯವನ್ನು ಖಾತ್ರಿ ಪಡಿಸಿದೆ. ಇಂತಹ ಮಹತ್ವದ ಪ್ರಜಾಪ್ರಭುತ್ವದ ಬಗ್ಗೆ ನಮ್ಮ ಮುಂದಿನ ಪೀಳಿಗೆಯಲ್ಲಿ ಅರಿವು ಮೂಡಿಸಿ, ಅವರನ್ನು ಹೆಚ್ಚು ಜಾಗೃತರನ್ನಾಗಿಸುವುದು ನಮ್ಮ ಕರ್ತವ್ಯವಾಗಿದೆ ಎಂದು ಹೇಳಿದರು.

ಕೊಡಗು ಜಿಲ್ಲೆಯಲ್ಲಿ ದಕ್ಷಿಣ ಕನ್ನಡ ಜಿಲ್ಲೆಯ ಗಡಿಭಾಗವಾದ ಸಂಪಾಜೆಯಿಂದ ಪ್ರಾರಂಭಿಸಿ – ಹಾಸನ ಜಿಲ್ಲೆಯ ಗಡಿಭಾಗವಾದ ಶಿರಂಗ ಗ್ರಾಮದವರೆಗೆ 77 ಕಿಲೋಮೀಟರ್ ಬೈಕ್ ರಾಲಿ ಹಾಗೂ ಮಾನವ ಸರಪಳಿಯಲ್ಲಿ ಭಾಗವಹಿಸುತ್ತಿರುವುದು ಸಂತಸದ ಸಂಗತಿಯಾಗಿದೆ. ಸದರಿ ಮಾನವ ಸರಪಳಿ ರಚನೆಯಲ್ಲಿ ಜಿಲ್ಲೆಯ ಎಲ್ಲಾ ಪ್ರಜ್ಞಾವಂತ ನಾಗರಿಕ ಬಂಧುಗಳು, ವಿದ್ಯಾರ್ಥಿಗಳು, ಶಿಕ್ಷಕರು, ವಿವಿಧ ಸಂಘ–ಸಂಸ್ಥೆಗಳ ಪ್ರತಿನಿಧಿಗಳು, ಎಲ್ಲ ಗೌರವಾನ್ವಿತ ಚುನಾಯಿತ ಪ್ರತಿನಿಧಿಗಳು ಸೇರಿದಂತೆ ಸುಮಾರು 30,000 ಜನರು ಭಾಗವಹಿಸಿ ಈ ಬೃಹತ್ ಮಾನವ ಸರಪಳಿ ನಿರ್ಮಾಣ ಕಾರ್ಯಕ್ಕೆ ಬೆಂಬಲ ಸೂಚಿಸುವ ಮೂಲಕ ಐತಿಹಾಸಿಕ ಕ್ಷಣಗಳಿಗೆ ಸಾಕ್ಷಿಯಾಗಿದ್ದೇವೆ. ಇಡೀ ರಾಜ್ಯದಾದ್ಯಂತ ಏಕಕಾಲದಲ್ಲಿ ವಿನೂತನವಾಗಿ ಆಚರಿಸ ಲಾಗುತ್ತಿರುವುದು ವಿಶೇಷ ಸಂಗತಿಯಾಗಿದೆ ಎಂದು ಸಚಿವರು ತಿಳಿಸಿದರು.

ದಿನಾಚರಣೆಯ ಅಂಗವಾಗಿ ಶಾಲಾ ಮಕ್ಕಳು, ಅಧಿಕಾರಿಗಳು ಹಾಗೂ ಜಿಲ್ಲೆಯ ನಾಗರೀಕರು ರಚಿಸಿದ್ದ ಮಾನವ ಸರಪಳಿಯಲ್ಲಿ ಸಚಿವರು ಪಾಲ್ಗೊಂಡರು. ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿಗಳ ಕಾನೂನು ಸಲಹೆಗಾರರು ಹಾಗೂ ಶಾಸಕರಾದ ಪೊನ್ನಣ್ಣ, ಶಾಸಕರಾದ ಮಂಥರ್ ಗೌಡ, ಜಿಲ್ಲಾಧಿಕಾರಿಗಳಾದ ವೆಂಕಟರಾಜ ಸೇರಿದಂತೆ ಹಲವರು ಉಪಸ್ಥಿತರಿದ್ದರು.

### ರಾಜ್ಯಸಭಾ ಸಂಸದರ ನಿಧಿ ಬಳಕೆ

# ಸುಧಾಮೂರ್ತಿ ಅವರಿಂದ 50 ಲಕ್ಷ ರೂ. ದೇಣಿಗೆ



**ನವದೆಹಲಿ, ಸೆ.15–**ಇನ್ಫೋಸಿಸ್ ಫೌಂಡೇಶನ್ ಸಂಸ್ಥಾಪಕ ಅಧ್ಯಕ್ಷೆ ಸುಧಾ ಮೂರ್ತಿ ತಮ್ಮ ರಾಜ್ಯಸಭಾ ಸದಸ್ಯರ ನಿಧಿಯಿಂದ 50.00 ಲಕ್ಷ ರೂ.ದೇಣಿಗೆಯನ್ನು ದೆಹಲಿ ಕರ್ನಾಟಕ ಸಂಘಕ್ಕೆ ಕಟ್ಟಡದ ಕಾರ್ಯ ಚಟುವಟಿಕೆಗಳಿಗೆ ನೀಡಿದ್ದಾರೆ.

ಜೊತೆಗೆ ಗ್ರಂಥಾಲಯಕ್ಕಾಗಿ ಇನ್ಫೋಸಿಸ್ ಫೌಂಡೇಶನ್ ನಿಂದ 10 ಲಕ್ಷ ನೀಡಿದ್ದಾರೆ. ಒಟ್ಟು 60 ಲಕ್ಷ ರೂ.ಗಳನ್ನು ದೆಹಲಿ ಕರ್ನಾಟಕ ಸಂಘದ ಏಳಿಗೆಗೆ ನೀಡಿರುವ ಸುಧಾ ಮೂರ್ತಿ ಅವರಿಗೆ ಸಮಸ್ತ ದೆಹಲಿ ಕನ್ನಡಿಗರ ಪರವಾಗಿ ಎಂದು ದೆಹಲಿ ಕರ್ನಾಟಕ ಸಂಘದ ಅಧ್ಯಕ್ಷ ಸಿ.ಎಂ.ನಾಗರಾಜು ಧನ್ಯವಾದಗಳು ಹೇಳಿದ್ದಾರೆ.

ದೆಹಲಿ ಕರ್ನಾಟಕ ಸಂಘಕ್ಕೆ ಮತ್ತೊಂದು ಜಾಗಕ್ಕೆ ಪಕ್ಕದ ನೋಯ್ಡಾದಲ್ಲಿ ಪ್ರಯತ್ನ ಪಡುತ್ತಿದ್ದೇವೆ ಆದಷ್ಟು ಬೇಗನೆ ಸಿಗಲಿದೆ ಎಂದು ತಿಳಿಸಿದರು.

ಮೊನ್ನೆ ಸಂಸದರ ಮತ್ತು ಮಂತ್ರಿಗಳ ಅಭಿನಂದನೆ ಕಾರ್ಯಕ್ರಮದಲ್ಲಿ ಕೇಂದ್ರ ಮಂತ್ರಿ ಕುಮಾರಸ್ವಾಮಿಯವರು ಮಾತನಾಡಿ ಉತ್ತರ ಪ್ರದೇಶದ ಮುಖ್ಯಮಂತಿ ಯೋಗಿ ಆದಿತ್ಯನಾಥರ ಜೊತೆ ಮಾತನಾಡಿ, ದೆಹಲಿ ಕರ್ನಾಟಕ ಸಂಘಕ್ಕೆ ಜಾಗ ಕೊಡಿಸಲು ನಾನು ನಿಮ್ಮ ಜೊತೆ ಇದ್ದೇನೆ ಎಂದು ತಿಳಿಸಿದ್ದಾರೆ. ಇನ್ನು ಅನೇಕ ಸಂಸದರ ನಿಧಿಯಿಂದ ಸಹ ಕರ್ನಾಟಕ ಸಂಘಕ್ಕೆ ಅನುದಾನ ನೀಡಲು ಸಂಸದರು ಒಪ್ಪಿಗೆಯನ್ನು ನೀಡಿರುವುದು ಸಂತಸ ತಂದಿದೆ ಎಂದು ಅಧ್ಯಕ್ಷರು ಸಿ.ಎಂ.ನಾಗರಾಜು ತಿಳಿಸಿದ್ದಾರೆ.

# ಬ್ರಿಟಿಷ್ ಕೌನ್ಸಿಲ್ ಪ್ರೀಮಿಯಮ್ ಡಿಜಿಟಲ್ ಲೈಬ್ರರಿ ವಾಲ್ ಉದ್ಘಾಟನೆ




**ಬೆಂಗಳೂರು, ಸೆ.15–** ವಿಶ್ವವಿದ್ಯಾನಿಲಯದ ಸೆಂಟ್ರಲ್ ಕಾಲೇಜ್ ಆವರಣದ ಪಾರಂಪರಿಕ ಗಡಿಯಾರ ಗೋಪುರ ಕಟ್ಟಡದಲ್ಲಿ ಬ್ರಿಟಿಷ್ ಕೌನ್ಸಿಲ್ ಪ್ರೀಮಿಯಮ್ ಡಿಜಿಟಲ್ ಲೈಬ್ರರಿ ವಾಲ್ ಉದ್ಘಾಟನೆಯನ್ನು ಮಾನ್ಯ ಉನ್ನತ ಶಿಕ್ಷಣ ಸಚಿವ ಡಾ. ಎಂ.ಸಿ ಸುಧಾಕರ್ ರವೇರಿಸಿದರು.

ಕರ್ನಾಟಕ ಸರ್ಕಾರದೊಂದಿಗೆ ಬ್ರಿಟಿಷ್ ಕೌನ್ಸಿಲ್ ಮಾಡಿಕೊಂಡಿರುವ ಶೈಕ್ಷಣಿಕ ಸಹಭಾಗಿತ್ವದ ಒಡಂಬಡಿಕೆಗಳ ಭಾಗವಾಗಿ ಸ್ಥಾಪಿಸಲಾಗಿರುವ 'ಡಿಜಿಟಲ್ ಲೈಬ್ರರಿ ವಾಲ್' ರಾಜ್ಯದ ಎಲ್ಲಾ ಸಾರ್ವಜನಿಕ ವಿಶ್ವವಿದ್ಯಾಲಯಗಳ ವಿದ್ಯಾರ್ಥಿಗಳಿಗೆ ಅನುಕೂಲಕರವಾಗಿ ಪರಿಣಮಿಸಿದೆ ಎಂದು ಸಚಿವರು ತಿಳಿಸಿದರು.

ವಿದ್ಯಾರ್ಥಿಗಳಿಗೆ ಮತ್ತು ಸಾರ್ವಜನಿಕರಿಗೆ ಉಚಿತ ಮತ್ತು ಅತ್ಯಲ್ಪ ಶುಲ್ಕದ ಆಧಾರದ ಮೇಲೆ ಅಗತ್ಯ ಮಾಹಿತಿಗಳನ್ನು ಒದಗಿಸುವ ಈ ವ್ಯವಸ್ಥೆ ವಿಶೇಷವಾಗಿ ಗ್ರಾಮೀಣ ಬಡ ವಿದ್ಯಾರ್ಥಿಗಳಿಗೆ ವರದಾನವಾಗಲಿದೆ ಎಂದು ಅವರು ಅಭಿಪ್ರಾಯಪಟ್ಟರು ಅಧ್ಯಾಪಕರು ಸಹ ಈ ಸೌಲಭ್ಯವನ್ನು ಬಳಸಿಕೊಂಡು ತಮ್ಮ ಬೋಧನಾ ಗುಣಮಟ್ಟವನ್ನು ಹೆಚ್ಚಿಸಿಕೊಳ್ಳಬಹುದಾಗಿದೆ ಎಂದು ಸಚಿವರು ವಿವರಿಸಿದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ. ಲಿಂಗರಾಜ ಗಾಂಧಿ ಮಾತನಾಡಿ, ಡಿಜಿಟಲ್ ಲೈಬ್ರರಿ ವಾಲ್' ಬಿಸಿಯುಗೆ ದೊರೆತ ಹೆಮ್ಮೆಯ ಕೊಡುಗೆಯಾಗಿದೆ ಎಂದರು.

ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಬ್ರಿಟಿಷ್‌ನ ವಿವಿಧ ವಿಶ್ವವಿದ್ಯಾನಿಲಯಗಳ ಜೊತೆ ಈಗಾಗಲೇ ಅನೇಕ ಶೈಕ್ಷಣಿಕ ವಿನಿಮಯ ಒಡಂಬಡಿಕೆಗಳನ್ನು ಮಾಡಿಕೊಂಡಿದ್ದು ನಿವ್ವಳ ಶೂನ್ಯ ಕಾರ್ಬನ್ ಯೋಜನೆ ವಿಶೇಷ ಮಹತ್ವದ್ದಾಗಿದೆ ಎಂದು ಅವರು ವಿವರಿಸಿದರು. ಬೆಂಗಳೂರು ಮಹಾನಗರದ ಅಭಿವೃದ್ಧಿಗೆ ಪೂರಕವಾದ ವಿವಿಧ ಯೋಜನೆಗಳನ್ನು ವಿದೇಶಿ ಸಹಭಾಗಿತ್ವದ ಮೂಲಕ ಬೆಂಗಳೂರು ನಗರ ವಿಶ್ವವಿದ್ಯಾನಿಲಯ ಕೈಗೆತ್ತಿಕೊಂಡಿದೆ ಎಂದು ಪ್ರೊ. ಗಾಂಧಿ ತಿಳಿಸಿದರು.

ಬ್ರಿಟಿಷ್ ಕೌನ್ಸಿಲ್ ರಾಷ್ಟ್ರೀಯ ನಿರ್ದೇಶಕರಾದ ಅಲಿಸನ್ ಬ್ಯಾರೆಟ್ ಮಾತನಾಡಿ ಶೈಕ್ಷಣಿಕ ಮತ್ತು ಸಾಂಸ್ಕೃತಿಕ ವಿನಿಮಯದ ಮೂಲಕ ಜ್ಞಾನದ ಹಂಚಿಕೆಗೆ ಉಭಯ ದೇಶಗಳ ಸಹಭಾಗಿತ್ವ ಅತ್ಯಂತ ಉಪಯುಕ್ತವಾಗಿದೆ ಎಂದು ಅಭಿಪ್ರಾಯಪಟ್ಟರು. ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಧ್ಯೇಯ ವಾಕ್ಯವಾದ 'ಆಗು ನೀ ಅನಿಕೇತನ' ಸಂದೇಶದ ಬಗ್ಗೆ ಅವರು ವಿಶೇಷ ಮೆಚ್ಚುಗೆ ವ್ಯಕ್ತಪಡಿಸಿದರು.

ಕರ್ನಾಟಕ ಮತ್ತು ಕೇರಳ ಪ್ರದೇಶದ ಬ್ರಿಟಿಷ್ ಉಪ ಆಯುಕ್ತರು ಚಂದ್ರು ಅಯ್ಯರ್ ತಮ್ಮ ಬ್ರಿಟಿಷ್ ಕೌನ್ಸಿಲ್‌ನ ನಿರ್ದೇಶಕ ಜನಕ ಪುಷ್ಪನಾಥನ್, ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಕುಲಸಚಿವ ಟಿ. ಜವರೇಗೌಡ, ಪ್ರಭಾರ ಗ್ರಂಥಪಾಲಕರಾದ ಪ್ರೊ. ಪಿ. ಚೇತನಾ ವೇದಿಕೆಯಲ್ಲಿ ಉಪಸ್ಥಿತರಿದ್ದರು.

# ಕಲಾವಿದ ಡೊನಾಲ್ಡ್ ಡಿ–ಅಲ್ಮೇಡಾ ನಿಧನ




**ಮುಂಬಯಿ (ಆರ್‌ಬಿಐ), ಸೆ.15–** ಮಂಗಳೂರು ಕಾಸ್ಸಿಯಾ ಇಲ್ಲಿನ ಎಂಆರ್‌ಬಿ ಲೇನ್‌ನ ಡೋನ್‌ರಿಟ್ ನಿವಾಸಿ ಡೊನಾಲ್ಡ್ ಮಾರ್ಟಿನ್ ಡಿಅಲ್ಮೇಡಾ (68.) ಅಲ್ಪಕಾಲದ ಅಸ್ವಸ್ಥತೆಯಿಂದ ಕಳೆದ ಶುಕ್ರವಾರ ಮುಂಜಾನೆ ಮಂಗಳೂರುನ ಆವೆ ಮರಿಯಾ ಕೇಂದ್ರದಲ್ಲಿ ನಿಧನರಾದರು.

ಜೆಪ್ಪು ಬಪ್ಪಲ್ ಮೂಲತಃ ಮೃತರು ಪತ್ನಿ, ಎರಡು ಪುತ್ರಿಯರು, ಮೂವರು ಸಹೋದರರು, ಓರ್ವ ಸಹೋದರಿಯರು ಸೇರಿದಂತೆ ಬಂಧು–ಬಳಗವನ್ನು ಅಗಲಿದ್ದಾರೆ.

ವಿದೇಶದಲ್ಲಿ ವೃತ್ತಿಯಲ್ಲಿದ್ದು ಸದ್ಯ ಮಂಗಳೂರಿನಲ್ಲಿ ನಿವೃತ್ತಿ ಬದುಕನ್ನು ಸಾಗಿಸುತ್ತಿದ್ದ ಮೃತರು ಓರ್ವ ಅಪ್ರತಿಮ ನಾಟಕ ಕಲಾವಿದ, ಸಮಾಜ ಸೇವಕರಾಗಿದ್ದು ಸೇವೆಯ ಪ್ರತೀಕರು ಎಂದೇ ಜನಾನುರಾಗಿದ್ದರು.

# ಚನ್ನಪಟ್ಟಣ ಉಪಚುನಾವಣೆಯಲ್ಲಿ ನೂರಕ್ಕೆ ನೂರರಷ್ಟು ಟಿಕೆಟ್ ಗ್ಯಾರಂಟಿ: ಸಿ.ಪಿ.ಯೋಗೇಶ್ವರ್



**ರಾಮನಗರ, ಸೆ.15–** 'ಚನ್ನಪಟ್ಟಣ ಉಪಚುನಾವಣೆಯಲ್ಲಿ ನೂರಕ್ಕೆ ನೂರರಷ್ಟು ನನಗೇ ಟಿಕೆಟ್ ಸಿಗಲಿದೆ. ಚುನಾವಣೆ ಹಿನ್ನೆಲೆಯಲ್ಲಿ ಈಗಾಗಲೇ ಕ್ಷೇತ್ರ ಭೇಟಿ ಆರಂಭಿಸಿದ್ದೇನೆ. ಟಿಕೆಟ್‌ಗೆ ಸಂಬಂಧಿಸಿದಂತೆ ಬಿಜೆಪಿ ಮತ್ತು ಜೆಡಿಎಸ್ ಮಧ್ಯೆ ಗೊಂದಲವಿಲ್ಲ. ಚುನಾವಣೆ ದಿನಾಂಕ ಘೋಷಣೆಯಾದ ಬಳಿಕ ವದಂತಿಗಳಿಗೆ ಉತ್ತರ ಸಿಗಲಿದೆ' ಎಂದು ಟಿಕೆಟ್ ಆಕಾಂಕ್ಷಿಯಾಗಿರುವ ಬಿಜೆಪಿಯ ವಿಧಾನ ಪರಿಷತ್ ಸದಸ್ಯ ಸಿ.ಪಿ.ಯೋಗೇಶ್ವರ್ ಹೇಳಿದರು.

ಸಂಸದ ಡಾ. ಸಿ.ಎನ್.ಮಂಜುನಾಥ್ ಕಚೇರಿ ಉದ್ಘಾಟನಾ ಸಮಾರಂಭದಲ್ಲಿ ಸುದ್ದಿಗಾರರೊಂದಿಗೆ, 'ಸಂಸದ ಡಾ. ಸಿ.ಎನ್.ಮಂಜುನಾಥ್ ದಂಪತಿ ಸಹ ನನ್ನ ಪರವಾಗಿದ್ದು, ಅವರ ಆಶೀರ್ವಾದ ಸದಾ ಇರಲಿದೆ'. 'ಚುನಾವಣೆ ಹಿನ್ನೆಲೆಯಲ್ಲಿ ಈಗಾಗಲೇ ಪಂಚಾಯಿತಿ ವ್ಯಾಪ್ತಿಯಲ್ಲಿ ಪ್ರಮುಖರ ಸಭೆ ನಡೆಸಿ ಅಭಿಪ್ರಾಯ ಸಂಗ್ರಹಿಸುತ್ತಿದ್ದೇನೆ. ಮುಂದೆ ಹಳ್ಳಿಗಳಿಗೂ ಭೇಟಿ ನೀಡಿ, ಎನ್‌ಡಿಎ ಅಭ್ಯರ್ಥಿಯಾಗಿ ಬರುವ ನನಗೆ ಆಶೀರ್ವಾದ ಮಾಡಿ ಕ್ಷೇತ್ರದಲ್ಲಿ ಕಾಂಗ್ರೆಸ್ ಆಪರೇಷನ್ ಹಸ್ತ ನಡೆಸಿದರೂ ಅದರ ಪರಿಣಾಮ ಉಪ ಚುನಾವಣೆ ಮೇಲೆ ಬೀರುವುದಿಲ್ಲ' ಎಂದು ಪ್ರತಿಕ್ರಿಯಿಸಿದರು.

ಲೋಕಸಭಾ ಚುನಾವಣೆ ಸಂದರ್ಭದಲ್ಲಿ ದುಡ್ಡು ಕೊಟ್ಟು ನಗರಸಭೆ ಸದಸ್ಯರು ಸೇರಿದಂತೆ ಕೆಲ ಮುಖಂಡರನ್ನು ಕಾಂಗ್ರೆಸ್‌ನವರು ಸೆಳೆದಿದ್ದರು. ಈಗ ಅವರೆಲ್ಲರೂ ಮಾನಸಿಕವಾಗಿ ನಮಗೆ ಬೆಂಬಲ ನೀಡುತ್ತಿದ್ದಾರೆ. ಕ್ಷೇತ್ರದಲ್ಲಿ ನಾನು ಮತ್ತು ನಿಖಿಲ್ ಪ್ರತ್ಯೇಕವಾಗಿ ಕಾರ್ಯಕರ್ತರೊಂದಿಗೆ ಸಭೆ ನಡೆಸುತ್ತಾ, ಪಕ್ಷ ಸಂಘಟನೆ ಮಾಡಿ ಚುನಾವಣೆಗೆ ಅಣಿಗೊಳಿಸುತ್ತಿದ್ದೇವೆ' ಎಂದರು.

Managing Editor : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com
Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

22 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

ದೆಹಲಿ ವಾರ್ತೆ

ಸೆಪ್ಟೆಂಬರ್ 16, 2024, ಸೋಮವಾರ

# ವಂದೇ ಭಾರತ್ 6 ರೈಲಿಗೆ ಮೋದಿ ಚಾಲನೆ



**ಪಟನಾ, ಸೆ 15:** ಭಾಗಲ್‌ಪುರ ಹೌರಾ ಮತ್ತು ಗಯಾ–ಹೌರಾದಲ್ಲಿ ಎರಡು ಸೇರಿದಂತೆ ಆರು ವಂದೇ ಭಾರತ್ ರೈಲುಗಳಿಗೆ ಪ್ರಧಾನಿ ನರೇಂದ್ರ ಮೋದಿ ಭಾನುವಾರ ವಿಡಿಯೋ ಸಂವಾದದ ಮೂಲಕ ಚಾಲನೆ ನೀಡಿದರು. ರಾಂಚಿಯಿಂದ ಮೋದಿ ಉದ್ಘಾಟಿಸಿದ ರೈಲುಗಳೆಂದರೆ ಗಯಾ– ಹೌರ್ ಭಾಗಲ್‌ಪುರ–ದುಮ್ಕಾ–ಹೌರಾ, ಟಾಟಾ ನಗರ– ಪಟನಾ, ಬ್ರಹ್ಮಪುರ–ಟಾಟಾ ನಗರ, ದೇವಘಡ– ವಾರಣಾಸಿ ಮತ್ತು ರೂರ್ಕೆಲಾ–ಹೌರಾ.

ಈ ಸಂದರ್ಭದಲ್ಲಿ ರಾಂಚಿ ರೈಲು ನಿಲ್ದಾಣದಲ್ಲಿ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ಬಿಹಾರದಲ್ಲಿ, ಗಯಾ–ಹೌರಾ ಮತ್ತು ಭಾಗಲ್ಪುರ್–ಹೌರಾ ವಂದೇಭಾರತ್ ರೈಲುಗಳ ಪ್ರಾರಂಭಕ್ಕಾಗಿ ಕ್ರಮವಾಗಿ ಗಯಾ ಮತ್ತು ಭಾಗಲ್ಪುರ್ ನಿಲ್ದಾಣಗಳಲ್ಲಿ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ.

ಭಾಗಲ್ಪುರ ನಿಲ್ದಾಣದಲ್ಲಿ ನಡೆದ ಸಮಾರಂಭದಲ್ಲಿ ಮಾತನಾಡಿದ ರೈಲ್ವೆ ಖಾತೆ ರಾಜ್ಯ ಸಚಿವ ನವನೀತ್ ಸಿಂಗ್ ಬಿಟ್ಟು, ಇದುವರೆಗೆ ದೇಶಾದ್ಯಂತ ವಿವಿಧ ಮಾರ್ಗಗಳಲ್ಲಿ ಒಟ್ಟು 108 ವಂದೇ ಭಾರತ್ ರೈಲುಗಳನ್ನು ಪ್ರಾರಂಭಿಸಲಾಗಿದೆ.

ಬಿಹಾರದಲ್ಲಿ ಆಂಗ್ ಪ್ರದೇಶದ ಪ್ರಾಮುಖ್ಯತೆಯನ್ನು ಗುರುತಿಸಿದ ಮೋದಿ ಅವರು ಭಾಗಲ್‌ಪುರ–ಹೌರಾ ಮಾರ್ಗದಲ್ಲಿ ವಂದೇಭಾರತ್ ರೈಲನ್ನು ಉಡುಗೊರೆಯಾಗಿ ನೀಡಿದರು ಎಂದು ಅವರು ಹೇಳಿದರು. "ಭಾಗಲ್‌ಪುರದಿಂದ ಹೌರಾಕ್ಕೆ ವಂದೇ ಭಾರತ್ ರೈಲನ್ನು ಪ್ರಾರಂಭಿಸುವುದರೊಂದಿಗೆ, ಭಾಗಲ್ಪುರದಲ್ಲಿ ವ್ಯಾಪಾರ ಚಟುವಟಿಕೆಗಳು ಹೆಚ್ಚಾಗುತ್ತವೆ ಮತ್ತು ಅದರ ರೇಷ್ಮೆ ಉದ್ಯಮಗಳು ಸಹ ದೊಡ್ಡ ಉತ್ತೇಜನವನ್ನು ಪಡೆಯುತ್ತವೆ" ಎಂದು ಬಿಟ್ಟು ಗಮನಿಸಿದರು.

ಮುಂದಿನ ಆರು ತಿಂಗಳೊಳಗೆ, ಬಿಹಾರದಲ್ಲಿ ಭಾಗಲ್‌ಪುರ ಸೇರಿದಂತೆ ವಿವಿಧ ಮಾರ್ಗಗಳಿಗೆ ಅಮೃತ್ ಭಾರತ್ ರೈಲುಗಳನ್ನು ಪರಿಚಯಿಸಲಾಗುವುದು ಎಂದು ಅವರು ಹೇಳಿದರು.

ಅದೇ ರೀತಿ ಗಯಾ–ಹೌರಾ ವಂದೇ ಭಾರತ್ ರೈಲಿಗೆ ಚಾಲನೆ ನೀಡುವ ಕಾರ್ಯಕ್ರಮವನ್ನು ಗಯಾ ನಿಲ್ದಾಣದಲ್ಲಿ ಆಯೋಜಿಸಲಾಗಿತ್ತು. ಕೇಂದ್ರ ಸಚಿವ ಜೀತನ್ ರಾಮ್ ಮಾಂಝಿ ಈ ಸಂದರ್ಭದಲ್ಲಿ ಮಾತನಾಡುತ್ತಾ, ನರೇಂದ್ರ ಮೋದಿ ಸರ್ಕಾರದ ಅಡಿಯಲ್ಲಿ ರೈಲುಗಳು ಮತ್ತು ರೈಲ್ವೆಯ ಇತರ ವ್ಯವಸ್ಥೆಗಳ ಆಧುನೀಕರಣವು ನಡೆದಿದೆ ಎಂದು ಹೇಳಿದರು. ಮೋದಿಯವರ ಸಮರ್ಥ ನಾಯಕತ್ವದಲ್ಲಿ ದೇಶದಲ್ಲಿ ಸರ್ವತೋಮುಖ ಅಭಿವೃದ್ಧಿಯಾಗುತ್ತಿದೆ ಎಂದರು.

## ಒಳಪುಟಗಳಲ್ಲಿ

ಜೆಎಂಎಂ ಪಕ್ಷಕ್ಕೆ ಕಾಂಗ್ರೆಸ್‌ನ ಭೂತ ಅಂಟಿಕೊಂಡಿದೆ-ಮೋದಿ ಗುಡುಗು - ಪು.4

ಪ್ರಜಾಪ್ರಭುತ್ವದ ಉಳಿವಿಗಾಗಿ ಮಾನವ ಸರಪಳಿ ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಚ್ ಮುನಿಯಪ್ಪ - ಪು.5

ಜಾತೀಯತೆ, ಮೇಲು-ಕೀಳು, ಅಸಮಾನತೆ ಸಮಾಜಕ್ಕೆ ಕಂಟಕ: ಶಂಕರಾನಂದ - ಪು.6


ಯಾವುದೇ ತಕರಾರು ಕೊಡದೆ ರೈತರಿಗೆ 10 ಲಕ್ಷ ವರೆಗೆ ಬೆಳೆಸಾಲ - ಪು.7

## ಅಖಿಲ ಭಾರತ ವೀರಶೈವ ಮಹಾಸಭಾದ ಅಧ್ಯಕ್ಷರಾಗಿ ಶಾಮನೂರು ಶಿವಶಂಕರಪ್ಪ ಅವಿರೋಧ ಆಯ್ಕೆ



**ಬೆಂಗಳೂರು, ಸೆ.15:** ಅಖಿಲ ಭಾರತ ವೀರಶೈವ ಮಹಾಸಭಾದ ಮೂರನೇ ಹಂತದ ಚುನಾವಣೆ ಸಂಬಂಧವಾಗಿ ಅಖಿಲ ಭಾರತ ವೀರಶೈವ ಮಹಾಸಭಾದ ಅಧ್ಯಕ್ಷ ಸ್ಥಾನಕ್ಕೆ ನಡೆದ ಚುನಾವಣೆಯಲ್ಲಿ ಡಾ.ಶಾಮನೂರು ಶಿವಶಂಕರಪ್ಪನವರು ಮಾತ್ರ ನಾಮಪತ್ರವನ್ನು ಸಲ್ಲಿಸಿದ್ದರಿಂದ ಅವರು ಅವಿರೋಧವಾಗಿ ಆಯ್ಕೆ ಯಾಗಿದ್ದಾರೆಂದು ಚುನಾವಣಾಧಿಕಾರಿ ಎಂ.ಬಿ.ದ್ಯಾಬೇರಿ ಭಾನುವಾರ ಘೋಷಿಸಿದ್ದಾರೆ.

## ಬಾಂಗ್ಲಾದೇಶಕ್ಕೆ ಆರ್ಥಿಕ ರಾಜಕೀಯ ಸಹಕಾರ ಅಮೆರಿಕ ಅಭಯ



**ಢಾಕಾ, ಸೆ.15:** ಬಾಂಗ್ಲಾದ ನಾಗರಿಕರಿಗೆ ಸಮಾನ ಮತ್ತು ಸೇರ್ಪಡೆಯುಕ್ತ ಭವಿಷ್ಯವನ್ನು ರೂಪಿಸಲು ಅಗತ್ಯವಿರುವ ಆರ್ಥಿಕ ಮತ್ತು ರಾಜಕೀಯ ಸಹಕಾರವನ್ನು ನೀಡುವ ಭರವಸೆಯನ್ನು ಅಮೆರಿಕ, ಭಾನುವಾರ ಬಾಂಗ್ಲಾದೇಶದ ಮಧ್ಯಂತರ ಸರ್ಕಾರಕ್ಕೆ ನೀಡಿದೆ.

ಪ್ರಮುಖ ಸುಧಾರಣೆಗಳ ಜಾರಿಗೆ ನೆರವು ನೀಡಬೇಕು ಎಂದು ಮಧ್ಯಂತರ ಸರ್ಕಾರದ ಮುಖ್ಯಸ್ಥ ಮೊಹಮ್ಮದ್ ಯೂನಸ್ ಅವರು ಮಾಡಿದ್ದ ಮನವಿಗೆ ಹೀಗೆ ಪ್ರತಿಕ್ರಿಯಿಸಿದೆ.

ಅಮೆರಿಕದ ಖಜಾನೆ ಇಲಾಖೆಯ ಅಂತರರಾಷ್ಟ್ರೀಯ ಹಣಕಾಸು ವಿಭಾಗದ ಸಹಾಯಕ ಕಾರ್ಯದರ್ಶಿ ಬ್ರೆಂಟ್ ನೀಮನ್ ನೇತೃತ್ವದ, ಬಹು ಏಜೆನ್ಸಿಗಳ ಪ್ರತಿನಿಧಿಗಳನ್ನು ಒಳಗೊಂಡಿದ್ದ ನಿಯೋಗವು ಭಾನುವಾರ ಢಾಕಾಗೆ ಭೇಟಿ ನೀಡಿತ್ತು.

'ಮಧ್ಯಂತರ ಸರ್ಕಾರದ ಮುಖ್ಯ ಸಲಹೆಗಾರ ಪ್ರೊ. ಯೂನಸ್ ಅವರ ಜೊತೆಗಿನ ಭೇಟಿ ವೇಳೆ ನಿಯೋಗ ಈ ಭರವಸೆ ನೀಡಿತು' ಎಂದು ಅಮೆರಿಕದ ರಾಯಭಾರ ಕಚೇರಿ ಹೇಳಿಕೆ ನೀಡಿದೆ.

## ನಾಗಮಂಗಲ ಗಲಭೆ ಸೂಕ್ತ ದಾಖಲೆ ನೀಡಿದರೆ ಸುಪ್ರಿಂನಲ್ಲಿ ದಾವೆ



**ಕಾರ್ಕಳ. ಸೆ.15:** ನಾಗಮಂಗಲ ಗಲಭೆ ಅಹಿತಕರ ಘಟನೆ. ಮುಸ್ಲಿಮರು ಕಲ್ಲು ಎಸೆದಿದ್ದಾರೆ ಹಾಗೂ ಅವರ ವಿರುದ್ಧ ಸರಕಾರ ಸರಿಯಾದ ಕ್ರಮ ಕೈಗೊಳ್ಳುತ್ತಿಲ್ಲ ಎನ್ನುವ ಬಗ್ಗೆ ಸರಿಯಾದ ದಾಖಲೆ ನೀಡಿದರೆ ಸುಪ್ರಿಂ ಕೋರ್ಟ್‌ನಲ್ಲಿ ದಾವೆ ಹೂಡಿ ಪ್ರಬಲವಾದ ಮಂಡನೆ ಮಾಡುವುದಾಗಿ ಮಾಜಿ ಕೇಂದ್ರ ಸಚಿವ, ವಿರಾಟ್ ಹಿಂದೂಸ್ಥಾನ್ ಸಂಗಮದ ರಾಷ್ಟ್ರೀಯ ಅಧ್ಯಕ್ಷ ಡಾ. ಸುಬ್ರಮಣಿಯನ್ ಸ್ವಾಮಿ ಹೇಳಿದರು.

ಮಂಗಳೂರಿನಿಂದ ಶೃಂಗೇರಿಗೆ ತೆರಳುವ ಮಾರ್ಗ ಮಧ್ಯೆ ಕಾರ್ಕಳದ ಪತ್ತೊಂಜಿಕಟ್ಟೆ ದತ್ತಾತ್ರೇಯ ಮೂಕಾಂಬಿಕಾ ದೇವಸ್ಥಾನಕ್ಕೆ ಭೇಟಿ ನೀಡಿ ದೇವರ ದರ್ಶನ ಪಡೆದ ಬಳಿಕ ಅವರು ಮಾಧ್ಯಮದೊಂದಿಗೆ ಮಾತನಾಡಿದರು.

## ಇಂಡಿಯನ್ ಯೂತ್ ಪಾರ್ಲಿಮೆಂಟ್‌ನ 27ನೇ ರಾಷ್ಟ್ರೀಯ ಅಧಿವೇಶನ ಉದ್ಘಾಟನೆ



**ಜೈಪುರ, ಸೆ.15:** ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನವಾದದನ್ನು ರಾಜಸ್ಥಾನದ ಜೈಪುರದಲ್ಲಿ ನಡೆದ ಭಾರತೀಯ ಯುವ ಸಂಸತ್ತಿನ 27ನೇ ರಾಷ್ಟ್ರೀಯ ಅಧಿವೇಶನದ ಉದ್ಘಾಟನಾ ಸಮಾರಂಭದಲ್ಲಿ ಕರ್ನಾಟಕ ವಿಧಾನ ಸಭೆಯ ಸಭಾಧ್ಯಕ್ಷರಾದ ಯು.ಟಿ.ಖಾದರ್ ಅವರು ಭಾಗವಹಿಸಿದರು.

ಇದೇ ವೇಳೆ ಮಾತನಾಡಿದ ಸಭಾಧ್ಯಕ್ಷ ಯು.ಟಿ.ಖಾದರ್ ಅವರು ಇತ್ತೀಚಿನ ಜಾಗತಿಕ ಅಂಕಿಅಂಶಗಳ ಪ್ರಕಾರ, ಭಾರತವು ಸುಮಾರು 356 ದಶಲಕ್ಷ ಯುವಕರನ್ನು ಹೊಂದಿದ್ದು, ದೇಶವನ್ನು "ಯಂಗ್ ಇಂಡಿಯಾ" ಎಂದು ಕರೆಯಲಾಗುತ್ತಿದೆ. ಸಮಸ್ಯೆ ಆಧಾರಿತ ಚರ್ಚೆ ಮತ್ತು ವಾದಗಳು ಮಂಡನೆಯಾಗಬೇಕು. ಸಂಸತ್ತು ಮತ್ತು ರಾಜ್ಯಗಳಲ್ಲಿರುವ ವಿಧಾನ ಸಭೆ ಹಾಗೂ ವಿಧಾನ ಪರಿಷತ್ ನ ಕಾರ್ಯ ಚಟುವಟಿಕೆಗಳ ಬಗ್ಗೆ ಯುವಜನರು ಅರ್ಥಮಾಡಿಕೊಳ್ಳುವುದು ಅತ್ಯಗತ್ಯವಾಗಿದ್ದು, ಇಂಡಿಯನ್ ಯೂತ್ ಪಾರ್ಲಿಮೆಂಟ್ ಇವುಗಳನ್ನು ಅರಿಯುವ ಉತ್ತಮ ಮತ್ತು ಮಾದರಿ ವೇದಿಕೆಯಾಗಬೇಕು ಎಂದು ಹೇಳಿದರು.

ಈ ಕಾರ್ಯಕ್ರಮದಲ್ಲಿ ರಾಜಸ್ಥಾನದ ರಾಜ್ಯಪಾಲ ಹರಿಭಾವು ಬಾಗ್ಡೆ ಹಾಗೂ ರಾಜಸ್ಥಾನ ವಿಧಾನಸಭೆಯ ಅಧ್ಯಕ್ಷ ವಾಸುದೇವ್ ದೇವನಾನಿ,ಇಂಡಿಯನ್ ಯೂತ್ ಪಾರ್ಲಿಮೆಂಟ್ ನ ರಾಷ್ಟ್ರೀಯ ಸಂಚಾಲಕ ಆಶುತೋಷ್ ಜೋಶ್ ಸೇರಿದಂತೆ ಇತರ ಗಣ್ಯರು ಉಪಸ್ಥಿತರಿದ್ದರು.

## ಸಿಎಂ ಸ್ಥಾನಕ್ಕೆ ಕೇಜ್ರಿವಾಲ್ ರಾಜೀನಾಮೆ ಘೋಷಣೆ

### ಆಪ್ ಶಾಸಕಾಂಗ ಪಕ್ಷದ ಸಭೆಯಲ್ಲಿ ನೂತನ ಮುಖ್ಯಮಂತ್ರಿ ಆಯ್ಕೆಗೆ ನಿರ್ಧಾರ




**ನವದೆಹಲಿ,ಸೆ..15:** ಆಮ್ ಆದ್ಮಿ ಪಕ್ಷದ ನಾಯಕರೂ ಆಗಿರುವ ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರು ಮುಂದಿನ 48 ಗಂಟೆಗಳ ಒಳಗೆ ತಮ್ಮ ಹುದ್ದೆಗೆ ರಾಜೀನಾಮೆ ನೀಡುವುದಾಗಿ ಭಾನುವಾರ ಘೋಷಿಸಿದ್ದಾರೆ. ಹೊಸ ಅಬಕಾರಿ ನೀತಿ ಪ್ರಕರಣದಲ್ಲಿ ಬರೋಬ್ಬರಿ 6 ತಿಂಗಳು ಜೈಲಿನಲ್ಲಿದ್ದ ದೆಹಲಿ ಸಿಎಂ ಅರವಿಂದ್ ಕೇಜ್ರಿವಾಲ್ ಸೆ.13ರಂದು ಷರತ್ತುಬದ್ಧ ಜಾಮೀನಿನ ಮೇಲೆ ಬಿಡುಗಡೆಯಾಗಿದ್ದರು.

ಜೈಲಿನಿಂದ ಬಿಡುಗಡೆಯಾದ ಬಳಿಕ ಪಕ್ಷದ ಕಾರ್ಯಕರ್ತರನ್ನುದ್ದೇಶಿಸಿ ಮಾಡಿದ ಮೊದಲ ಭಾಷಣದಲ್ಲಿ ದೆಹಲಿ ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡುವುದಾಗಿ ಘೋಷಿಸಿದ್ದಾರೆ. ಇನ್ನೆರಡು ದಿನಗಳಲ್ಲಿ ಶಾಸಕಾಂಗ ಪಕ್ಷದ ಸಭೆ ನಡೆಯಲಿದ್ದು, ನೂತನ ಮುಖ್ಯಮಂತ್ರಿ ಆಯ್ಕೆಗೆ ನಿರ್ಧರಿಸಲಾಗಿದೆ ಎಂದು ಅವರು ಹೇಳಿದ್ದಾರೆ. ಇದೇ ವೇಳೆ ಮಹಾರಾಷ್ಟ್ರ ಚುನಾವಣೆಯೊಂದಿಗೆ ದೆಹಲಿ ವಿಧಾನಸಭಾ ಚುನಾವಣೆ ನಡೆಸುವಂತೆ ಚುನಾವಣಾ ಆಯೋಗಕ್ಕೆ ಮನವಿ ಮಾಡಿದ್ದಾರೆ.

ಮುಂದಿನ 48 ಗಂಟೆಗಳ ಒಳಗೆ ಸಿಎಂ ಸ್ಥಾನಕ್ಕೆ ರಾಜೀನಾಮೆ ನೀಡಲಿದ್ದೇನೆ. ಆ ನಂತರ ಸಚಿವ ಸಂಪುಟ ಸಭೆಯಲ್ಲಿ ಪಕ್ಷದ ಸದಸ್ಯರೊಬ್ಬರನ್ನು ಮುಖ್ಯಮಂತ್ರಿಯಾಗಿ ಹೆಸರಿಸಲಾಗುವುದು. ನಾನು ಜನತೆ ತೀರ್ಪು ನೀಡುವವರೆಗೂ ಮುಖ್ಯಮಂತ್ರಿ ಕುರ್ಚಿಯಲ್ಲಿ ಕುಳಿತುಕೊಳ್ಳುವುದಿಲ್ಲ. ಪ್ರತಿ ಮನೆ, ಬೀದಿಗೆ ಹೋಗುತ್ತೇನೆ, ಅಲ್ಲಿಯವರೆಗೆ ಮುಖ್ಯಮಂತ್ರಿ ಕುರ್ಚಿಯಲ್ಲಿ ಕೂರುವುದಿಲ್ಲ. ನಾನು ಜನರಿಂದ ತೀರ್ಪು ಪಡೆಯುತ್ತೇನೆ ಎಂದು ಗುಡುಗಿದ್ದಾರೆ.

### ಕೇಸ್ ಹಾಕಿದ್ರೆ ರಾಜೀನಾಮೆ ಕೊಡಬೇಡಿ

ಪ್ರಜಾಪ್ರಭುತ್ವ ಉಳಿಸುವ ಉದ್ದೇಶದಿಂದ ಈ ಹಿಂದೆ ಬಂಧನಕ್ಕೊಳಗಾಗಿದ್ದರೂ ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಿರಲಿಲ್ಲ ಎಂದ ಅವರು, ಕರ್ನಾಟಕ ಮುಖ್ಯಮಂತ್ರಿ ಸಿದ್ದರಾಮಯ್ಯ, ಕೇರಳ ಮುಖ್ಯಮಂತ್ರಿ ಪಿಣರಾಯಿ ವಿಜಯನ್, ಬಂಗಾಳ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ವಿರುದ್ಧ ಪ್ರಕರಣ ದಾಖಲಿಸಿರುವುದನ್ನು ಉಲ್ಲೇಖಿಸಿದರು. ನಾನು ಬಿಜೆಪಿಯೇತರರಿಗೆ ಮನವಿ ಮಾಡಲು ಬಯಸುತ್ತೇನೆ, ಅವರು ನಿಮ್ಮ ವಿರುದ್ಧ ಪ್ರಕರಣ ದಾಖಲಿಸಿದರೆ ರಾಜೀನಾಮೆ ನೀಡಬೇಡಿ. ಇದು ಅವರ ಹೊಸ ಆಟ ಎಂದು ಕರೆ ನೀಡಿದ್ದಾರೆ. ಇದು ಬ್ರಿಟಿಷ್ ವಸಾಹತುಶಾಹಿ ಆಳ್ವಿಕೆಗಿಂತ ಹೆಚ್ಚು ಸರ್ವಾಧಿಕಾರಿ ಆಡಳಿತವಾಗಿದೆ. ಕೇಂದ್ರ ಸರ್ಕಾರ ಏನೇ ಪಿತೂರಿ ಮಾಡಿದರೂ ನಮ್ಮ ಸಂಕಲ್ಪ ಮುರಿಯಲು ಸಾಧ್ಯವಿಲ್ಲ, ರಾಷ್ಟ್ರಕ್ಕಾಗಿ ನಮ್ಮ ಹೋರಾಟ ಮುಂದುವರಿಯುತ್ತ ದೆ ಎಂದು ಎಚ್ಚರಿಕೆ ನೀಡಿದ್ದಾರೆ.

### ಜೈಲಿನ ಕಹಿ ಘಟನೆ ನೆನೆದ ಅರವಿಂದ್ ಕೇಜ್ರಿವಾಲ್

ಇದೇ ವೇಳೆ ಜೈಲಿನ ಕಹಿ ಘಟನೆಗಳನ್ನು ನೆನೆದು ಕೇಜ್ರಿವಾಲ್ ಮಾತನಾಡಿದ್ದಾರೆ. ನಾನು ಜೈಲಿನಲ್ಲಿದ್ದಾಗ ಸ್ವಾತಂತ್ರ್ಯ ದಿನಾಚರಣೆ ಸಂದರ್ಭದಲ್ಲಿ ನನ್ನ ಅನುಪಸ್ಥಿತಿಯಲ್ಲಿ ಆತಿಶಿ ಅವರಿಂದ ಧ್ವಜಾರೋಹಣಕ್ಕೆ ಅನುಮತಿ ಕೋರಿ ರಾಜ್ಯಪಾಲರಿಗೆ ಪತ್ರ ಬರೆದಿದ್ದೆ. ಆದ್ರೆ ಪತ್ರವನ್ನು ಹಿಂತಿರುಗಿಸಿದರು. ನನ್ನ ಕುಟುಂಬವನ್ನು ಭೇಟಿ ಮಾಡಬೇಕೆಂದು ಮತ್ತೊಂದು ಪತ್ರ ಬರೆದೆ, ಅದನ್ನೂ ತಿರಸ್ಕರಿಸಲಾಯಿತು ಎಂದು ಬೇಸರ ಹೊರಹಾಕಿದ್ದಾರೆ.

## ಅನುಭವ ಮಂಟಪ ಮೊದಲ ಪ್ರಜಾಪ್ರಭುತ್ವದ ಸಾಂಸ್ಥಿಕ ಸಂಕೇತ: ಸಿಎಂ




**ಬೆಂಗಳೂರು, ಸೆ, 15 ;** ಬುದ್ದ, ಬಸವಣ್ಣ ಕಾಲದಲ್ಲೂ ಪ್ರಜಾಪ್ರಭುತ್ವದ ವ್ಯವಸ್ಥೆ ಇತ್ತು. ಅನುಭವ ಮಂಟಪವು ಮೊದಲ ಪ್ರಜಾಪ್ರಭುತ್ವದ ಸಾಂಸ್ಥಿಕ ಸಂಕೇತ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು.

ಸಮಾಜ ಕಲ್ಯಾಣ ಇಲಾಖೆಯು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ನಗರಾಭಿವೃದ್ಧಿ ಇಲಾಖೆ, ಅರಣ್ಯ ಜೀವಿಪರಿಸ್ಥಿತಿ ಮತ್ತು ಪರಿಸರ ಇಲಾಖೆ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಉನ್ನತ ಶಿಕ್ಷಣ ಇಲಾಖೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಭಾಗಿತ್ವದಲ್ಲಿ ಆಯೋಜಿಸಿದ್ದ ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಉದ್ಘಾಟಿಸಿ ಮಾತನಾಡಿದ ಮುಖ್ಯಮಂತ್ರಿ, ಸಂವಿಧಾನದ ಸಂಕ್ಷಣೆ ನಮ್ಮ ಕರ್ತವ್ಯ. ಪ್ರಜಾಪ್ರಭುತ್ವ ನಮ್ಮ ಉಸಿರಾಗಬೇಕು. ಡಾ. ಬಾಬಾ ಸಾಹೇಬ ಅಂಬೇಡ್ಕರ್ ಅವರು ದೇಶಕ್ಕೆ ಸಂವಿಧಾನವನ್ನು ಕೊಡುಗೆ ನೀಡಿದ್ದಾರೆ ಎಂದು ತಿಳಿಸಿದರು.

1949 ನವೆಂಬರ್ 25ರಂದು ಡಾ. ಬಾಬಾಸಹಾಹೇಬ್ ಅಂಬೇಡ್ಕರ್ ಅವರು ತಮ್ಮ ಭಾಷಣದಲ್ಲಿ ಸಮಾಜಿಕ, ಆರ್ಥಿಕ ಪ್ರಜಾಪ್ರಭುತ್ವ ಎಲ್ಲರಿಗೂ ಸಿಕ್ಕಿದಾಗ ಮಾತ್ರ ರಾಜಕೀಯ ಸ್ವಾತಂತ್ರ್ಯಕ್ಕೆ ಅರ್ಥಬರುತ್ತದೆ ಎಂದು ತಿಳಿಸಿದ್ದಾರೆ. ನಮ್ಮ ದೇಶದಲ್ಲಿ ಅನೇಕ ಜಾತಿ, ಧರ್ಮ, ಭಾಷೆ, ಸಂಸ್ಕೃತಿಗಳಿವೆ. ನಾವು ವೈವಿಧ್ಯತೆಯಲ್ಲಿ ಏಕತೆ ಕಾಣಬೇಕು. ಯಾವುದೇ ತಾರತಮ್ಯವಿರಬಾರದು. ಡಾ. ಬಾಬಾಸಾಹೇಬ್ ಅಂಬೇಡ್ಕರ್‌ಅವರು ತಿಳಿಸಿರುವಂತೆ ಯಾವುದೇ ಜಾತಿ, ಧರ್ಮ, ಭಾಷೆಗಳಲ್ಲಿ ಮೇಲು ಕೀಳು ಇಲ್ಲ ಎಂದು ಸ್ಪಷ್ಟವಾಗಿ ತಿಳಿಸಿದ್ದಾರೆ. ಸರ್ಕಾರವು ಸಮಾನತೆಯ ದಾರಿಯಲ್ಲಿ ನಡೆಯುವ ಪ್ರಾಮಾಣಿಕ ಪ್ರಯತ್ನ ಮಾಡುತ್ತಿದೆ ಎಂದು ತಿಳಿಸಿದರು. ಡಾ. ಬಾಬಾಸಾಹೇಬ್ ಅಂಬೇಡ್ಕರ್ ಅವರು ತಿಳಿಸಿದಂತೆ ದೇಶದ ಸಂಪತ್ತು ಕೆಲವೇ ಜನರ ಕೈಯಲ್ಲಿ ಇರಬಾರದು. ಹಂಚಿಕೆಯಾದಾಗ ಮಾತ್ರ ಸಮಸಮಾಜ ನಿರ್ಮಾಣವಾಗುತ್ತದೆ. ಬುದ್ಧ, ಬಸವ, ಶರಣರು ಸಮಸಮಾಜದ ಕನಸು ಕಂಡಿದ್ದರು. ಮಹಿಳೆಯರು, ಬಡವರು, ಶೋಷಿತ ವರ್ಗದವರಿಗೆ ಶಿಕ್ಷಣ ಹಾಗೂ ಆರ್ಥಿಕ ಶಕ್ತಿ ತುಂಬಬೇಕು ಎಂಬ ಉದ್ದೇಶದಿಂದ 5 ಗ್ಯಾರಂಟಿ ಯೋಜನೆಯನ್ನು ಜಾರಿಗೆ ತರಲಾಗಿದೆ.

ಸಂವಿಧಾನದ ಪೀಠಿಕೆಯಲ್ಲಿ ಮೌಲ್ಯಗಳು ಇವೆ. ಸಂವಿಧಾನದ ಪೀಠಿಕೆ, ಸಂವಿಧಾನ ರಚಿಸಿದ ಉದ್ದೇಶ ತಿಳಿದವರು ಮಾತ್ರ ಸಮಸಮಾಜ ನಿರ್ಮಾಣ ಮಾಡಲು ಸಾಧ್ಯ. ಸಂವಿಧಾನದ ಪೀಠಿಕೆಯನ್ನು ಸರ್ಕಾರಿ ಶಾಲಾ, ಕಾಲೇಜುಗಳಲ್ಲಿ ಓದಿಸಿ ಅರ್ಥೈಸುವ ಪ್ರಯತ್ನ ಮಾಡಲಾಗುತ್ತಿದೆ. ವಿಚಿದ್ರಕಾರಕ ದುಷ್ಟ ಶಕ್ತಿಗಳು ಏಕತೆಯ ಹೆಸರಿನಲ್ಲಿ ಸಮಾಜ ಒಡೆಯುವ ಕೆಲಸ ಮಾಡುತ್ತಿದ್ದಾರೆ. ಯಾವುದೇ ಕಾರಣಕ್ಕೂ ಸಮಾಜ ಒಡೆಯುವ ಶಕ್ತಿಗಳನ್ನು ಪ್ರಬಲವಾಗಲು ಬಿಡಬಾರದು ಎಂದು ತಿಳಿಸಿದರು.

ನಮ್ಮ ರಾಷ್ಟ್ರಗೀತೆ, ನಾಡಗೀತೆಯಲ್ಲಿರುವ ಭಾರತ ಮತ್ತು ಕರ್ನಾಟಕ ನಮ್ಮದಾಗಬೇಕು. ಯಾವುದೇ ತಾರತಮ್ಯವಿಲ್ಲದ ಶಾಂತಿಯ ತೋಟವಾಗಬೇಕು ಎಂದು ನುಡಿದರು. ಸಮಾಜ ಕಲ್ಯಾಣ ಸಚಿವ ಡಾ. ಎಚ್.ಸಿ. ಮಹಾದೇವಪ್ಪ ಮಾತನಾಡಿ ವಿಶ್ವ ಸಂಸ್ಥೆಯ ಸಾಮಾನ್ಯ ಸಭೆಯು 2007 ರಲ್ಲಿ ಅಂಗೀಕರಿಸಿದ ನಿರ್ಣಯದಂತೆ 15 ನೇ ಸೆಪ್ಟೆಂಬರ್ ರಂದು ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಯನ್ನು ಆಚರಿಸಲು ಪ್ರಾರಂಭಿಸಲಾಯಿತು. ಈ ದಿನವು ಪ್ರಜಾಪ್ರಭುತ್ವದ ಸ್ಥಿತಿಗತಿಯನ್ನು ಪರಿಶೀಲಿಸಲು ಮತ್ತು ಜಾಗತಿಕವಾಗಿ ಪ್ರಜಾಪ್ರಭುತ್ವದ ತತ್ವಗಳನ್ನು ಉತ್ತೇಜಿಸುವ ಉದ್ದೇಶವನ್ನು ಹೊಂದಿದೆ. ವಿಶ್ವಸಂಸ್ಥೆ ಮತ್ತು ಇತರ ಅಂತಾರಾಷ್ಟ್ರೀಯ ಸಂಸ್ಥೆಗಳು ಮಾನವ ಹಕ್ಕುಗಳ ರಕ್ಷಣೆ, ಅಭಿವೃದ್ಧಿ, ಶಾಂತಿ ಮತ್ತು ಸ್ಥಿರತೆಯ ಮೂಲಕ ಪ್ರಜಾಪ್ರಭುತ್ವವನ್ನು ಬಲಪಡಿಸಲು, ಅದರ ಮೌಲ್ಯಗಳು ತತ್ವಗಳನ್ನು ಎತ್ತಿಹಿಡಿಯಲು ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವದ ದಿನವನ್ನು ಆಚರಿಸಲಾಗುತ್ತಿದೆ ಎಂದು ತಿಳಿಸಿದರು.

ಭಾರತ. ದೇಶದ ಸರ್ವತೋಮುಖ ಅಭಿವೃದ್ದಿಯಲ್ಲಿ ಸಂವಿಧಾನವು ದಾರಿದೀಪವಾಗಿದೆ. ಬೀದರ್ ನಿಂದ ಚಾಮರಾಜನಗರದವರೆಗಿನ ಕರ್ನಾಟಕದ ಅತಿ ಉದ್ದದ ಮಾನವ ಸರಪಳಿ ಕಾರ್ಯಕ್ರಮವು ನಾವು ಪ್ರಜಾಪ್ರಭುತ್ವಕ್ಕೆ ನೀಡುವ ಗೌರವವಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಇಂಧನ ಇಲಾಖೆ ಸಚಿವ ಕೆ.ಜೆ. ಜಾರ್ಜ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಇಲಾಖೆಯ ಸಚಿವ ಪ್ರಿಯಾಂಕ್ ಖರ್ಗೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಚಿವ ದಿನೇಶ್ ಗುಂಡೂರಾವ್, ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ನಸೀರ್ ಅಹಮದ್, ಶಿವಾಜಿನಗರದ ಶಾಸಕರಾದ ರಿಜ್ವಾನ್ ಅರ್ಷದ್, ಶಾಸಕರು,



ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ ಅವರು ಮಾತನಾಡಿ ಇಡೀ ಜಗತ್ತಿನಲ್ಲಿಯೇ ಶ್ರೇಷ್ಠವಾದ ಪ್ರಜಾಪ್ರಭುತ್ವ ಹೊಂದಿರುವ ದೇಶ ಸಮಾಜ ಕಲ್ಯಾಣ ಇಲಾಖೆಯ ಆಯುಕ್ತ ಡಾ. ರಾಕೇಶ್ ಕುಮಾರ್ ಕೆ, ಪದ್ಮಶ್ರೀ ಪುರಸ್ಕೃತ ಹರೇಕಳ ಹಾಜಬ್ಬ ಮತ್ತಿತರರು ಹಾಜರಿದ್ದರು.

## ಚಂಡಮಾರುತ: ಮ್ಯಾನ್ಮಾರ್‌ನಲ್ಲಿ ಮೃತರ ಸಂಖ್ಯೆ 74ಕ್ಕೆ ಏರಿಕೆ

**ಯಾಂಗಾನ್, ಸೆ.15:** ಮ್ಯಾನ್ಮಾರ್‌ನಲ್ಲಿ ಯಾಗಿ ಚಂಡಮಾರುತದ ಬಳಿಕ ಪ್ರವಾಹ ಹಾಗೂ ಭೂಕುಸಿತಕ್ಕೆ ಸಿಲುಕಿ ಮೃತಪಟ್ಟವರ ಸಂಖ್ಯೆ ಕನಿಷ್ಠ 74ಕ್ಕೆ ಏರಿದೆ. 89 ಮಂದಿ ನಾಪತ್ತೆಯಾಗಿದ್ದಾರೆ ಎಂದು ಸರಕಾರಿ ಸ್ವಾಮ್ಯದ ಟಿವಿ ವಾಹಿನಿ ವರದಿ ಮಾಡಿದೆ.

ಕೆಲವು ಪ್ರಾಂತಗಳಿಂದ ಸರಿಯಾದ ಮಾಹಿತಿ ಲಭ್ಯವಾಗಿಲ್ಲದ ಕಾರಣ ಸಾವು–ನೋವಿನ ಸಂಖ್ಯೆ ಹೆಚ್ಚುವ ಸಾಧ್ಯತೆಯಿದೆ.

ಸುಮಾರು 2,40,000 ಜನರನ್ನು ಸ್ಥಳಾಂತರಿಸಲಾಗಿದೆ . ಮಧ್ಯ ಮ್ಯಾನ್ಮಾರ್‌ನ ಮಂಡಾಲೆಯ್ ಮತ್ತು ಬಾಗೋ ಹಾಗೂ ಪೂರ್ವದ ಶಾನ್ ರಾಜ್ಯ, ರಾಜಧಾನಿ ನೈಪಿಟಾವ್‌ನಲ್ಲಿ ಬುಧವಾರದಿಂದ ನಿರಂತರ ಮಳೆಯಾಗುತ್ತಿದ್ದು ತಗ್ಗು ಪ್ರದೇಶಗಳು ಜಲಾವೃತಗೊಂಡಿವೆ.

ದೇಶದ ಪೂರ್ವ ಮತ್ತು ಮಧ್ಯ ಪ್ರಾಂತದಲ್ಲಿ ಪ್ರವಾಹ ಮತ್ತು ಭೂಕುಸಿತದಿಂದ 24 ಸೇತುವೆಗಳು, 375 ಶಾಲಾ ಕಟ್ಟಡಗಳು, ಒಂದು ಬೌದ್ಧ ಮಠ, ಐದು ಅಣೆಕಟ್ಟು, 4 ಪಗೋಡ(ಗುಡಿ)ಗಳು, 14 ವಿದ್ಯುತ್ ಟ್ರಾನ್ಸ್‌ಫಾರ್ಮರ್‌ಗಳು, 456 ಬೀದಿದೀಪದ ಕಂಬಗಳು, 65,000ಕ್ಕೂ ಅಧಿಕ ಮನೆಗಳಿಗೆ ಹಾನಿಯಾಗಿದೆ ಎಂದು ವರದಿ ಹೇಳಿದೆ.



ತಮಿಳುನಾಡಿನ ಕಾಂಚೀಪುರಂನಲ್ಲಿ ಶಂಕರ ಮಹಿಳೆಯರ ನರ್ಸಿಂಗ್ ಕಾಲೇಜ್‌ಗೆ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಭಾನುವಾರ ಉದ್ಘಾಟಿಸಿದರು.

# ಜೆಎಂಎಂ ಪಕ್ಷಕ್ಕೆ ಕಾಂಗ್ರೆಸ್‌ನ ಭೂತ ಅಂಟಿಕೊಂಡಿದೆ-ಮೋದಿ ಗುಡುಗು

**ರಾಂಚಿ, ಸೆ.15–** ಜಾರ್ಖಂಡ್ ಮುಕ್ತಿ ಮೋರ್ಚಾ (ಎಒಒ) ಪಕ್ಷ ಬಾಂಗ್ಲಾದೇಶ ಹಾಗೂ ರೊಹಿಂಗ್ಯಾಗಳ ಪರ ನಿಂತಿದೆ. ಈ ನುಸುಳುಕೋರರು ಮತ್ತು ಉಗ್ರರು ಜೆಎಂಎಂ ಅನ್ನು ವಶಪಡಿಸಿಕೊಳ್ಳುತ್ತಿದ್ದಾರೆ. ಜೆಎಂಎಂ ಪಕ್ಷಕ್ಕೆ ಕಾಂಗ್ರೆಸ್‌ನ ಭೂತ ಅಂಟಿಕೊಂಡಿರುವುದರಿಂದಲೇ ಇದೆಲ್ಲಾ ನಡೆಯುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಗುಡುಗಿದ್ದಾರೆ.



ಜಾರ್ಖಂಡ್‌ನ ಜಮ್‌ಷೆಡ್ಪುರದಲ್ಲಿ ನಡೆದ ರ್‍ಯಾಲಿಯನ್ನುದ್ದೇಶಿಸಿ ಮಾತನಾಡಿದ ಮೋದಿ ರಾಜ್ಯದ ಆಡಳಿತಾರೂಢ ಜೆಎಂಎಂ ವಿರುದ್ಧ ವಾಗ್ದಾಳಿ ನಡೆಸಿರು. ಸಂತಾಲ್ ಪರಗಣದಲ್ಲಿ ಆದಿವಾಸಿ ಜನಸಂಖ್ಯೆಯು ವೇಗವಾಗಿ ಕುಸಿಯುತ್ತಿದೆ.

ಜಮೀನುಗಳನ್ನು ಕಸಿದುಕೊಳ್ಳಲಾಗುತ್ತಿದೆ. ನುಸುಳುಕೋರರು ಪಂಚಾಯಿತಿಗಳಲ್ಲಿ ಸ್ಥಾನಗಳನ್ನು ಪಡೆದುಕೊಳ್ಳುತ್ತಿದ್ದಾರೆ.

ಹೆಣ್ಣು ಮಕ್ಕಳ ಮೇಲಿನ ಅಪರಾಧ ಘಟನೆಗಳು ಹೆಚ್ಚುತ್ತಿವೆ. ನುಸುಳುಕೋರರಿಂದಾಗಿ ಜಾರ್ಖಂಡ್ ಅಸುರಕ್ಷಿತವಾಗಿದೆ ಎಂದು ಹೇಳಿದರು. ಜೆಎಂಎಂ ಬಾಂಗ್ಲಾದೇಶಿಗಳು ಮತ್ತು ರೋಹಿಂಗ್ಯಾಗಳ ಪರ ನಿಂತಿದೆ. ಈ ನುಸುಳುಕೋರರು ಮತ್ತು ಉಗ್ರರು ಜೆಎಂಎಂ ಅನ್ನು ವಶಪಡಿಸಿಕೊಳ್ಳುತ್ತಿದ್ದಾರೆ. ಕಾಂಗ್ರೆಸ್‌ನ ಭೂತ ಜೆಎಂಎಂಗೆ ಪ್ರವೇಶಿಸಿದ್ದರಿಂದಲೇ ಇದೆಲ್ಲವೂ ಸಂಭವಿಸುತ್ತಿದೆ.

ಕಾಂಗ್ರೆಸ್ ಭೂತ ಯಾವುದೇ ಪಕ್ಷಕ್ಕೆ ಪ್ರವೇಶಿಸಿದರೂ ಆ ಎಲ್ಲಾ ಪಕ್ಷದ ಅಜೆಂಡಾ ಒಂದೇ ಆಗುತ್ತದೆ. ಧರ್ಮದ ಆದಾರದ ಮೇಲೆ ಆ ಎಲ್ಲಾ ಪಕ್ಷಗಳು ವೋಟ್ ಬ್ಯಾಂಕ್‌ಅನ್ನು ರೂಪಿಸಿಕೊಳ್ಳಲು ಬಯಸುತ್ತವೆ ಎಂದರು. ಒಳನುಸುಳುವಿಕೆ ಜಾರ್ಖಂಡ್‌ನ ದೊಡ್ಡ ಸಮಸ್ಯೆಯಾಗುತ್ತಿದೆ.

ಚಿಕ್ಕ ಹೆಣ್ಣುಮಕ್ಕಳ ಹೆತ್ತವರು ಚಿಂತಿತರಾಗಿದ್ದಾರೆ. 2–3 ದಿನಗಳ ಹಿಂದೆ ಜಾರ್ಖಂಡ್ ಹೈಕೋರ್ಟ್ ಒಳನುಸುಳುವಿಕೆಯ ತನಿಖೆಗೆ ಸ್ವತಂತ್ರ ಸಮಿತಿಗೆ ಆದೇಶಿಸಿತ್ತು. ಆದರೆ ಜಾರ್ಖಂಡ್‌ನಲ್ಲಿ ಒಳನುಸುಳುವಿಕೆ ಇದೆ ಎಂದು ಒಪ್ಪಿಕೊಳ್ಳಲು ಜೆಎಂಎಂ ಸರ್ಕಾರ ಸಿದ್ಧವಿಲ್ಲ ಎಂದು ವಾಗ್ದಾಳಿ ನಡೆಸಿದರು.

# ಕೇಜ್ರಿವಾಲ್ ರಾಜೀನಾಮೆಗೆ ನಿರ್ಧಾರ ದೆಹಲಿಗೆ ಯಾರು ಹೊಸ ಸುಲ್ತಾನ..?



**ನವದೆಹಲಿ, ಸೆ.15–**ದೆಹಲಿ ಅಬಕಾರಿ ನೀತಿ ಪ್ರಕರಣದಲ್ಲಿ ಜಾಮೀನಿನ ಮೇಲೆ ಹೊರಗಿರುವ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡುವುದಾಗಿ ಘೋಷಿಸಿದ್ದಾರೆ. ಕೇಜ್ರಿವಾಲ್ ಪ್ರಾಮಾಣಿಕರು ಎಂದು ಸಾರ್ವಜನಿಕರು ತೀರ್ಪು ನೀಡುವವರೆಗೂ ನಾನು ಮುಖ್ಯಮಂತ್ರಿ ಕುರ್ಚಿಯಲ್ಲಿ ಕುಳಿತುಕೊಳ್ಳುವುದಿಲ್ಲ, ದೆಹಲಿ ಜನರ ಆದೇಶದ ನಂತರವೇ ನಾನು ಮುಖ್ಯಮಂತ್ರಿ ಕುರ್ಚಿಯಲ್ಲಿ ಕುಳಿತುಕೊಳ್ಳುತ್ತೇನೆ ಎಂದು ಹೇಳಿದ್ದಾರೆ.

ಅರವಿಂದ್ ಕೇಜ್ರಿವಾಲ್ ನಿರ್ಧಾರದ ಬೆನ್ನಲೆ ಮಾಜಿ ಡಿಸಿಎಂ ಮನೀಷ್ ಸಿಸೋಡಿಯ ನಾನು ಸರ್ಕಾರದಲ್ಲಿ ಯಾವುದೇ ಜವಬ್ದಾರಿ ಅಥಾವ ಹುದ್ದೆ ವಹಿಸಿಕೊಳ್ಳುವುದಿಲ್ಲ, ಕೇಜ್ರಿವಾಲ್ ಜೊತೆಗೆ ಜನರ ಬಳಿ ಹೋಗಲಿದ್ದೇನೆ ಎಂದು ಸ್ಪಷ್ಟಪಡಿಸಿದ್ದಾರೆ.

ಈ ಹಿನ್ನೆಲೆ ದೆಹಲಿಗೆ ಮುಂದಿನ ಮುಖ್ಯಮಂತ್ರಿ ಯಾರು ಎನ್ನುವ ಬಗ್ಗೆ ತೀವ್ರ ಚರ್ಚೆ ನಡೆಯುತ್ತಿದೆ.

ಸಿಎಂ ರೇಸ್‌ನಲ್ಲಿ ಆತಿಶಿ ಹೆಸರು ಮುಂಚೂಣಿಯಲ್ಲಿದೆ. ದೆಹಲಿ ಸರ್ಕಾರದಲ್ಲಿ ಸಚಿವರಾಗಿರುವ ಆತಿಶಿ ಅವರು ಕಲ್ಕಾಜಿ ಕ್ಷೇತ್ರದಿಂದ ಶಾಸಕರಾ ಗಿದ್ದಾರೆ. ಆತಿಶಿ ಅವರು ದೆಹಲಿ ಸರ್ಕಾರದಲ್ಲಿ ಶಿಕ್ಷಣ, ಉನ್ನತ ಶಿಕ್ಷಣ, TTE, ಹಣಕಾಸು, ಯೋಜನೆ, PWD, ನೀರು, ವಿದ್ಯುತ್, ಸೇವೆಗಳು, ವಿಜಿಲೆನ್ಸ್, ಸಾರ್ವಜನಿಕ ಸಂಪರ್ಕಗಳ ಸಚಿವರಾಗಿದ್ದಾರೆ. ಸಿಎಂ ಕೇಜ್ರಿವಾಲ್ ರಾಜೀನಾಮೆ ಘೋಷಿಸುವ ಮುನ್ನವೇ ಆತಿಶಿ ಅವರನ್ನು ಪ್ರಸ್ತಾಪಿಸಿದ್ದರು. ನಾನು ಸ್ವಾತಂತ್ರ್ಯ ದಿನಾಚರಣೆಯಂದು ಧ್ವಜಾರೋಹಣ ಆತಿಶಿಗೆ ಅವಕಾಶ ನೀಡಲು ಕೇಜ್ರಿವಾಲ್ ಉಪರಾಜ್ಯಪಾಲರಿಗೆ ಪತ್ರ ಬರೆದಿದ್ದರು.

ಆತಿಶಿ ಜೊತೆಗೆ ಸಚಿವ ಸೌರಭ ಭಾರದ್ವಾಜ ಹೆಸರು ಸಿಎಂ ರೇಸ್‌ನಲ್ಲಿದೆ, ಗ್ರೇಟರ್ ಕೈಲಾಶ್ ಕ್ಷೇತ್ರದಿಂದ ಶಾಸಕರಾಗಿರುವ ಅವರು, ದೆಹಲಿ ಸರ್ಕಾರದಲ್ಲಿ ಅರೋಗ್ಯ, ನಗರಾಭಿವೃದ್ಧಿ ಮತ್ತು ಪ್ರವಾಸೋದ್ಯಮ ಸಚಿವರಾಗಿ ದ್ದಾರೆ. ಅಲ್ಲದೇ ಸೌರಭ ಭಾರಧ್ವಾಜ್ ಪಕ್ಷದ ರಾಷ್ಟ್ರೀಯ ವಕ್ತಾರರು ಆಗಿದ್ದಾರೆ.

ಇವರಲ್ಲದೆ ದೆಹಲಿ ಸರ್ಕಾರದ ಸಚಿವ ಗೋಪಾಲ್ ರಾಯ್ ಅವರ ಹೆಸರೂ ಚರ್ಚೆಯಲ್ಲಿದೆ. ಈ ಪಟ್ಟಿಯಲ್ಲಿ ಆಪ್ ಶಾಸಕ ಕುಲದೀಪ್ ಕುಮಾರ್ ಹೆಸರೂ ಸೇರಿದೆ. ಸಿಎಂ ಕೇಜ್ರಿವಾಲ್ ಪತ್ನಿ ಸುನೀತಾ ಕೇಜ್ರಿವಾಲ್ ಹೆಸರಿನ ಬಗ್ಗೆಯೂ ಊಹಾಪೋಹಗಳಿವೆ. ಆದರೆ ಶಾಸಕರ ಸಭೆ ನಡೆಸಿ ಸಿಎಂ ಯಾರಾಗಬೇಕು ಎಂದು ತೀರ್ಮಾನ ಕೈಗೊಳ್ಳಲಾಗುವುದು ಎಂದು ಅರವಿಂದ್ ಕೇಜ್ರಿವಾಲ್ ಹೇಳಿದ್ದಾರೆ. ಹೀಗಾಗೀ ಶಾಸಕಾಂಗ ಪಕ್ಷದ ನಿರ್ಧಾರ ತೀವ್ರ ಕುತೂಹಲ ಮೂಡಿಸಿದೆ.

## ಹರಿಯಾಣದಲ್ಲಿ ಪಕ್ಷ ಅಧಿಕಾರಕ್ಕೆ ಬಂದರೆ ನಾನೇ ಸಿಎಂ ಅನಿಲ್ ವಿಜ್ ಹಕ್ಕು ಪ್ರತಿಪಾದನೆ

# ಬಿಜೆಪಿ ಅಧಿಕಾರಕ್ಕೆ ಬಂದರೆ ನಯಾಬ್ ಸಿಂಗ್ ಸೈನಿ ಮುಂದುವರಿಕೆ

**ನವದೆಹಲಿ, ಸೆ.15–** ಹರಿಯಾಣ ವಿಧಾನಸಭೆ ಚುನಾವಣೆ ನಡುವೆ ಬಿಜೆಪಿಯಲ್ಲಿ ಮುಖ್ಯಮಂತ್ರಿ ಸ್ಥಾನಕ್ಕಾಗಿ ಹಕ್ಕು ಪ್ರತಿಪಾದನೆ ಆರಂಭವಾಗಿದೆ. ಹಿರಿಯ ನಾಯಕ ಮತ್ತು ಮಾಜಿ ಸಚಿವ ಅನಿಲ್ ವಿಜ್ ಅವರು ತಮ್ಮ ಹಿರಿತನವನ್ನು ಉಲ್ಲೇಖಿಸಿ ಮುಂಬರುವ ಹರಿಯಾಣ ವಿಧಾನಸಭಾ ಚುನಾವಣೆಯಲ್ಲಿ ಪಕ್ಷವು ಬಹುಮತ ಪಡೆದರೆ ಮುಖ್ಯಮಂತ್ರಿ ಸ್ಥಾನಕ್ಕೆ ನಾನು ಹಕ್ಕು ಪ್ರತಿಪಾದಿಸುವುದಾಗಿ ಹೇಳಿದ್ದಾರೆ.



ಬಿಜೆಪಿ ಮತ್ತೆ ಅಧಿಕಾರಕ್ಕೆ ಬಂದರೆ ಹಾಲಿ ಮುಖ್ಯಮಂತ್ರಿ ನಯಾಬ್ ಸಿಂಗ್ ಸೈನಿ ಮುಖ್ಯಮಂತ್ರಿ ಯಾಗುತ್ತಾರೆ ಎಂದು ಪಕ್ಷವು ಸ್ಪಷ್ಟಪಡಿಸಿರುವ ಹೊತ್ತಲ್ಲೆ ಆರು ಮಂದಿ ಹಿರಿಯ ಶಾಸಕರಿಂದ ಟೀಕೆಗಳು ವ್ಯಕ್ತವಾಗಿದೆ. ಚುನಾವಣೆ ಹೊತ್ತಿನಲ್ಲಿ ಈ ವಿಷಯ ಹೊಸ ತಲೆನೋವು ತಂದಿದೆ.


ಹರಿಯಾಣ ವಿಧಾನಸಭೆ ಚುನಾವಣೆ ಕುರಿತು ಮಾಧ್ಯಮ ಗಳೊಂದಿಗೆ ಮಾತನಾಡಿದ ಹರಿಯಾಣದ ಮಾಜಿ ಸಚಿವ ಅನಿಲ್ ವಿಜ್, ನಾನು ಇವತ್ತಿನವರೆಗೂ ಪಕ್ಷದಿಂದ ಏನನ್ನೂ ಕೇಳಿಲ್ಲ ಆದರೆ, ಈ ಬಾರಿ ನನ್ನ ಹಿರಿತನದ ಆಧಾರದ ಮೇಲೆ, ನಾನು ಮುಖ್ಯಮಂತ್ರಿ ಸ್ಥಾನಕ್ಕೆ ಹಕ್ಕು ಸಾಧಿಸುತ್ತೇನೆ. ಹರ್ಯಾಣದ ಜನರು ನನ್ನನ್ನು ಭೇಟಿಯಾಗಲು ಬರುತ್ತಿದ್ದಾರೆ, ನಾನು ಅತ್ಯಂತ ಹಿರಿಯನಾಗಿದ್ದೇನೆ ಮತ್ತು ಜನರ ಬೇಡಿಕೆಯ ಮೇರೆಗೆ ನಾನು ಈ ಬಾರಿ ಮುಖ್ಯಮಂತ್ರಿ ಯಾಗುತ್ತೇನೆ ಎಂದು ಹೇಳಿ ಕೊಂಡಿದ್ದಾರೆ.

ಪಕ್ಷವು ನನ್ನನ್ನು ಹರಿಯಾಣದ ಮುಖ್ಯಮಂತ್ರಿಯನ್ನಾಗಿ ನೇಮಿಸಿದರೆ, ನಾನು ಹರಿಯಾಣದ ಹಣೆಬರಹ ಮತ್ತು ಚಿತ್ರವನ್ನು ಬದಲಾಯಿಸುತ್ತೇನೆ ಎಂದು ವಿಜ್ ಸೇರಿಸಿದರು. ಈ ವರ್ಷದ ಮಾರ್ಚ್‌ನ್ನಲ್ಲಿ ಆಡಳಿತ ವಿರೋಧಿ ಅಲೆ ಭೀತಿ ಹಿನ್ನೆಲೆಯಲ್ಲಿ ಮನೋಹರ್ ಲಾಲ್ ಖಟ್ಟರ್ ಬದಲಿಗೆ ಸೈನಿ ಅವರನ್ನು ಮುಖ್ಯಮಂತ್ರಿಯಾಗಿ ಬಿಜೆಪಿ ಹೈಕಮಾಂಡ್ ಆಯ್ಕೆ ಮಾಡಿತ್ತು. ನೂತನ ಸಚಿವ ಸಂಪುಟದಲ್ಲಿ ಅನಿಲ್ ವಿಜ್‌ಗೆ ಸಚಿವ ಸ್ಥಾನ ಸಿಕ್ಕಿರಲಿಲ್ಲ.

# ಕೇಜ್ರಿವಾಲ್ ರಾಜೀನಾಮೆ ನಿರ್ಧಾರಕ್ಕೆ ಬಿಜೆಪಿ-ಕಾಂಗ್ರೆಸ್ ವ್ಯಂಗ್ಯ

**ನವದೆಹಲಿ, ಸೆ.15–**ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರ ರಾಜೀನಾಮೆ ಘೋಷಣೆಯನ್ನು ಬಿಜೆಪಿ ಅಪಹಾಸ್ಯ ಮಾಡಿದೆ ಮತ್ತು ಅವರ ಜೈಲಿನಿಂದ ಬಿಡುಗಡೆಯನ್ನು ಅವರ ಮುಂದೆ ಇರಿಸಲಾದ ಆದರೆ ಕೈಗೆಟುಕದ ಸಿಹಿತಿಂಡಿಗೆ ಹೋಲಿಸಿದೆ. ಈ ಬಗ್ಗೆ ಬಿಜೆಪಿ ದೆಹಲಿ ಎಕ್ಸ್‌ನಲ್ಲಿ ವೀಡಿಯೊ ಬಿಡುಗಡೆ ಮಾಡಿದೆ.





ರಾಜೀನಾಮೆ ನೀಡುವ ಅರವಿಂದ್ ಕೇಜ್ರಿವಾಲ್ ಹೇಳಿಕೆಗೆ ಪ್ರತಿಕ್ರಿಯಿಸಿದ ಬಿಜೆಪಿ ರಾಷ್ಟ್ರೀಯ ವಕ್ತಾರ ಪ್ರದೀಪ್ ಭಂಡಾರಿ, ಇದು "ಪಿಆರ್ ಸ್ಟಂಟ್" ಎಂದು ಹೇಳಿದ್ದಾರೆ. ಕೇಜ್ರಿವಾಲ್ ಪ್ರಯತ್ನವು ಕಳಂಕಿತ ಇಮೇಜ್ ಅನ್ನು ಮರುಸ್ಥಾಪಿಸುವ ಪ್ರಯತ್ನವಾಗಿದೆ. "ಸೋನಿಯಾ ಗಾಂಧಿ ಮಾದರಿ"ಗೆ ಹೋಲಿಸಿದ ಅವರು, ಅಲ್ಲಿ ಅವರು ತೆರೆಮರೆಯಿಂದ ಸರ್ಕಾರವನ್ನು ನಿಯಂತ್ರಿಸಿದರು. ಇಲ್ಲಿ ಇವರು ಸರ್ಕಾರ ನಿಯಂತ್ರಿಸಲಿದ್ದಾರೆ. ಮುಂಬರುವ ದೆಹಲಿ ಚುನಾವಣೆಯಲ್ಲಿ ಎಎಪಿ ಸೋಲುವ ಭಯದಲ್ಲಿದೆ ಮತ್ತು ಸೋಲಿಗೆ ಬೇರೊಬ್ಬರನ್ನು ಬಲಿಪಶು ಮಾಡಲಿ ಪ್ರಯತ್ನಿಸುತ್ತಿದ್ದಾರೆ ಎಂದು ಹೇಳಿದರು.

ಮತ್ತೊಬ್ಬ ಬಿಜೆಪಿ ನಾಯಕ ಮಂಜಿಂದರ್ ಸಿಂಗ್ ಸಿರ್ಸಾ ಪ್ರತಿಕ್ರಿಯಿಸಿ, ಕೇಜ್ರಿವಾಲ್ ಅವರು ತ್ಯಾಗದಿಂದ ಕೆಳಗಿಳಿಯುತ್ತಿಲ್ಲ, ಅವರು ಮುಖ್ಯಮಂತ್ರಿ ಕಚೇರಿಗೆ ಹಿಂತಿರುಗುವುದನ್ನು ಅಥವಾ ಕಡತಗಳಿಗೆ ಸಹಿ ಹಾಕುವುದನ್ನು ನಿಷೇಧಿಸುವ ಸುಪ್ರೀಂ ಕೋರ್ಟ್ ಆದೇಶದ ಕಾರಣ ಅವರು ರಾಜೀನಾಮೆ ನೀಡುವ ಪರಿಸ್ಥಿತಿ ಬಂದಿದೆ. ಕೇಜ್ರಿವಾಲ್‌ಗೆ ರಾಜೀನಾಮೆ ನೀಡದೆ ಬೇರೆ ದಾರಿಯಿಲ್ಲ,, ಲೋಕಸಭೆಯಂತೆ ವಿಧಾನಸಭೆಯಲ್ಲಿ ಜನರು ಪಾಠ ಕಲಿಸಲಿದ್ದಾರೆ ಎಂದರು. ಕೇಜ್ರಿವಾಲ್ ಅವರು ತಮ್ಮ ಪತ್ನಿಯನ್ನು ಮುಂದಿನ ಸಿಎಂ ಆಗಿ ನೇಮಿಸಲು ಶಾಸಕರನ್ನು ಮನವೊಲಿಸಲು ಎರಡು ದಿನಗಳ ಅವಧಿಯನ್ನು ಬಳಸುತ್ತಿದ್ದಾರೆ ಮತ್ತು ಮದ್ಯದ ಹಗರಣದಲ್ಲಿ ಭಾಗಿಯಾಗಿರುವ ಕಾರಣ ಅವರನ್ನು ಅಧಿಕಾರದಿಂದ ಹೊರಹಾಕಲಾಗಿದೆ ಎಂದು ಇದೇ ವೇಳೆ ಆರೋಪಿಸಿದರು.

ಬಿಜೆಪಿ ನಾಯಕಿ ಶಾಜಿಯಾ ಪ್ರತಿಕ್ರಿಯಿಸಿ, 'ಅರವಿಂದ್ ಕೇಜ್ರಿವಾಲ್ ರಾಜಕೀಯ ತಂತ್ರಗಾರಿಕೆಯಲ್ಲಿ ಮಾಸ್ಟರ್. ಜೈಲಿನಲ್ಲಿದ್ದಾಗ ಆ 5 ತಿಂಗಳಲ್ಲೇ ರಾಜೀನಾಮೆ ಕೊಡಬೇಕಿತ್ತು ಎಂದು ಗೊತ್ತು, ಅನುಕಂಪ ಗಿಟ್ಟಿಸಲು ಇದೊಂದೇ ದಾರಿ ಎಂದು ಉದ್ದೇಶಪೂರ್ವಕವಾಗಿ ರಾಜೀನಾಮೆ ಬಗ್ಗೆ ಮಾತನಾಡುತ್ತಿದ್ದಾರೆ. ಬಹಳ ಹಿಂದೆಯೇ ರಾಜೀನಾಮೆ ನೀಡಬೇಕಿತ್ತು. ದೆಹಲಿಯ ಜನರು ಅವರ ವಾಸ್ತವವನ್ನು ಸಂಪೂರ್ಣವಾಗಿ ಅರ್ಥಮಾಡಿಕೊಂಡಿದ್ದಾರೆ ಎಂದು ನಾನು ಭಾವಿಸುತ್ತೇನೆ ಎಂದು ಹೇಳಿದರು.

**ರಾಜೀನಾಮೆ ನಿರ್ಧಾರಕ್ಕೆ ಕಾಂಗ್ರೆಸ್ ಟೀಕೆ:** ದೆಹಲಿ ಸಿಎಂ ಅರವಿಂದ್ ಕೇಜ್ರಿವಾಲ್ ರಾಜೀನಾಮೆ ಘೋಷಣೆಗೆ ಪ್ರತಿಕ್ರಿಯಿಸಿದ ಕಾಂಗ್ರೆಸ್ ನಾಯಕ ಸಂದೀಪ್ ದೀಕ್ಷಿತ್, ಇದು ಕೇವಲ ಗಿಮಿಕ್ ಎಂದು ಎಂದು ವ್ಯಂಗ್ಯವಾಡಿದ್ದಾರೆ. ಕೇಜ್ರಿವಾಲ್ ಅವರು ಬಹಳ ಹಿಂದೆಯೇ ರಾಜೀನಾಮೆ ನೀಡಬೇಕಿತ್ತು, "ಅವರು ಮತ್ತೆ ಸಿಎಂ ಆಗುವ ಪ್ರಶ್ನೆಯೇ ಇಲ್ಲ" ಎಂದು ಹೇಳಿದರು.

ನಾಯಕರೊಬ್ಬರು ಜಾಮೀನಿನ ಮೇಲೆ ಬಿಡುಗಡೆಯಾಗಿರುವುದು ಇದೇ ಮೊದಲು, ಮುಖ್ಯಮಂತ್ರಿ ಕಚೇರಿಗೆ ಹಿಂತಿರುಗದಂತೆ ಅಥವಾ ಯಾವುದೇ ಅಧಿಕೃತ ಪತ್ರಗಳಿಗೆ ಸಹಿ ಹಾಕದಂತೆ ಸುಪ್ರೀಂಕೋರ್ಟ್‌ನಿಂದ ಸೂಚನೆ ನೀಡಲಾಗಿದೆ. ಇಂತಹ ಷರತ್ತುಗಳು ಕೇಜ್ರಿವಾಲ್ ಸಾಕ್ಷ್ಯವನ್ನು ನಾಶಪಡಿಸುವ ಬಗ್ಗೆ ನ್ಯಾಯಾಲಯದ ಕಳವಳವನ್ನು ಪ್ರತಿಬಿಂಬಿಸುತ್ತವೆ ಸುಪ್ರೀಂಕೋರ್ಟ್ ಅವರನ್ನು ಅಪರಾಧಿಯಂತೆ ಪರಿಗಣಿಸುತ್ತಿದೆ ಎಂದು ಹೇಳಿದರು.




ಪಟನಾದಲ್ಲಿ ಭಾನುವಾರ ಅಖಿಲ ಭಾರತ ಮುಸ್ಲಿಂ ವೈಯಕ್ತಿಕ ಕಾನೂನು ಮಂಡಳಿ, ಇಮಾರತ್-ಎ-ಶರಿಯಾ ಬಿಹಾರ್, ಒಡಿಶಾ, ಜಾರ್ಖಂಡ್ ಮತ್ತು ಪಶ್ಚಿಮ ಬಂಗಾಳ, ಫುಲ್ವಾರಿ ಷರೀಫ್ ಪಟನಾ, ಬಾಪು ಸಭಾಗರ್ ಸಭಾಂಗಣದಲ್ಲಿ ತಹಫುಜ್-ಎ-ಔಕಾಫ್ (ವಕ್ಫ್ ಆಸ್ತಿ ರಕ್ಷಣೆ) ಕುರಿತ ಸಮ್ಮೇಳನದಲ್ಲಿ ಭಾಗವಹಿಸಿದರು.

# ನನಗೆ ಪ್ರಧಾನಿಯಾಗುವ ಅವಕಾಶ, ನಾನೇ ಬೇಡ ಎಂದೆ: ಕೇಂದ್ರ ಸಚಿವ ನಿತಿನ್ ಗಡ್ಕರಿ

**ನವದೆಹಲಿ, ಸೆ.15–**2024ರ ಲೋಕಸಭಾ ಚುನಾವಣೆಗೂ ಮುನ್ನ ನೀವು ಪ್ರಧಾನಿ ಹುದ್ದೆಗೆ ಪ್ರಯತ್ನಿಸಿ, ನಾನು ನಿಮಗೆ ಸಪೋರ್ಟ್ ಮಾಡುತ್ತೇನೆ ಎಂದು ವಿರೋಧ ಪಕ್ಷದ ನಾಯಕರೊಬ್ಬರು ನನ್ನನ್ನು ಬೆಂಬಲಿಸಲು ಮುಂದಾಗಿದ್ದರು ಎಂದು ಕೇಂದ್ರ ಸಚಿವ ನಿತಿನ್ ಗಡ್ಕರಿ ಹೇಳಿಕೆ ಈಗ ರಾಜಕೀಯ ವಲಯದಲ್ಲಿ ಸಂಚಲನ ಮೂಡಿಸಿದೆ.



ನಾಗ್ಪುರದಲ್ಲಿ ನಡೆದ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಪಾಲ್ಗೊಂಡು ಗಡ್ಕರಿ ಮಾತನಾಡಿದರು. ಆದರೆ ನಾನು ಆಗಲ್ಲ. ಪ್ರಧಾನಿಯಾಗುವುದು ನನ್ನ ಗುರಿಯಲ್ಲ. ನೀವು ನನ್ನನ್ನು ಏಕೆ ಬೆಂಬಲಿಸಬೇಕು. ನಾನು ನಿಮ್ಮ ಬೆಂಬಲವನ್ನು ಏಕೆ ತೆಗೆದುಕೊಳ್ಳಬೇಕು. ಎಂದು ಅವರಿಗೆ ಪ್ರಶ್ನೆ ಮಾಡಿದ್ದೆ. ನಾನು ಪ್ರಧಾನಿ ಸ್ಥಾನಕ್ಕೆ ಸ್ಪರ್ಧಿಸಲು ಬಯಸಿದರೆ ವಿರೋಧ ಪಕ್ಷದ ನಾಯಕ ನನಗೆ ಬೆಂಬಲ ನೀಡಲು ಮುಂದಾದರು. ಆದರೆ ಅದನ್ನು ನಾನು ನಿರಾಕರಿಸಿದೆ. ಆ ಮಹತ್ವಾಕಾಂಕ್ಷೆಯನ್ನು ಮುಂದು ವರಿಸಲು ತನಗೆ ಯಾವುದೇ ಆಸೆ ಇಲ್ಲ ಎಂದು ಹೇಳಿದೆ. ಆ ವ್ಯಕ್ತಿಯ ಹೆಸರನ್ನು ಹೇಳಲು ಇಷ್ಟಪಡುವುದಿಲ್ಲ ಎಂದು ಹೇಳಿದ್ದಾರೆ.




ತಮಿಳುನಾಡು ಮುಖ್ಯಮಂತ್ರಿ ಮತ್ತು ಡಿಎಂಕೆ ಅಧ್ಯಕ್ಷ ಎಂ ಕೆ ಸ್ಟಾಲಿನ್, ಇತರ ನಾಯಕರು ಭಾನುವಾರ ಚೆನ್ನೈನಲ್ಲಿ ಮಾಜಿ ಮುಖ್ಯಮಂತ್ರಿ ಸಿ ಎನ್ ಅಣ್ಣಾದೊರೈ ಅವರ 116ನೇ ಜನ್ಮದಿನದಂದು ಶ್ರದ್ಧಾಂಜಲಿ ಸಲ್ಲಿಸಿದರು.

## ಅಬಕಾರಿ ನೀತಿ ಹಗರಣ ಬಿಜೆಪಿಯ 'ಕಲ್ಪನಾ ಕಥೆ'

# ಚುನಾವಣೆವರೆಗೂ ಡಿಸಿಎಂ ಹುದ್ದೆ ಬೇಕಿಲ್ಲ-ಮನೀಷ್ ಸಿಸೋಡಿಯ

**ನವದೆಹಲಿ, ಸೆ.15–** ದೆಹಲಿ ವಿಧಾನಸಭೆ ಚುನಾವಣೆಗೆ ಮುನ್ನ ಅರವಿಂದ್ ಕೇಜ್ರಿವಾಲ್ ಅವರನ್ನು ಜೈಲಿಗೆ ತಳ್ಳಲು ಬಿಜೆಪಿ ಪಕ್ಷವು ಮದ್ಯ ನೀತಿ ಹಗರಣದ ಹೆಸರಿನಲ್ಲಿ 'ಕಲ್ಪನಾ ಕಥೆ' ರಚಿಸುತ್ತಿದೆ ಎಂದು ಮಾಜಿ ಡಿಸಿಎಂ ಮನೀಷ್ ಸಿಸೋಡಿಯಾ ಆರೋಪಿಸಿದ್ದಾರೆ. ಸಿಎಂ ಕೇಜ್ರಿವಾಲ್‌ಗೆ ಜಾಮೀನಿ ಹಿನ್ನಲೆ ಪಕ್ಷದ ಕಚೇರಿಯಲ್ಲಿ ಕಾರ್ಯಕರ್ತರನ್ನು ಉದ್ದೇಶಿಸಿ ಅವರು ಮಾತನಾಡಿದರು.



ಬಿಜೆಪಿಯು 'ಮದ್ಯ ಹಗರಣ' ಎಂಬ ಹೆಸರಿನ ಫ್ಯಾಂಟಸಿ ಕಥೆಯನ್ನು ರಚಿಸಿದೆ. ಸುಪ್ರೀಂ ಕೋರ್ಟ್ ಅರವಿಂದ್ ಕೇಜ್ರಿವಾಲ್ ಅವರಿಗೆ ಜಾಮೀನು ನೀಡಿ ಆ ಕಥೆಯನ್ನು ಕೊನೆಗೊಳಿಸಿದೆ. ಇದು ನಮಗೆ ಸುಖಾಂತ್ಯ ಮತ್ತು ಬಿಜೆಪಿಗೆ ದುಃಖದ ಅಂತ್ಯವಾಗಿದೆ ಎಂದು ಸಿಸೋಡಿಯಾ ಹೇಳಿದರು.

ಅವರು ದೆಹಲಿ ಚುನಾವಣೆ ಯವರೆಗೆ ಅರವಿಂದ್ ಕೇಜ್ರಿವಾಲ್ ಅವರನ್ನು ಜೈಲಿನಲ್ಲಿಡಬಹುದು ಎಂದು ಭಾವಿಸಿದ್ದರು, ಆದರೆ ಅವರ ಕಥೆಗಳು ನ್ಯಾಯಾಲಯದಲ್ಲಿ ತಪ್ಪಾಗಿದೆ ಎಂದು ಸಾಬೀತಾಗಿದೆ. ಇಂದು ಅರವಿಂದ್ ಕೇಜ್ರಿವಾಲ್ ಮತ್ತು ನಾನು ಜೈಲಿನಿಂದ ಹೊರಗಿದ್ದೇವೆ, ಇದು ಬಿಜೆಪಿಗೆ ದೊಡ್ಡ ಹಿನ್ನಡೆಯಾಗಿದೆ ಎಂದರು.

ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ಘೋಷಿಸಿದ ನಂತರ, ಮನೀಶ್ ಸಿಸೋಡಿಯಾ ಅವರು ಉಪಮುಖ್ಯಮಂತ್ರಿಯಾಗಿ ಮತ್ತೆ ಸರ್ಕಾರಕ್ಕೆ ಸೇರುವುದಿಲ್ಲ ಎಂದು ಘೋಷಿಸಿದರು ಮತ್ತು ಜನರ ಬೆಂಬಲ ಪಡೆಯಲು ಜನರ ನಡುವೆ ಹೋಗುವುದಾಗಿ ತಿಳಿಸಿದ್ದಾರೆ.

ಈ ಬಗ್ಗೆ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ನಾನು ಅರವಿಂದ್ ಕೇಜ್ರಿವಾಲ್ ಅವರೊಂದಿಗೆ ಸಾರ್ವಜನಿಕ ನ್ಯಾಯಾಲಯಕ್ಕೆ ಹೋಗುತ್ತೇನೆ ಮತ್ತು ಸಾರ್ವಜನಿಕರು ನನ್ನನ್ನು ಪ್ರಾಮಾಣಿಕವಾಗಿ ಪರಿಗಣಿ ಸುತ್ತಾರೆಯೇ ಅಥವಾ ಇಲ್ಲವೇ ಎಂದು ಕೇಳಲು ನಾನು ನಿರ್ಧರಿಸಿದ್ದೇನೆ. ಮೂರ್ನಾಲ್ಕು ತಿಂಗಳಲ್ಲಿ ಚುನಾವಣೆಗಳು ನಡೆಯಲಿವೆ. ನನ್ನ ಪ್ರಾಮಾಣಿಕತೆಯನ್ನು ಸಾರ್ವಜನಿಕರು ಅನುಮೋದಿಸಿದರೆ ಮಾತ್ರ ನಾನು ಉಪ ಮುಖ್ಯಮಂತ್ರಿ- ಶಿಕ್ಷಣ ಸಚಿವರ ಕುರ್ಚಿಯಲ್ಲಿ ಮತ್ತೆ ಕುಳಿತು ಶಿಕ್ಷಣಕ್ಕಾಗಿ ಶ್ರಮಿಸುತ್ತೇನೆ ಎಂದು ಹೇಳಿದ್ದಾರೆ.



ಎಎಪಿ ನಾಯಕ ಮನೀಷ್ ಸಿಸೋಡಿಯಾ ಅವರು ಕುಟುಂಬದವರೊಂದಿಗೆ ಭಾನುವಾರ ನವದೆಹಲಿಯಲ್ಲಿ ಗುರುದೇವ್ ರವಿಶಂಕರ್ ಅವರನ್ನು ಭೇಟಿ ಮಾಡಿದರು.

# ಪ್ರಜಾಪ್ರಭುತ್ವದ ಉಳಿವಿಗಾಗಿ ಮಾನವ ಸರಪಳಿ

## ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಚ್ ಮುನಿಯಪ್ಪ

**ಬೆಂಗಳೂರು (ಗ್ರಾ), ಸೆ.15–** ಸಂವಿಧಾನ ಶಿಲ್ಪಿ ಡಾ.ಬಿ.ಆರ್ ಅಂಬೇಡ್ಕರ್ ಅವರು ಭಾರತ ದೇಶಕ್ಕೆ ಸರ್ವ ಶ್ರೇಷ್ಠ ಸಂವಿಧಾನವನ್ನು ಕೊಟ್ಟಿದ್ದಾರೆ. ಪ್ರಜಾಪ್ರಭುತ್ವ ಉಳಿಯಬೇಕಾದರೆ ಸಂವಿಧಾನದ ಆಶಯಗಳಿಗೆ ಅನುಗುಣವಾಗಿ ಎಲ್ಲಾ ವರ್ಗದ ಜನರು ಭಾವೈಕ್ಯತೆಯಿಂದ ಬದುಕಬೇಕು. ಆಗಲೇ ಪ್ರಜಾಪ್ರಭುತ್ವದ ಉಳಿವು ಸಾಧ್ಯ ಎಂದು ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಸಚಿವರು ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ.ಹೆಚ್ ಮುನಿಯಪ್ಪ ಅವರು ಹೇಳಿದರು.



ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ದೊಡ್ಡಬಳ್ಳಾಪುರ ತಾಲ್ಲೂಕಿನ ಹೆಗ್ಗಡಿಹಳ್ಳಿ ಬಳಿ ಇಂದು ಏರ್ಪಡಿಸಲಾಗಿದ್ದ ಜಿಲ್ಲಾ ಮಟ್ಟದ ತರರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಯ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕರ್ನಾಟಕ ರಾಜ್ಯದಲ್ಲೇ ಮೊಟ್ಟ ಮೊದಲ ಬಾರಿಗೆ ಬೀದರ್ ಇಂದ ಚಾಮರಾಜನಗರ ವರೆಗೆ ಬೃಹತ್ ಮಾನವ ಸರಪಳಿ ಕಾರ್ಯಕ್ರಮ ಆಯೋಜಿಸಲಾಗಿದೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ 77 ಕಿಲೋಮೀಟರ್ ಉದ್ದದ ಬೃಹತ್ ಮಾನವ ಸರಪಳಿಗೆ ಸುಮಾರು 60 ಸಾವಿರಕ್ಕೂ ಹೆಚ್ಚು ಜನರು ಭಾಗವಹಿಸಿ ಕಾರ್ಯಕ್ರಮವನ್ನು ಶಸ್ವಿಗೊಳಿಸಿದ್ದಾರೆ. ಇದಕ್ಕಾಗಿ ಎಲ್ಲಾ ಅಧಿಕಾರಿಗಳು, ಸಿಬ್ಬಂದಿ ವರ್ಗದವರು ಶ್ರಮಿಸಿದ್ದಾರೆ. ಸಂವಿಧಾನದ ಉಳಿವು ಹಾಗು ಪ್ರಜಾಪ್ರಭುತ್ವದ ರಕ್ಷಣೆ ಇದರ ಮೂಲ ಉದ್ದೇಶವಾಗಿದೆ. ಭಾರತ ದೇಶದ ಪ್ರತಿಯೊಬ್ಬ ಪ್ರಜೆಯು ಜಾತ್ಯಾತೀತ ಭಾವನೆಯಿಂದ ಬದುಕಲು ಸಂವಿಧಾನ ಪ್ರಮುಖ ಪಾತ್ರ ವಹಿಸುತ್ತದೆ. ಇದು ರಾಷ್ಟ್ರಪಿತ ಮಹಾತ್ಮಾ ಗಾಂಧಿಜೀಯವರ ಕನಸು ಸಹ ಆಗಿತ್ತು ಎಂದು ಹೇಳಿದರು. ಸಂವಿಧಾನ ಪೀಠಿಕೆಯನ್ನು ಜಿಲ್ಲಾಧಿಕಾರಿ ಡಾ.ಎನ್ ಶಿವಶಂಕರ ಅವರು ಬೋಧಿಸಿದರು.

ಕಾರ್ಯ ಕ್ರಮದಲ್ಲಿ ಜಿಲ್ಲಾ ಗ್ಯಾರಂಟಿ ಅನುಷ್ಠಾನಗಳ ಅಧ್ಯಕ್ಷ ಬಿ. ರಾಜಣ್ಣ, ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರಾಧಿಕಾರದ ಅಧ್ಯಕ್ಷ ವಿ. ಶಾಂತಕುಮಾರ್, ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಸಿ.ಕೆ ಬಾಬಾ, ಸಚಿವರ ಆಪ್ತ ಕಾರ್ಯದರ್ಶಿ ನಟರಾಜ, ತಾಲ್ಲೂಕು ತಹಶೀಲ್ದಾರ್‌ಗಳು, ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು, ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖೆಯ ಉಪನಿರ್ದೇಶಕ ಕೃಷ್ಣಮೂರ್ತಿ, ವಿವಿಧ ಸಂಘಟನೆಗಳು, ಶಾಲಾ–ಕಾಲೇಜು ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು




ಮಂಗಳೂರು ಸಮೀಪದ ಹೆಜಮಾಡಿ–ಮುಲ್ಕಿ ರಸ್ತೆಯಲ್ಲಿ ಭಾನುವಾರ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ ವಿದ್ಯಾರ್ಥಿಗಳು ಹಾಗೂ ಜನರಿಂದ ಮಾನವ ಸರಪಳಿ ರಚನೆ.

# ಕರ್ನಾಟಕದಲ್ಲಿ ಪ್ರಜಾಪ್ರಭುತ್ವ ಎಲ್ಲಿದೆ: ಬಿಜೆಪಿ

**ಬೆಂಗಳೂರು, ಸೆ.15–** ಕರ್ನಾಟಕ ರಾಜ್ಯದಲ್ಲಿ ಪ್ರಜಾಪ್ರಭುತ್ವ ಎಲ್ಲಿದೆ ಎಂದು ವಿಧಾನ ಪರಿಷತ್ ಸದಸ್ಯ ಎನ್.ರವಿಕುಮಾರ್ ಅವರು ಪ್ರಶ್ನಿಸಿದರು.




ಸುದ್ದಿಗಾರರೊಂದಿಗೆ, 'ರಾಜ್ಯ ಸರಕಾರವು ಅಂತರರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ ಬೀದರ್‌ನಿಂದ ಚಾಮ ರಾಜ ನಗರದವರೆಗೆ ಮಾನವ ಸರಪಳಿ ರಚಿಸುತ್ತಿದೆ ಎಂದು ಪ್ರಸ್ತಾಪಿಸಿದರು. ಕರ್ನಾಟಕದಲ್ಲಿ ಸಂವಿಧಾನವನ್ನು ಜಾರಿ ಮಾಡುತ್ತಿದ್ದೀರಾ' ಜಾತ್ಯತೀತ, ಪ್ರಜಾಪ್ರಭುತ್ವವಾದಿ, ಸಂವಿಧಾನ ಯಥಾವತ್ ಜಾರಿಗೊಳಿಸುವ ಸರಕಾರ ಎಂದು ಕಾಂಗ್ರೆಸ್ಸಿಗರು ಹೇಳಿಕೊಳ್ಳುತ್ತಾರೆ. ಬಿಜೆಪಿ ಶಾಸಕ ಮುನಿರತ್ನ ಅವರ ಮೇಲೆ ಅಟ್ರಾಸಿಟಿ ಕೇಸ್ ಆಗಿದ್ದು, ಬಂಧಿಸಿದ್ದೀರ ಒ.ಕೆ. ಆದರೆ, ಒಂದು ತಿಂಗಳಿಗೂ ಹಿಂದೆ ಇದೇ ಅಟ್ರಾಸಿಟಿ ಕೇಸ್ ಕಾಂಗ್ರೆಸ್ಸಿನ ಶಾಸಕ ಚನ್ನಾರೆಡ್ಡಿ ಮೇಲೂ ಆಗಿದೆ. ಎಲ್ಲ ಕಾರ್ಯಕ್ರಮಗಳಲ್ಲಿ ರಾಜಾರೋಷ ವಾಗಿ ಭಾಗವಹಿಸುವ ಅವರನ್ನು ಇನ್ನೂ ಬಂಧಿಸಿಲ್ಲ. ಇದಾ ನಿಮ್ಮ ಪ್ರಜಾಪ್ರಭುತ್ವ ಇದಾ ನಿಮ್ಮ ಸೆಕ್ಯುಲರಿಸಂ, ಇದಾ ನಿಮ್ಮ ಸಂವಿಧಾನ ಸಿದ್ದರಾಮಯ್ಯನವರೇ ಎಂದು ಕೇಳಿದರು.

ನಾಗಮಂಗಲದಲ್ಲಿ ಗಣಪತಿ ಹಬ್ಬ ಮಾಡುವ, ಮೆರವಣಿಗೆ ಹೋಗುವ ಹಿಂದೂ ಯುವಕರ ಮೇಲೆ ನೂರಾರು ಕಲ್ಲು ಎಸೆದುದಲ್ಲದೆ, ಗಣಪತಿ ಮೂರ್ತಿ ಮೇಲೆ ಚಪ್ಪಲಿ ಎಸೆದಿದ್ದಾರೆ. ಹಿಂದೂಗಳ ಮೇಲೆ ಲಾಠಿಚಾರ್ಜ್, ಕಲ್ಲೆಸೆತ ಆಗಿದೆ. ಹಿಂದೂಗಳ ಹತ್ತಾರು ಅಂಗಡಿ ಸುಟ್ಟಿದ್ದಾರೆ. ಆದರೆ, ಹಿಂದೂಗಳ ಮೇಲೇ ಪ್ರಮುಖ ಆರೋಪಿಗಳನ್ನಾಗಿ ಮಾಡಿ (ಎ1, ಎ2, ಎ3 ಹೀಗೆ) ಕೇಸು ಹಾಕಿದ್ದಾರೆ ಎಂದು ಆಕ್ಷೇಪಿಸಿದರು. ಅಂಗಡಿ ಸುಟ್ಟವರು, ಚಪ್ಪಲಿ, ಕಲ್ಲು ಎಸೆದವರನ್ನು ಕೇಸಿನಲ್ಲಿ ಸೇರಿಸಿಲ್ಲ. ಇದು ರಾಜ್ಯದ ಪ್ರಜಾಪ್ರಭುತ್ವವೇ ಎಂದು ಕೇಳಿದರು. ಹಿಂದೂಗಳಿಗೆ ಒಂದು ರೀತಿ, ಮುಸಲ್ಮಾನರಿಗೆ ಇನ್ನೊಂದು ನೀತಿ– ಇದು ಸಂವಿ ಧಾನ, ಪ್ರಜಾಪ್ರಭುತ್ವಕ್ಕೆ ಮಾಡುವ ಅಪಮಾನ ಎಂದು ಟೀಕಿಸಿದರು.

ಇವತ್ತು ವಿಧಾನಸೌಧದಲ್ಲಿ ಕಾರ್ಯಕ್ರಮ ನಡೆಯುತ್ತಿದೆ. ಮುಖ್ಯಮಂತ್ರಿಗಳು ವೇದಿಕೆಯಲ್ಲಿದ್ದು, ಸಚಿವ ಮಹದೇವಪ್ಪ ಅವರು ಭಾಷಣ ಮಾಡುತ್ತಿದ್ದರು. ಒಬ್ಬ ಯುವಕ ಕಾಂಪೌಂಡ್ ಜಿಗಿದು ವಿವಿಐಪಿ ಗ್ಯಾಲರಿ ದಾಟಿ ವೇದಿಕೆ ಏರುತ್ತಿದ್ದಾನೆ. ಎಲ್ಲರೂ ಗಾಬರಿಗೊಂಡಿದ್ದಾರೆ. ಮುಖ್ಯ ಮಂತ್ರಿಗಳಿಗೆ, ಸಚಿವರು, ವಿಧಾನಸೌಧಕ್ಕೆ ಸೆಕ್ಯೂರಿಟಿ ಇಲ್ಲ. ಸಂಪೂರ್ಣ ಭದ್ರತಾ ವೈಫಲ್ಯ ಆಗಿದೆ ಎಂದು ಗಮನ ಸೆಳೆದರು. ಗೂಢಚರ ಇಲಾಖೆ, ಗೃಹ ಇಲಾಖೆ, ಪೊಲೀಸ್ ಇಲಾಖೆ ಕರ್ನಾಟಕದಲ್ಲಿ ಏನು ಮಾಡುತ್ತಿದೆ ಎಂದು ಪ್ರಶ್ನಿಸಿದರು.

ಅದೇ ವಿಧಾನಸೌಧದಲ್ಲಿ ಸದನ ನಡೆಯುವ ಸಂದರ್ಭದಲ್ಲಿ ಪಾಕಿಸ್ತಾನ ಜಿಂದಾಬಾದ್ ಎಂದು ಘೋಷಣೆ ಕೂಗಿದವರ ವಿರುದ್ಧ ಏನೂ ಕ್ರಮ ಕೈಗೊಂಡಿಲ್ಲ ಎಂದು ಗಮನ ಸೆಳೆದರು. ರಾಮೇಶ್ವರಂ ಕೆಫೆ ಸ್ಫೋಟ ಸಂಭವಿಸಿದೆ. ಈ ಆರೋಪಿಗಳು ಬಿಜೆಪಿ ಕಚೇರಿಯನ್ನು ಗುರಿಯನ್ನಾಗಿ ಮಾಡಿದ್ದರು ಎಂದು ಎನ್‌ಐಎ ವರದಿ ಹೇಳಿದೆ. ಈ ಸರಕಾರವು ಕರ್ನಾಟಕ ರಾಜ್ಯದಲ್ಲಿ ಗೃಹ ಇಲಾಖೆಯನ್ನು ಸಂಪೂರ್ಣವಾಗಿ ಅಲ್ಪಸಂಖ್ಯಾತರ ಕೈಗೆ ಕೊಟ್ಟಿದೆ ಎಂದು ಆರೋಪಿಸಿದರು.

ರಾಹುಲ್ ಗಾಂಧಿಯವರು ಮೀಸಲಾತಿ ವಿರೋಧಿಸಿ ಡಾ. ಅಂಬೇಡ್ಕರ್ ಅವರಿಗೆ ಅನ್ಯಾಯ ಮಾಡಿದ್ದಾರೆ. ರಾಹುಲ್ ಗಾಂಧಿಯವರ ಹೇಳಿಕೆ ಬಗ್ಗೆ ಸಿದ್ದರಾಮಯ್ಯನವರು ಏನು ಹೇಳುತ್ತಾರೆ ಎಂದು ಪ್ರಶ್ನೆಯನ್ನು ಮುಂದಿಟ್ಟರು.

# ಪರಪ್ಪನ ಅಗ್ರಹಾರ ಜೈಲಿನ ಮೇಲೆ ಸಿಸಿಬಿ ಅಧಿಕಾರಿಗಳ ದಾಳಿ: ದರ್ಶನ್ ಸಹಚರರ ಮೊಬೈಲ್‌ಗಳ ವಶ



**ಬೆಂಗಳೂರು, ಸೆ.15–** ಬೆಂಗಳೂರಿನ ಪರಪ್ಪನ ಅಗ್ರಹಾರ ಜೈಲಿನ ಮೇಲೆ ಸಿಸಿಬಿ ಅಧಿಕಾರಿಗಳು ದಾಳಿ ನಡೆಸಿದ್ದು, ಜೈಲಿನಲ್ಲಿ ದರ್ಶನ್ ಜೊತೆಗಿದ್ದ ವಿಲ್ಸನ್ ಗಾರ್ಡನ್ ನಾಗ ಮತ್ತು ಸಹಚರರ 18 ಮೊಬೈಲ್‌ಗಳನ್ನು ವಶಕ್ಕೆ ಪಡೆದುಕೊಂಡಿದ್ದಾರೆ. ದಾಳಿ ನಡೆಸಿದ್ದ ಸಿಸಿಬಿ ಅಧಿಕಾರಿಗಳು ಮೊಬೈಲ್‌ಗಳು ಮಾತ್ರವಲ್ಲದೆ, ಡ್ರಗ್ಸ್, ಹಣ ಸೇರಿದಂತೆ ಹಲವಾರು ವಸ್ತುಗಳನ್ನು ವಶಕ್ಕೆ ಪಡೆದುಕೊಂಡಿದ್ದಾರೆ.

ಚಿತ್ರದುರ್ಗದ ರೇಣುಕಸ್ವಾಮಿ ಕೊಲೆ ಪ್ರಕರಣದಲ್ಲಿ ಜೈಲು ಸೇರಿರುವ ನಟ ದರ್ಶನ್‌ಗೆ ಹಲವಾರು ಐಷಾರಾಮಿ ಸೌಲಭ್ಯ ಒದಗಿಸಿದ್ದ ವಿಚಾರ ಭಾರೀ ಚರ್ಚೆಗೆ ಕಾರಣವಾಗಿದೆ. ದರ್ಶನ್ ಮತ್ತು ಅವರ ಗ್ಯಾಂಗ್ನ ಇತರ ಆರೋಪಿಗಳನ್ನು ರಾಜ್ಯದ ಇತರ ಜೈಲುಗಳಿಗೆ ಸ್ಥಳಾಂತರಿಸಲಾಗಿದೆ. ಐಷಾರಾಮಿ ಸೌಲಭ್ಯ ಒದಗಿಸಿದ್ದ ಹಿನ್ನೆಲೆಯಲ್ಲಿ ಆಗಸ್ಟ್ 24ರಂದು ಕೂಡ ಸಿಸಿಬಿ ಅಧಿಕಾರಿಗಳು ಅರಪ್ಪನ ಅಗ್ರಹಾರ ಜೈಲಿನ ಮೇಲೆ ದಾಳಿ ಮಾಡಿದ್ದರು. ಆಗ ಯಾವುದೇ ಪುರಾವೆಗಳು, ಅನುಮಾನಾಸ್ಪದ ವಸ್ತುಗಳು ದೊರೆತಿಲಿಲ್ಲ.

ಅದಾಗ್ಯೂ, ದಾಳಿ ನಡೆದ ಮರುದಿನ, ಆಗಸ್ಟ್ 25ರಂದು ದರ್ಶನ್ ಸಿಗರೇಟ್ ಹಿಡಿದಿರುವ ಚಿತ್ರ ವೈರಲ್ ಆಗಿತ್ತು. ದರ್ಶನ್‌ಗೆ ಐಷಾರಾಮಿ ಸೌಲಭ್ಯ ಒದಗಿಸಲಾಗುತ್ತಿದೆ ಎಂದು ಆರೋಪ ಕೇಳಿಬಂದಿದ್ದವು. ಫೋಟೋ ವೈರಲ್ ಆದ ಬಳಿಕ ಆರೋಪಿ, ನಟ ದರ್ಶನ್ ಅವರನ್ನು ಬಳ್ಳಾರಿ ಜೈಲಿಗೆ ಸ್ಥಳಾಂತರಿಸಲಾಗಿದೆ.

# ಸಿಂಗಳೀಕ ಸಂತಾನೋತ್ಪತ್ತಿ ಯಶಸ್ವಿ

**ಬೆಂಗಳೂರು, ಸೆ.15–** ರಾಜ್ಯದಲ್ಲಿ ಇದೇ ಮೊದಲ ಬಾರಿಗೆ ಸಿಂಗಳೀಕಗಳ ಸಂತಾನೋತ್ಪತ್ತಿ ಯಶಸ್ವಿಯಾಗಿದೆ. ಮೈಸೂರಿನ ಕೂರ್ಗಳ್ಳಿಯ ವನ್ಯಜೀವಿ ಪುನರ್ವಸತಿ ಕೇಂದ್ರದಲ್ಲಿ ಅಳಿವಿನಂಚಿನ ಸಿಂಗಳೀಕ ಮರಿ ಜನಿಸಿದೆ. ಎರಡು ತಿಂಗಳ ಹಿಂದೆ ಮರಿ ಹುಟ್ಟಿದ್ದು, ಇವುಗಳ ಸಂಖ್ಯೆ ಈಗ ನಾಲ್ಕಕ್ಕೇರಿದೆ. ಕೇಂದ್ರೀಯ ಮೃಗಾಲಯ ಪ್ರಾಧಿಕಾರದ ತಳಿ ಅಭಿವೃದ್ಧಿ ಯೋಜನೆಯಡಿ 2015 ರಿಂದ ಸಿಂಗಳೀಕಗಳ ತಳಿ ಸಂರಕ್ಷಣೆ, ಅಭಿವೃದ್ಧಿಗೆ ನಿರಂತರ ಪ್ರಯತ್ನ ನಡೆದಿತ್ತು. ಸಿಂಗಳೀಕ ಮರಿ ಜನನವಾಗಿರುವುದರಿಂದ, ಅಳವಿಂಚಿನಲ್ಲಿರುವ ಪ್ರಾಣಿಗಳ ತಳಿ ಸಂರಕ್ಷಣೆಗೆ ಶಕ್ತಿ ನೀಡಿದಂತಾಗಿದೆ. ಜೀವವೈವಿಧ್ಯದ ಸಮತೋಲನ ಕಾಯ್ದುಕೊಳ್ಳಲು ಅಳಿವಿನಂಚಿನ ಪ್ರಾಣಿಗಳ ಸಂರಕ್ಷಣೆಗಾಗಿ ಮೃಗಾಲಯಗಳಲ್ಲಿ ತಳಿ ಅಭಿವೃದ್ಧಿ ಕಾರ್ಯಕ್ರಮ ರೂಪಿಸಿ ಕಾಡಿಗೆ ಬಿಡುವ ಯೋಜನೆ ಇದಾಗಿದ್ದು, ಕೇಂದ್ರಿಯ ಮೃಗಾಲಯ ಪ್ರಾಧಿಕಾರ ಯಾವ ತಳಿ ಅಭಿವೃದ್ಧಿ ಪಡಿಸಬೇಕೆಂದು ಮೃಗಾಲಯಗಳಿಗೆ ನಿರ್ದೇಶನ ನೀಡುತ್ತದೆ. ಸಿಂಗಳೀಕವಲ್ಲದೇ ತೋಳ, ಕಾಡೆಮ್ಮೆ, ಸೀಳು ನಾಯಿಗಳ ತಳಿಗಳ ಅಭಿವೃದ್ಧಿ ಕಾರ್ಯವೂ ಕಳೆದ 9 ವರ್ಷದಿಂದ ನಡೆಯುತ್ತಿದೆ. ನೀಲಗಿರಿ ಲಂಗೂರ್, ಮಲಬಾರ್ ಅಳಿಲು, ಬೂದು ಕಾಡುಕೋಳಿ ಪ್ರಭೇದಗಳು ಯೋಜನೆಯ ವ್ಯಾಪ್ತಿಯಲ್ಲಿವೆ ಎಂದು ಚಾಮರಾಜೇಂದ್ರ ಮೃಗಾಲಯದ ಕಾರ್ಯನಿರ್ವಾಹಕ ನಿರ್ದೇಶಕ ಡಿ. ಮಹೇಶ್ ಕುಮಾರ್ ತಿಳಿಸಿದ್ದಾರೆ.



# ಶಸ್ತ್ರ ಚಿಕಿತ್ಸಕರ ಸಮ್ಮೇಳನ: ದ್ವಿತೀಯ ಪ್ರಶಸ್ತಿಗೆ ಡಾ.ಅಭಿಲಾಷಾ ಅಶೋಕಸ್ವಾಮಿ ಹೇರೂರ ಭಾಜನ





**ಗಂಗಾವತಿ, ಸೆ.15–** ಬಳ್ಳಾರಿ ಜಿಲ್ಲೆಯ ತೋರಣಗಲ್‌ನಲ್ಲಿನ ಜಿಂದಾಲ್ ಆವರಣದಲ್ಲಿರುವ ಜೆ–ಮ್ಯಾಕ್ಸ್ ಆಡಿಟೋರಿಯಂ ನಲ್ಲಿ ಮೂರು ದಿನಗಳ ಕಾಲ ಅಖಿಲ ಭಾರತ ಬಾಯಿ,ಮುಖ ದವಡೆ ಶಸ್ತ್ರ ಚಿಕಿತ್ಸಕರ ಸಂಘದ ರಾಜ್ಯ ಮಟ್ಟದ 11ನೇ ಸಮ್ಮೇಳನವನ್ನು ಮೂರು ದಿನಗಳ ಕಾಲ ಹಮ್ಮಿಕೊಳ್ಳಲಾಗಿದೆ.

ಈ ಸಮ್ಮೇಳನದಲ್ಲಿ ಶನಿವಾರ ಮಂಡಿಸಿದ ಪ್ರಭಂದಕ್ಕೆ ಗಂಗಾವತಿಯ ಡಾ.ಅಭಿಲಾಷಾ ಅಶೋಕಸ್ವಾಮಿ ಹೇರೂರ ಅವರಿಗೆ ರಾಜ್ಯ ಮಟ್ಟದ ದ್ವಿತೀಯ ಪ್ರಶಸ್ತಿ ಲಭಿಸಿದೆ. ಬಾಯಿ,ಮುಖ ಮತ್ತು ದವಡೆ ಶಸ್ತ್ರ ಚಿಕಿತ್ಸಕರಿಗೆ ವೈದ್ಯಕೀಯ ಕ್ಷೇತ್ರದಲ್ಲಿ ಹೊಸ ಆವಿಷ್ಕಾರಗಳ ಕುರಿತು ಉಪನ್ಯಾಸ ಮತ್ತು ತಾಂತ್ರಿಕತೆಯ ವಿಷಯಗಳು ಅಧಿವೇಶನದಲ್ಲಿ ಪ್ರಾರಂಭವಾಗಿವೆ.ತಜ್ಞ ವೈದ್ಯರಿಗೆ ವಿವಿಧ ವಿಷಯಗಳ ತರಬೇತಿಗೆ ಅವಕಾಶ ಇರುವ ಈ ಅಧಿವೇಶನದಲ್ಲಿ 300ಕ್ಕೂ ಹೆಚ್ಚು ಹಿರಿಯ ತಜ್ಞರು ಭಾಗವಹಿಸಿದ್ದಾರೆ. ಬಳ್ಳಾರಿ ಸಂಸದ ಈ ತುಕಾರಾಂ ಅವರು, ಈ ಸಮ್ಮೇಳನವನ್ನು ಉದ್ಘಾಟಿಸಿದ್ದರು.

# ಸಾಮೂಹಿಕ ಗಣೇಶೋತ್ಸವ: ಪ್ರಸಾದದ 25 ಕೆ.ಜಿ. ಲಾಡು 4.50 ಲಕ್ಷ ರೂ.ಗೆ ಖರೀದಿ

**ಪೀಣ್ಯ ದಾಸರಹಳ್ಳಿ, ಸೆ.15–** ಬಾಗಲಗುಂಟೆ ಎಂ.ಇ.ಐ ಆಟದ ಮೈದಾನದಲ್ಲಿ ಶುಕ್ರವಾರ ದಾಸರಹಳ್ಳಿ ಸಾಮೂಹಿಕ ಗಣೇಶೋತ್ಸವ ಸಮಿತಿ ವತಿಯಿಂದ 14 ಅಡಿ ಎತ್ತರದ ಗಣೇಶನನ್ನು ಪ್ರತಿಷ್ಠಾಪಿಸಲಾಯಿತು.

ಗಣೇಶನ ಪ್ರಸಾದವಾದ 25 ಕೆ.ಜಿ. ಲಡ್ಡುವನ್ನು ಹರಾಜಿನಲ್ಲಿ ಬಿಜೆಪಿ ಮುಖಂಡ ಚಿಕ್ಕಸಂದ್ರ ಮೋಹನ್ ಕುಮಾರ್ ಜಿ, ಅವರು 4.50 ಲಕ್ಷಕ್ಕೆ ಖರೀದಿಸಿದರು. ಸಂಸದೆ ಶೋಭಾ ಕರಂದ್ಲಾಜೆ ಮತ್ತು ಶಾಸಕ ಎಸ್. ಮುನಿರಾಜು ಅವರು ಲಡ್ಡುವನ್ನು ಹಸ್ತಾಂತರಿಸಿದರು. ಶುಕ್ರವಾರ ಗಣೇಶೋತ್ಸವದಲ್ಲಿ ಸೂರಜ್ ಫೌಂಡೇಶನ್ ಸಂಸ್ಥಾಪಕಿ ಸುಜಾತ ಮುನಿರಾಜು ನೇತೃತ್ವದಲ್ಲಿ ಮಹಿಳೆಯರಿಗಾಗಿ ರಂಗೋಲಿ, ಗಾಯನ, ನೃತ್ಯ ಸ್ಪರ್ಧೆ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮ ನಡೆದು ವಿಜೇತರಿಗೆ ಬಹುಮಾನ ನೀಡಲಾಯಿತು. ಗಿಚ್ಚಿ ಗಿಲಿಗಿಲಿ ಖ್ಯಾತಿಯ ರಾಘವೇಂದ್ರ (ರಾಗಿಣಿ) ಅವರಿಂದ ಕಾಮಿಡಿ ಶೋ ಮತ್ತು ಗಣ್ಯರಿಗೆ ಸನ್ಮಾನ ಕಾರ್ಯಕ್ರಮಗಳು ನೆಡೆದವು.



ಶನಿವಾರ ಸಂಜೆ ಖ್ಯಾತ ಗಾಯಕ ರಘು ದೀಕ್ಷಿತ್ ತಂಡದಿಂದ ಸಂಗೀತ ರಸಸಂಜೆ ನೇರ ಪ್ರಸಾರದಲ್ಲಿ ಸಂತ ಶಿಶುನಾಳ ಶರೀಫರ ಮತ್ತು ಚಿತ್ರಗೀತೆಗಳಿಗೆ ಅಲ್ಲಿ ಸೇರಿದ್ದ ಜನರು ಕುಣಿದು ಕುಪ್ಪಳಿಸಿ ಸಂಭ್ರಮಿಸಿದರು.


ಭಾನುವಾರ ಮೆರವಣಿಗೆಯಲ್ಲಿ 75ಕ್ಕೂ ಹೆಚ್ಚು ಗಣೇಶ ಮೂರ್ತಿಗಳು ಇದ್ದವು. ಪಂಜಾಬ್, ಗುಜರಾತ್, ಮುಂಬೈ, ಕೇರಳ ಕರ್ನಾಟಕದಿಂದ ಬಂದ ಕಲಾತಂಡಗಳು ಅದ್ದೂರಿ ಮೆರವಣಿಗೆಗೆ ಮೆರುಗು ನೀಡಿದವು. ಕಲಾತಂಡಗಳ ಸದ್ದಿಗೆ ನೂರಾರು ಯುವಕರು, ಮಹಿಳೆಯರು, ಭಕ್ತಾದಿಗಳು ಹೆಜ್ಜೆ ಹಾಕಿದರು.

ಎಂ.ಇ.ಐ ಆಟದ ಮೈದಾನದಿಂದ ಪ್ರಾರಂಭವಾಗಿ ಬಾಗಲಗುಂಟೆ ಮಾರಮ್ಮನ ದೇವಸ್ಥಾನ, ಹೆಸರಘಟ್ಟ ಮುಖ್ಯ ರಸ್ತೆ, ಮಲ್ಲಸಂದ್ರದ ಪೈಪ್ ಲೈನ್, ಸೆಲೆಕ್ಷನ್ ಅಲ್ಲಿಂದ ದಾಸರಹಳ್ಳಿ ರಾಷ್ಟ್ರೀಯ ಹೆದ್ದಾರಿ ಮೂಲಕ ಸಾಗಿತು. ಚೊಕ್ಕಸಂದ್ರದ ಕೆರೆ ಹತ್ತಿರದ ಕಲ್ಯಾಣಿಗೆ ವಿಸರ್ಜಿಸಲಾಯಿತು. ಶಾಸಕ ಎಸ್. ಮುನಿರಾಜು ಮಾತನಾಡಿ,' ಕಳೆದ ವರ್ಷ ಗಣೇಶನ ಪ್ರಸಾದ ಲಡ್ಡುವನ್ನು ರಿಯಲ್ ಎಸ್ಟೇಟ್ ಉದ್ಯಮಿ ಲಕ್ಷ್ಮಣ್ ಗೌಡ ಅವರು4. 25 ಲಕ್ಷಕ್ಕೆ ಹರಾಜಿನಲ್ಲಿ ಪಡೆದಿದ್ದರು. ಈಗ ನಮ್ಮ ಮುಖಂಡ ಮೋಹನ್ ಕುಮಾರ್ 25 ಕೆಜಿ ಪ್ರಸಾದ ಲಡ್ಡುವನ್ನು 4.50 ಪಡೆದರು. ಅದರಿಂದ ಬಂದಂತಹ ಹಣವನ್ನು ಮುಂದಿನ ವರ್ಷಕ್ಕೆ ಮೀಸಲಿಡಲಾಗುತ್ತದೆ' ಎಂದು ತಿಳಿಸಿದರು.

# ರಾಜ್ಯದಲ್ಲಿ ಮುಂದಿನ ಆರು ದಿನಗಳ ಕಾಲ ಭಾರಿ ಮಳೆ ಸಾಧ್ಯತೆ

**ಬೆಂಗಳೂರು, ಸೆ. 15–** ರಾಜ್ಯದ ಕೆಲವು ಜಿಲ್ಲೆಗಳಲ್ಲಿ ಮುಂದಿನ ಆರು ದಿನಗಳ ಕಾಲ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ಬೆಂಗಳೂರಿನಲ್ಲಿ ಸೆಪ್ಟೆಂಬರ್ 16ರವರೆಗೆ ಭಾಗಶಃ ಮೋಡ ಕವಿದ ವಾತಾವರಣ ಇರಲಿದೆ. ಹಗುರ ಮಳೆಯಾಗುವ ಸಾಧ್ಯತೆಯಿದೆ ಹವಾಮಾನ ವರದಿ ತಿಳಿಸಿದೆ.

ಉತ್ತರ ಕನ್ನಡ, ಉಡುಪಿ, ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿ ಹಲವು ಸ್ಥಳಗಳಲ್ಲಿ ಹಗುರದಿಂದ ಸಾಧಾರಣ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.



ಬೆಳಗಾವಿ, ಶಿವಮೊಗ್ಗ, ಚಿಕ್ಕಮಗಳೂರು, ಹಾಸನ ಮತ್ತು ಕೊಡಗು ಜಿಲ್ಲೆಗಳ ಒಂದೆರಡು ಸ್ಥಳಗಳಲ್ಲಿ ಹಗುರದಿಂದ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ ಎಂದು ಇಲಾಖೆ ವರದಿ ತಿಳಿಸಿದೆ.

ಮುಖ್ಯವಾಗಿ ಒಣ ಹವೆಯ ಸಾಧ್ಯತೆಯಿದ್ದು, ಒಳನಾಡಿನ ಉಳಿದ ಜಿಲ್ಲೆಗಳಲ್ಲಿ ಒಂದೆರಡು ಸ್ಥಳಗಳಲ್ಲಿ ಹಗುರ ಮಳೆಯಾಗುವ ಸಾಧ್ಯತೆಯಿದೆ ಎಂದು ಹೇಳಿದೆ.

ಉತ್ತರ ಕನ್ನಡದ ಕುಮುಟಾ, ಶಿರಾಲ್ಲ ಪಿಟಿಒ ಬಳಿ, ಕಾರಾವಾರ, ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರು ವಿವಾನ ನಿಲ್ದಾಣ ವೀಕ್ಷಣಾಲಯದ ಸಮೀಪ, ಮಂಗಳೂರು ನಗರ, ಪಣಂಬೂರು, ಬೆಳಗಾವಿ ಲೋಂಡಾ, ಕೊಡಗಿನ ಪೊನ್ನಂಪೇಟೆ, ಮಂಗಳೂರು, ಚಿಕ್ಕ ಮಗಳೂರು ಜಿಲ್ಲೆಯ ಶೃಂಗೇರಿ ಎಚ್‌ಎಂಎಸ್‌ನಲ್ಲಿ ಮಳೆಯಾಗಿದೆ.

## ಸಂಯುಕ್ತ ಕಿಸಾನ್ ಮೋರ್ಚಾ (ರಾಜಕೀಯತರ) ಘೋಷಣೆ

# ಎಂಎಸ್‌ಪಿ ಖಾತ್ರಿ ಕಾನೂನು ಜಾರಿಯಾಗುವ ತನಕ ಹೋರಾಟ ನಿಲ್ಲದು: ಕುರುಬೂರು ಶಾಂತಕುಮಾರ್

**ಬೆಂಗಳೂರು, ಸೆ. 15–** ನೆನ್ನೆಯಿಂದಲೇ ಹರಿಯಾಣ ಚುನಾವಣಾ ಹಿನ್ನಲೆಯಲ್ಲಿ. ಕಿಸಾನ್ ಮಹಾಪಂಚಾಯತ್ ಸಮಾವೇಶ ನಡೆಸಲು ಸಾಧ್ಯವಿಲ್ಲ ಎಂದು ಪೊಲೀಸರು ರೈತರಿಗೆ ತಿಳಿಸಿದರು.

ಹಾಗೂ ಸಮಾವೇಶದ ಸ್ಥಳದಲ್ಲಿ ಹಾಕಲಾಗಿದ್ದ ಶಾಮಿಯಾನ ಮೈಕಳನ್ನ ಕಿತ್ತುಹೊಯ್ದರು ಇದನ್ನು ರೈತ ಮುಖಂಡರು ಗಂಭೀರವಾಗಿ ಪರಿಗಣಿಸಿ ರಾಜ್ಯ ಸರ್ಕಾರಕ್ಕೆ ಸ್ಪಷ್ಟ ಎಚ್ಚರಿಕೆ ಸಂದೇಶ ನೀಡಿದರು. ಸಮಾವೇಶ ನಡೆಸಲು ಹಾಕಿದ್ದ ಟೆಂಟುಗಳನ್ನ ಕಿತ್ತಾಕಿ ಮೈಕಳನ್ನ ಕಿತ್ತೆಸೆದ ಪೊಲೀಸರು ಬೆಳಿಗ್ಗೆ 9:00 ಒಳಗೆ ಸಮಾವೇಶ ನಡೆಸಲು ಆಸ್ಪದ ನೀಡದಿದ್ದರೆ. ರೈತರು ರಾಜ್ಯದ್ಯಂತ ಎಲ್ಲ ರಸ್ತೆಗಳನ್ನ ಬಂದ್ ಮಾಡುವುದಾಗಿ ಎಚ್ಚರಿಕೆ ನೀಡಿದ ಹಿನ್ನೆಲೆಯಲ್ಲಿ ಸರ್ಕಾರ ಎಚ್ಚೆತ್ತುಕೊಂಡು ಸಮಾವೇಶ ನಡೆಸಲು ಅವಕಾಶ ಕಲ್ಪಿಸಿತು ಆದರೆ ಪಕ್ಕದ ರಾಜ್ಯದ ಪಂಜಾಬ್ ರೈತರಿಗೆ ಸಮಾವೇಶಕ್ಕೆ ಬರಲು ಅವಕಾಶ ನೀಡಲಿಲ್ಲ. ಆಗ ಮತ್ತಷ್ಟು ಸಂಖ್ಯೆಯ ರೈತರು ತಂಡೋಪ ತಂಡವಾಗಿ ಸಮಾವೇಶ ಸ್ಥಳಕ್ಕೆ ಬಂದರು. ಇದರಿಂದ ರೈತಶಕ್ತಿ ಇಮ್ಮಡಿ ಗೊಳಿಸಿತು.



ಇದೇ ಸಮಾವೇಶದಲ್ಲಿ ಭಾಗ ವಹಿಸಿ ಮಾತನಾಡಿದ ದಕ್ಷಿಣ ಭಾರತ ರಾಜ್ಯಗಳ ಸಂಚಾಲಕ ರಾಜ್ಯ ರೈತ ಸಂಘಟನೆಗಳ ಒಕ್ಕೂಟದ ಅಧ್ಯಕ್ಷ ಕುರುಬೂರು ಶಾಂತಕುಮಾರ್ ರೈತರು ಹಲವು ವರ್ಷಗಳಿಂದ ಹೋರಾಟ ನಡೆಸುತ್ತಿದ್ದರು ಕೇಂದ್ರ ಸರ್ಕಾರಕ್ಕೆ ರೈತರ ಕೂಗು ಕೇಳುತ್ತಿಲ್ಲ. ಅದರೆ ಶ್ರೀಮಂತರು ಬಂಡವಾಳ ಶಾಹಿಗಳು ಕಣ್ಣು ಸನ್ನೆಯಲ್ಲಿ ಸೂಚನೆ ನೀಡಿದರೆ ಸಾಕು ಕಾನೂನುಗಳು ಜಾರಿಯಾಗುತ್ತವೆ. ಸಾಲಮನ್ನಾ ವಾಗುತ್ತದೆ. ಇದು ಪ್ರಜಾ ಪ್ರಭುತ್ವ ಸರ್ಕಾರ ಎನ್ನುವುದು ನಾಚಿಕೆ ತರುವಂತ ವಿಚಾರ. ಲೋಕಸಭಾ ಚುನಾವಣೆಯಲ್ಲಿ ಕೇಂದ್ರ ಸರ್ಕಾರಕ್ಕೆ ರೈತರು ಸ್ವಲ್ಪ ಬಿಸಿ ಮುಟ್ಟಿಸಿದರು ಎಚ್ಚೆತ್ತಿಲ್ಲ. ಈಗ ಹರಿಯಾಣ ಚುನಾವಣೆಯಲ್ಲಿ ಸರಿಯಾದ ಪಾಠವನ್ನೆ ಕಲಿಸಬೇಕಾಗಿದೆ.

ಪಂಜಾಬ್ ಹರಿಯಾಣ ರೈತರ ರೀತಿಯಲ್ಲಿ ಎಲ್ಲಾ ರಾಜ್ಯಗಳಲ್ಲಿಯೂ ಹೋರಾಟ ನಡೆದರೆ ರೈತ ದ್ರೋಹಿ ನೀತಿಗಳನ್ನು ಬದಲಾಯಿಸಬಹುದು. ಇಲ್ಲದಿದ್ದರೆ ರೈತ ಕುಲವೇ ನಾಶವಾಗುತ್ತದೆ ಎಂದು ಸಮಾವೇಶದಲ್ಲಿ ಮಾತನಾಡುತ್ತ ತಿಳಿಸಿದರು.

ಸಮಾವೇಶದಲ್ಲಿ ಸಂಯುಕ್ತ ಕಿಸಾನ್ ಮೋರ್ಚ (ರಾಜಕೀಯೆತರ) ಸಂಘಟನೆಯ ಮುಖ್ಯಸ್ಥ ಜಗಜಿತ್ ಸಿಂಗ್ ದಲೆವಾಲ. ಮಾತನಾಡಿ ಇಂದಿನ ಸಮಾವೇಶವನ್ನು ತಪ್ಪಿಸಲು ಚುನಾವಣಾ ನೆಪದಲ್ಲಿ ಪೊಲೀಸರ ಬಲ ಪ್ರಯೋಗ ನಡೆಯಿತು. ರೈತಶಕ್ತಿ ಸರ್ಕಾರಕ್ಕೆ ತಕ್ಕ ಉತ್ತರ ನೀಡಿ ಸಮಾವೇಶ ನಡೆಸುತ್ತಿದ್ದೇವೆ ಇಡೀ ದೇಶದ ರೈತರು ನಮ್ಮ ಹೋರಾಟವನ್ನು ಬೆಂಬಲಿಸುತ್ತಿದ್ದಾರೆ ಎಂದು ಎಚ್ಚರಿಕೆ ನೀಡಿದರು.

ಹರಿಯಾಣದ ಉಚ್ಚಾನದಲ್ಲಿ ನಡೆದ ರಾಷ್ಟ್ರೀಯ ರೈತ ಸಮಾವೇಶದಲ್ಲಿ ಲಕ್ಷಾಂತರ ರೈತರು ಭಾಗವಹಿಸಿದ್ದರು. ಕೃಷಿ ಉತ್ಪನ್ನಗಳಿಗೆ ಕನಿಷ್ಠ ಬೆಂಬಲ ಬೆಲೆ ಕಾತರಿ ಕಾನೂನು ಜಾರಿ, ರೈತರ ಸಂಪೂರ್ಣ ಸಾಲಮನ್ನಾ. ಡಾ ಸ್ವಾಮಿನಾಥನ್ ವರದಿಯಂತೆ ಕನಿಷ್ಠ ಬೆಂಬಲ ಬೆಲೆ ನಿಗದಿ, ಬೆಳೆ ವಿಮೆ ಪದ್ಧತಿ ತಿದ್ದುಪಡಿ ಆಗಬೇಕು. 60 ವರ್ಷ ತುಂಬಿದ ರೈತರಿಗೆ ಪಿಂಚಣಿ ಯೋಜನೆ ಜಾರಿಗೆ ತರಬೇಕು ಎಂಬ ಇತ್ಯಾದಿ ಒತ್ತಾಯಗಳ ಬಗ್ಗೆ ಹೋರಾಟ ಪ್ರಬಲಗೊಳಿಸಲು ಎಲ್ಲಾ ರಾಜ್ಯಗಳ ರೈತ ಮುಖಂಡರು ತೀರ್ಮಾನಿಸಿದರು.

ಹರಿಯಾಣ ರೈತ ಮುಖಂಡ ಅಭಿಮನ್ಯುಕೊಹಾರ್. ಲಕ್ವಿಂದರ್ ಸಿಂಗ್. ಮಾತನಾಡಿ ಚಳುವಳಿಯನ್ನ ಹತ್ತಿಕುವ ಪ್ರಯತ್ನ ಕೇಂದ್ರ ಸರ್ಕಾರ ನಡೆಸುತ್ತಿದ್ದೆ. ಈ ರೈತ ಸಮಾವೇಶಕ್ಕೆ ಬರಲು ಪಂಜಾಬ್ ರೈತರನ್ನು ತಡೆ ಒಡ್ಡಿದ ಹರಿಯಾಣ ಸರ್ಕಾರದ ವಿರುದ್ಧ ಚುನಾವಣೆಯಲ್ಲಿ ರೈತರು ಬುದ್ದಿ ಕಲಿಸಬೇಕು ಎಂದು ರೈತರಿಗೆ ಕರೆ ನೀಡಲಾಯಿತು ಎಂದು ತಿಳಿಸಿದರು.



ಇಂಜಿನಿಯರ್ ದಿನಾಚರಣೆ ಪ್ರಯುಕ್ತ ಬೆಂಗಳೂರಿನಲ್ಲಿ ಭಾನುವಾರ ಲೋಕೋಪಯೋಗಿ ಇಲಾಖೆಯ ಮುಖ್ಯ ಅಭಿಯಂತರ ಮಂಜಪ್ಪ (ಕಟ್ಟಡ ಮತ್ತು ಸಂಪರ್ಕ, ದಕ್ಷಿಣ) ನಿಬಂಧಕರು ಎ. ಸೋಮಶೇಖರ್ ಅವರು ಸರ್.ಎಂ. ವಿಶ್ವೇಶ್ವರಯ್ಯ ಅವರ ಪುತ್ಥಳಿಗೆ ಗೌರವ ಸಲ್ಲಿಸಿದರು.

# ಸಚಿವ ಶರಣಪ್ರಕಾಶ್ ಪಾಟೀಲ್‌ರಿಂದ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಕ್ಕೆ ಚಾಲನೆ

**ಕಲಬುರಗಿ, ಸೆ. 15:** ನಗರದ ಬಿಲಗುಂದಿ ಪೆಟ್ರೋಲ್ ಬಂಕ್ ಹತ್ತಿರ ವೀರಶೈವ ಕಲ್ಯಾಣ ಮಂಟಪದ ಹತ್ತಿರ ರಿಂಗ್ ರೋಡ್ ಪ್ರದೇಶದಲ್ಲಿ ಜಿಲ್ಲಾಡಳಿತದಿಂದ ಆಯೋಜಿಸಲಾಗಿರುವ ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಗೆ ವೈದ್ಯಕೀಯ ಶಿಕ್ಷಣ ಸಚಿವ ಡಾ. ಶರಣಪ್ರಕಾಶ್ ಪಾಟೀಲ್ ಅವರು ಚಾಲನೆ ನೀಡಿದರು.

ಪ್ರಜಾಪ್ರಭುತ್ವವನ್ನು ವಿಫಲಗೊಳಿಸುವ ದುಷ್ಟ ಮತ್ತು ದೇಶದ್ರೋಹಿ ಶಕ್ತಿಗಳನ್ನು ಸೋಲಿಸಲು ನವೆಲ್ಲ ಒಂದು ಎಂದು ದೇಶದ ಜನತೆ ತೋರಿಸಬೇಕಾಗಿದೆ. ಆದ್ದರಿಂದ ಈ ಪ್ರಜಾಪ್ರಭುತ್ವ ಉಳಿಸಿ ಮಾನವ ಸರಪಳಿಯ ಮೂಲಕ ಇಡೀ ದೇಶದ ಜನತೆ ಪ್ರಜಾಪ್ರಭುತ್ವ ಉಳಿವಿಗೆ ಒಂದಾಗಿದ್ದೇವೆ ಎನ್ನುವುದರ ದ್ಯೋತಕವೇ ಈ ಮಾನವ ಸರಪಳಿಯ



ಮುಖ್ಯ ಉದ್ದೇಶ. ಈ ದಿಸೆಯಲ್ಲಿ ಎಲ್ಲರೂ ಪ್ರಜಾಪ್ರಭುತ್ವದ ಉಳಿವಿಗೆ ಗಟ್ಟಿಯಾಗಿ ನಿಲ್ಲಬೇಕೆಂದು ಕರೆ ನೀಡಿದರು.


ಈ ಸಂದರ್ಭದಲ್ಲಿ ಕಲಬುರಗಿ ಲೋಕಸಭಾ ಸದಸ್ಯ ರಾಧಾಕೃಷ್ಣ ದೊಡ್ಡಮನಿ, ಕೆ.ಕೆ.ಆರ್.ಡಿ ಅಧ್ಯಕ್ಷ ಡಾ. ಅಜಯಸಿಂಗ್, ವಿಧಾನ ಪರಿಷತ್ ಸದಸ್ಯ ಜಗದೇವ್ ಗುತ್ತೇದಾರ್, ಶಾಸಕ ಅಲ್ಲಮಪ್ರಭು ಪಾಟೀಲ್, ಜಿಲ್ಲಾಧಿಕಾರಿ ಫೌಝಿಯಾ ಬಿ. ತರನ್ನುಮ್, ಜಿಲ್ಲಾ ಪಂಚಾಯಿತಿ ಸಿಇಓ, ಪೊಲೀಸ್ ಆಯುಕ್ತರು ಮತ್ತು ಕಲಬುರಗಿ ಎಸ್.ಪಿ, ಬಿಜೆಪಿಯ ವಿಧಾನ ಪರಿಷತ್ ಸದಸ್ಯ ಬಿ.ಜಿ ಪಾಟೀಲ್ ಕಲಬುರಗಿ ಮಹಾನಗರ ಪಾಲಿಕೆ ಆಯುಕ್ತರು ಸೇರಿದಂತೆ ಮುಂತಾದವರು ಇದ್ದರು.

ಕಲಬುರಗಿ ಜಿಲ್ಲೆಯ ಬೀದರ ಗಡಿಭಾಗವಾಗಿರುವ ಕಿಣ್ಣಿ ಸಡಕ್‌ದಿಂದ ಆರಂಭವಾಗಿ ಜಿಲ್ಲೆಯ ಕಮಲಾಪುರ, ಮಹಾಗಾಂವ ಕುರಿಕೋಟಾ, ಕಪನೂರ ಮೂಲಕ ನಗರ ಪ್ರವೇಶಿಸುವ ಮಾನವ ಸರಪಳಿ ಚಿತ್ತಾಪುರ ತಾಲ್ಲೂಕಿನಲ್ಲಿ ದೇವಲನಾಯಕ ತಾಂಡದ ವರೆಗೆ 113 ಕಿ.ಮಿ. ಉದ್ದ ಏಕಕಾಲದಲ್ಲಿ ಶಾಲಾ ಮಕ್ಕಳು, ಸ್ವಯಂ ಸೇವಾ ಸಂಸ್ಥೆಗಳ ಸದಸ್ಯರು, ಮಹಿಳೆಯರು, ಸಾರ್ವಜನಿಕರು ದಾಖಲೆ ಪ್ರಮಾಣದಲ್ಲಿ ಮಾನವ ಸರಪಳಿ ರಚಿಸಿ ಪ್ರಜಾಪ್ರಭುತ್ವ ಮಹತ್ವ ಸಾರಿದರು.

## ಗ್ಯಾರಂಟಿ ಆರ್ಥಿಕ ಹೊರೆ ಇಳಿಸಿಕೊಳ್ಳಲು ಪ್ರಯತ್ನ

# ರಾಯಚೂರು ಜಿಲ್ಲೆಯ 29,449 ಬಿಪಿಎಲ್ ಪಡಿತರ ಚೀಟಿ ಅನರ್ಹ

**ರಾಯಚೂರು, ಸೆ. 15 :** ರಾಜ್ಯದ ಕಾಂಗ್ರೆಸ್ ನೇತೃತ್ವದ ಸರ್ಕಾರವು ಅಧಿಕಾರಕ್ಕೆ ಬರುವ ಪೂರ್ವದಲ್ಲಿ ಘೋಷಣೆ ಮಾಡಿದ ಐದು ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿತು. ಆದರೆ, ಈಚೆಗೆ ಗ್ಯಾರಂಟಿಗಳ ಅನುಷ್ಠಾನದಿಂದ ರಾಜ್ಯದ ಮೇಲೆ ಆರ್ಥಿಕ ಹೊರೆ ಹೆಚ್ಚಾಗಿದೆ ಎಂಬ ಚರ್ಚೆಗಳು ನಡೆಯುತ್ತಿವೆ. ಇದರ ಪರಿಣಾಮ ಜಿಲ್ಲೆಯಲ್ಲಿ ಅನರ್ಹರು ಪಡೆದಿರುವ ಒಟ್ಟು 29,449 ಪಡಿತರ ಚೀಟಿಗಳ ಗುರುತಿಸಿ, ಅವುಗಳ ಪರಿಶೀಲನೆಗೆ ಆದೇಶದ ಹಿನ್ನೆಲೆಯಲ್ಲಿ ಆಹಾರ ಇಲಾಖೆಯು ಮುಂದಾಗಿದೆ. ಇದರಿಂದ ಸರ್ಕಾರದ ಗೃಹಲಕ್ಷ್ಮೀ ಯೋಜನೆಯಿಂದ ಫಲಾನುಭವಿಗಳು ವಂಚಿತರಾಗುವ ಸಾಧ್ಯತೆಗಳಿವೆ.





ಮೊದಲಿನಿಂದ ಅನರ್ಹರು ಪಡಿತರ ಚೀಟಿಗಳನ್ನು ಪಡೆದಿರುವುದು ಸರ್ಕಾರಕ್ಕೆ ತಿಳಿದಿಲ್ಲವೆಂದಿಲ್ಲ. ಆದರೆ, ರಾಜಕಾರಣಿಗಳೇ ಶಿಫಾರಸು ಮಾಡಿ ಕೊಡಿಸಿದ್ದರಿಂದ ಅವುಗಳನ್ನು ರದ್ದುಪಡಿಸಲು ಸಾಧ್ಯವಾಗಿರಲಿಲ್ಲ. ಇಂಥ ಅನರ್ಹ ಚೀಟಿಗಳನ್ನು ರದ್ದುಪಡಿಸಲು ಆಹಾರ ಇಲಾಖೆಯ ನಿಯಮಗಳಿದ್ದರೂ ಇದುವರೆಗೆ ಅನುಷ್ಠಾನಕ್ಕೆ ಮುಂದಾಗಿರಲಿಲ್ಲ. ಇದೀಗ ಆರ್ಥಿಕ ಹೊರೆ ತಗ್ಗಿಸಿಕೊಳ್ಳುವ ಹಿನ್ನೆಲೆಯಲ್ಲಿ ಸರ್ಕಾರ ಈ ಕ್ರಮಕ್ಕೆ ಮುಂದಾಗಿದೆ ಎನ್ನಲಾಗಿದೆ.

ಈಗ ಅನರ್ಹತೆ ಇರುವ ಕುಟುಂಬಗಳು ಪಡೆದುಕೊಂಡಿರುವ ಬಿಪಿಎಲ್ ಪಡಿತರ ಚೀಟಿಗಳ ಗುರುತಿಸಿ ರದ್ದುಪಡಿಸಲು ಮುಂದಾಗಿದೆ. ಐದು ಗ್ಯಾರಂಟಿ ಯೋಜನೆಯಲ್ಲಿ ಗೃಹಲಕ್ಷ್ಮೀ ತಿಂಗಳಿಗೆ ತಲಾ ಎರಡು ಸಾವಿರ ರು ಹಾಗೂ ಅನ್ನಭಾಗ್ಯ ಯೋಜನೆಯ ಐದು ಕೆಜಿ ಅಕ್ಕಿಯ ಹಣವೂ ಸರ್ಕಾರಕ್ಕೆ ಉಳಿತಾಯವಾಗಲಿದೆ. ಈ ಮೂಲಕ ಸ್ವಲ್ಪ ಮಟ್ಟಿನ ಆರ್ಥಿಕ ಹೊರೆಯಲ್ಲಿ ಕಡಿಮೆ ಮಾಡಿಕೊಳ್ಳುವದು ಸರ್ಕಾರದ ಉದ್ದೇಶವಾಗಿದೆ ಎಂದು ಆರೋಪಗಳು ಕೇಳಿಬರುತ್ತಿವೆ.

ರಾಯಚೂರು ಜಿಲ್ಲೆಯ ಬಿಪಿಎಲ್, ಅಂತ್ಯೋದಯ, ಎಪಿಎಲ್ ಸೇರಿದಂತೆ ಒಟ್ಟು 3,99, 320 ಪಡಿತರ ಚೀಟಿಗಳನ್ನು ಹೊಂದಿದೆ. ಜಿಲ್ಲೆಯಲ್ಲಿ ಆದಾಯ ತೆರಿಗೆ ಪಾವತಿಸುವವರ ಕುಟುಂಬಗಳ ಪಡಿತರ ಚೀಟಿಗಳು 1537, ಕುಟುಂಬದ 1.20 ಲಕ್ಷ ವಾರ್ಷಿಕ ಆದಾಯ ಇರುವ ಒಟ್ಟು 24,663 ಪಡಿತರ ಚೀಟಿಗಳು, ಸರ್ಕಾರಿ ನೌಕರರು ಹೊಂದಿರುವ ಒಟ್ಟು 171 ಪಡಿತರ ಚೀಟಿಗಳು, ಇದರಲ್ಲಿ 86 ಕಾರ್ಡ್ ಬಿಪಿಎಲ್‌ನಿಂದ ಪರಿವರ್ತನೆ ಮಾಡಲಾಗಿದೆ. 57 ಕಾರ್ಡ್ ಹಿಂಪಡೆಯಲಾಗಿದೆ.

ಒಟ್ಟು 14052 ಕಾರ್ಡ್‌ಗಳನ್ನು ಮರಳಿ ಪಡೆಯಲಾಗಿದ್ದು, 15,197 ಕಾರ್ಡ್‌ಗಳ ಕುರಿತು ಕ್ರಮ ತೆಗೆದುಕೊಳ್ಳಲಾಗಿದೆ. 14,052 ಕಾರ್ಡ್‌ಗಳ ಪರಿಶೀಲನೆ ಬಾಕಿ ಉಳಿದುಕೊಂಡಿದೆ. ಒಟ್ಟು 29,249 ಅನರ್ಹ ಕಾರ್ಡ್‌ಗಳಾಗಿವೆ. ಸರ್ಕಾರಿ ನೌಕರರ ಪಡೆದುಕೊಂಡಿರುವ ಕಾರ್ಡ್‌ಗಳ ಆಧಾರದ ಮೇಲೆ ಪಡಿತರ ಪಡೆದುಕೊಂಡಿರುವ ಹಣ ವಸೂಲಿ ಬಗ್ಗೆ ಸಂಬಂಧಿಸಿದ ಇಲಾಖೆಗೆ ಪತ್ರವ್ಯವಹಾರ ಮಾಡಲಾಗಿದೆ ಎಂದು ಅಧಿಕಾರಿಗಳು ತಿಳಿಸುತ್ತಾರೆ.

### ಬಿಪಿಎಲ್ ಕಾರ್ಡ್‌ಗೆ ಅನರ್ಹರು

**ಎಲ್ಲ ಖಾಯಂ ನೌಕರರು ಅಂದರೆ ಸರ್ಕಾರದ ಅಥವಾ ಸರ್ಕಾರದಿಂದ ಅನುದಾನವನ್ನು ಪಡೆಯುತ್ತಿರುವ ಸಂಸ್ಥೆಗಳು ಅಥವಾ ಸರ್ಕಾರಿ ಪ್ರಾಯೋಜಿತ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳು ಇತ್ಯಾದಿ ಆದಾಯ ತೆರಿಗೆ, ಸೇವಾ ತೆರಿಗೆ, ವೃತ್ತಿ ತೆರಿಗೆ ಪಾವತಿಸುವ ಎಲ್ಲ ಕುಟುಂಬಗಳು, ಗ್ರಾಮೀಣ ಪ್ರದೇಶದಲ್ಲಿ 3 ಹೆಕ್ಟರ್ ಒಣಭೂಮಿ ಅಥವಾ ತತ್ಸಮಾನ ನೀರಾವರಿ ಭೂಮಿ ಹೊಂದಿರುವ ಕುಟುಂಬಗಳು ಅಥವಾ ಗ್ರಾಮೀಣ ಪ್ರದೇಶವನ್ನು ಹೊರತುಪಡಿಸಿ ನಗರ/ ಪಟ್ಟಣ ಪ್ರದೇಶಗಳಲ್ಲಿ 1000 ಚದರ ಅಡಿಗಿಂತಲೂ ಹೆಚ್ಚಿನ ವಿಸ್ತೀರ್ಣದ ಪಕ್ಕಾ ಮನೆಯನ್ನು ಸ್ವಂತವಾಗಿ ಹೊಂದಿರುವ ಕುಟುಂಬಗಳು, ಜೀವನೋಪಾಯಕ್ಕಾಗಿ ಸ್ವಂತವಾಗಿ ಓಡಿಸುವ ಒಂದು ವಾಣಿಜ್ಯ ವಾಹನವನ್ನು ಅಂದರೆ ಟ್ರಾಕ್ಟರ್, ಮ್ಯಾಕ್ಸಿಕ್ಯಾಬ್ ಹೊಂದಿದ ಕುಟುಂಬಗಳನ್ನು ಹೊರತುಪಡಿಸಿ ನಾಲ್ಕು ಚಕ್ರದ ವಾಹನಗಳನ್ನು ಹೊಂದಿರುವ ಎಲ್ಲ ಕುಟುಂಬಗಳು, ಕುಟುಂಬದ ವಾರ್ಷಿಕ ವರಮಾನವು ರೂ 1.20 ಲಕ್ಷಗಳಿಗಿಂತಲೂ ಹೆಚ್ಚಿಗೆ ಇರುವ ಕುಟುಂಬಗಳು ಬಿಪಿಎಲ್ ಪಡಿತರ ಚೀಟಿಗಳನ್ನು ಹೊಂದಲು ಅರ್ಹತೆಯನ್ನು ಹೊಂದಿರುವುದಿಲ್ಲ.**

**– ಕೃಷ್ಣ ಶಾವಂತಗೇರಾ, ಉಪನಿರ್ದೇಶಕರು, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ, ರಾಯಚೂರು.**

### ಬಿಪಿಎಲ್ ಪಡಿತರ ಚೀಟಿಗಳ ವಿವರ

**ಜಿಲ್ಲೆಯ ತಾಲ್ಲೂಕುವಾರು ಬಿಪಿಎಲ್ ಪಡಿತರ ಚೀಟಿಗಳ ವಿವರ ಇಂತಿದೆ. ದೇವದುರ್ಗ– 52,234, ಲಿಂಗಸುಗೂರು– 79.298, ಮಾನ್ವಿ–79,838, ರಾಯಚೂರು– 95,465, ಸಿಂಧನೂರು– 86,765 ಸೇರಿದಂತೆ ಒಟ್ಟು 3.93, 600 ಬಿಪಿಎಲ್ ಕಾರ್ಡ್‌ಗಳನ್ನು ಹೊಂದಲಾಗಿದೆ.**

# ಫ್ಲೈಓವರ್ ಕಾಮಗಾರಿ ರಾಡ್ ಬಿದ್ದು ಎಎಸ್‌ಐ ಸಾವು

**ಹುಬ್ಬಳ್ಳಿ, ಸೆ. 15:** ಫ್ಲೈಓವರ್ ಕಾಮಗಾರಿಯ ರಾಡ್ ಬಿದ್ದು ಗಾಯಗೊಂಡಿದ್ದ ಹುಬ್ಬಳ್ಳಿ ಉಪನಗರ ಠಾಣೆಯ ಎಎಸ್‌ಐ ನಾಭಿರಾಜ್ ದಯಣ್ಣವರ (59) ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿದ್ದಾರೆ.

ನಗರದ ಕೋರ್ಟ್ ವೃತ್ತದ ಬಳಿ ಕರ್ತವ್ಯದ ವೇಳೆ ಫ್ಲೈಓವರ್ ಕಾಮಗಾರಿಯ ರಾಡ್ ಬಿದ್ದು ಎಎಸ್‌ಐ ನಾಭಿರಾಜ್ ದಯಣ್ಣವರ ಗಂಭೀರವಾಗಿ ಗಾಯಗೊಂಡಿದ್ದರು. ಕೂಡಲೆ ಅವರನ್ನು ಸ್ಥಳೀಯರು ಕಿಮ್ಸ್ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಈ ವೇಳೆ ಇಂದು ಚಿಕಿತ್ಸೆ ಫಲಿಸದೆ ಎಎಸ್‌ಐ ನಾಬಿರಾಜ್ ದಯಣ್ಣವರ ಸಾವನ್ನಪ್ಪಿದ್ದಾರೆ.



**ದೂರು ನೀಡಿದ ಪುತ್ರ :** ಇನ್ನು ಎಎಸ್‌ಐ ನಾಭಿರಾಜ್ ದಯಣ್ಣವರ ಸಾವಿಗೆ ಸಂಬಂಧಿಸಿದಂತೆ ಅವರ ಪುತ್ರ ರುಷಭ್ ದೂರು ದಾಖಲಿಸಿದ್ದು, ಗುತ್ತಿಗೆದಾರರ ನಿರ್ಲಕ್ಷ್ಯ ಹಿನ್ನೆಲೆ ಅವಘಡ ಸಂಭವಿಸಿದೆ ಎಂದು ಆರೋಪಿಸಿದ್ದಾರೆ. ಝುಂಡು ಕನ್‌ಸ್ಟ್ರಕ್ಷನ್ ನಿರ್ದೇಶಕರಾದ ರಾಮ್‌ಕುಮಾರ್, ಮೋಹಿತ್ ಮತ್ತು ಮನುದೀಪ್, ಯೋಜನಾ ನಿರ್ದೇಶಕ, ಎಂಜಿನಿಯರ್, ಸುರಕ್ಷತಾ ಅಧಿಕಾರಿ, ಕ್ರೇನ್ ಆಪರೇಟರ್ ಮತ್ತು ಕಾರ್ಮಿಕರ ವಿರುದ್ಧ ದೂರು ದಾಖಲಿಸಿದ್ದಾರೆ.

ಎಎಸ್‌ಐ ನಾಬಿರಾಜ್ ದಯಣ್ಣವರ ಸಾವಿನ ಸುದ್ದಿ ತಿಳಿಯುತ್ತಿದ್ದಂತೆ ಕಿಮ್ಸ್ ಆಸ್ಪತ್ರೆಗೆ ಹುಬ್ಬಳ್ಳಿ–ಧಾರವಾಡ ಪೊಲೀಸ್ ಆಯುಕ್ತ ಎನ್ ಶಶಿಕುಮಾರ್ ಭೇಟಿ ನೀಡಿ, ಮಾಹಿತಿ ಪಡೆದರು. ಕುಟುಂಬಸ್ಥರಿಗೆ ಸಾಂತ್ವನ ಹೇಳಿದರು. ಬಳಿಕ, ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ಚಿಕಿತ್ಸೆ ಫಲಕಾರಿಯಾಗದೆ ಬೆಳಗಿನ ಜಾವ ನಾಭಿರಾಜ್ ಮೃತಪಟ್ಟಿದ್ದಾರೆ. ಪೊಲೀಸ್ ಮತ್ತು ಜಿಲ್ಲಾಡಳಿತ ಅವರನ್ನು ಉಳಿಸಿಕೊಳ್ಳಲು ಸಾಕಷ್ಟು ಪ್ರಯತ್ನ ಮಾಡಿತು. ಆದರೆ ನಮ್ಮ ಶ್ರಮ ಫಲಿಸಲಿಲ್ಲ. ಈಗಾಗಲೇ 19 ಜನರ ಮೇಲೆ ಉಪನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಈಗ ಎಎಸ್‌ಐ ಸಾವನ್ನಪ್ಪಿದ್ದಾರೆ ಎಂದು ಹೇಳಿದರು.

ಅಲ್ಲದೆ ಈ ಕಾಮಗಾರಿಯಲ್ಲಿ ಯಾವ ಯಾವ ಇಲಾಖೆ ಬರುತ್ತೆ, ಎಲ್ಲವೂ ಹೊಣೆ ಹೊರಬೇಕಾಗುತ್ತದೆ. ಸಂಬಂಧಿತ ಗುತ್ತಿಗೆದಾರ ಕಂಪನಿ, ಮಾಲೀಕ, ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಅಧಿಕಾರಗಳ ಮೇಲೂ ಪ್ರಕರಣ ದಾಖಲಾಗುತ್ತದೆ. ಇದು ನಮ್ಮದೆ ಇಲಾಖೆ ಪ್ರಕರಣ, ಹೀಗಾಗಿ ಯಾವುದೇ ಲೋಪದೋಷವಾಗಲು ಬಿಡುವುದಿಲ್ಲ. ಝೂಂಡು ಕಂಪನಿಯ ಎರಡು ಕಚೇರಿಗಳು ಬಂದ್ ಆಗಿವೆ ಎಂದು ತಿಳಿಸಿದರು.

### ಸಂತೋಷ್ ಲಾಡ್ ಸಂತಾಪ

**ಎಎಸ್‌ಐ ನಾಭಿರಾಜ್ ದಯಣ್ಣವರ ಗುಣಮುಖರಾಗಲು ವೈದ್ಯರು ಸಾಕಷ್ಟು ಪ್ರಯತ್ನಪಟ್ಟರು. ಆದರೆ, ಈ ತರಹ ಆಗಬಾರದಿತ್ತು. ಅವರ ಆತ್ಮಕ್ಕೆ ಶಾಂತಿ ಸಿಗಲಿ. ಎಎಸ್‌ಐ ನಾಬಿರಾಜ್ ದಯಣ್ಣವರ ಕುಟುಂಬಸ್ಥರನ್ನು ಭೇಟಿ ಮಾಡಿದ್ದೇನೆ. ಕರ್ನಾಟಕದಲ್ಲಿ ಎಲ್ಲೆಲ್ಲಿ ಕಾಮಗಾರಿ ನಡೆಯುತ್ತಿದೆ, ಅಲ್ಲಿ ಗುತ್ತಿಗೆದಾರರು ಮುಂಜಾಗೃತ ಕ್ರಮ ಕೈಗೊಳ್ಳಬೇಕು ಎಂದು ಸೂಚನೆ ನೀಡಿದರು.**

# ಕಾಂಗ್ರೆಸ್ ಸರ್ಕಾರದಲ್ಲಿ ಗಣೇಶ ಭಕ್ತರೇ ಗುರಿ: ಶೆಟ್ಟರ್

**ಬೆಳಗಾವಿ, ಸೆ. 15:** ರಾಜ್ಯದ ಕಾಂಗ್ರೆಸ್ ಸರ್ಕಾರದಲ್ಲಿ ಗಣೇಶ ಭಕ್ತರೇ ಎ1ನ್ ಆರೋಪಿಗಳಾಗುತ್ತಿದ್ದಾರೆ. ನಾಗಮಂಗಲದಲ್ಲಿ ಗಲಭೆ ಸೃಷ್ಟಿಸಿದವರು ಕೆಲ ಅಲ್ಪಸಂಖ್ಯಾತರು. ಮತ್ತು ಅಂಗಡಿಗಳನ್ನು ಲೂಟಿ ಮಾಡಿ, ಬೆಂಕಿ ಹಚ್ಚಿದವರೂ ಇದೇ ಕಾಂಗ್ರೆಸ್ ಪೋಷಿತ ಅಲ್ಪಸಂಖ್ಯಾತ ಕಿಡಿಗೇಡಿ ಧರ್ಮದ್ರೋಹಿಗಳು. ಆದರೆ ಕಾಂಗ್ರೆಸ್ ಸರ್ಕಾರ ಗಣೇಶ ಮಂಡಳದವರನ್ನೇ ಪ್ರಥಮ ಆರೋಪಿಗಳನ್ನಾಗಿ ಮಾಡಿ ಅವರನ್ನು ಬಂಧಿಸುತ್ತಿದೆ ಎಂದು ಸಂಸದ ಜಗದೀಶ ಶೆಟ್ಟರ್ ಕಿಡಿಕಾರಿದರು.

ನಗರದಲ್ಲಿ ಶುಕ್ರವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಗಣೇಶ ವಿಸರ್ಜನೆ ಸಂದರ್ಭದಲ್ಲಿ ನಡೆದಿರುವ ಗಲಭೆ ಪ್ರಕರಣ ಸಣ್ಣಪುಟ್ಟ ವಿಚಾರ ಎಂಬ ಕಾಂಗ್ರೆಸ್ ನಾಯಕರ ಹೇಳಿಕೆ ಹಾಸ್ಯಾಸ್ಪದ. ಅಲ್ಪಸಂಖ್ಯಾತರ ತುಷ್ಟೀಕರಣದ ನೀತಿಯಿಂದಲೇ ಇಂತಹ ಗಲಭೆಗಳಾಗುತ್ತಿವೆ. ಗಲಭೆಗೆ ಯಾರು ಪ್ರಚೋದನೆ ಕೊಡುತ್ತಾರೋ, ಯಾರು ಕಲ್ಲು ತೂರಾಟ ನಡೆಸಿ ಹಾನಿ ಮಾಡಿದ್ದಾರೋ ಅಂತಹವರನ್ನೇ ರಕ್ಷಣೆ ಮಾಡುವ ಕೆಲಸವನ್ನು ಕಾಂಗ್ರೆಸ್ ಸರ್ಕಾರ ಮಾಡುತ್ತಿದೆ ಎಂದು ದೂರಿದರು.

**ಇವರಿಗೇನು ಹಕ್ಕಿದೆ :** ಗಣಪತಿ ಮೆರವಣಿಗೆ ಹೋಗುವ ಸಂದರ್ಭದಲ್ಲಿ ಮಸೀದಿ ಮುಂದೆ ಬರಬೇಡಿ ಎಂದು ಹೇಳಲು ಇವರಿಗೆ ಏನು ಹಕ್ಕಿದೆ? ನೀವು ಅವರಿಗೆ, ಅವರ ಮಸೀದಿಗೆ ರಕ್ಷಣೆ ಕೊಡಿ. ಅದನ್ನು ಬಿಟ್ಟು ಅಲ್ಲಿ ಹೋಗಬೇಡಿ, ಇಲ್ಲಿ ಹೋಗಬೇಡಿ ಎಂದರೆ ಹೇಗೆ ಎಂದು ಶೆಟ್ಟರ್ ಪ್ರಶ್ನೆ ಮಾಡಿದರು.

ಇದು ಸ್ವತಂತ್ರ ಭಾರತ. ಇಂತಹವರಿಗೆ ಸಹಕಾರ ಕೊಡುವುದರಿಂದಲೇ ಇಂತಹ ಗಲಭೆಗಳು ನಡೆಯುತ್ತಿವೆ. ರಾಜ್ಯದಲ್ಲಿ ಯಾವಾಗ ಕಾಂಗ್ರೆಸ್ ಸರ್ಕಾರ ಬಂದಿದೆಯೋ ಆಗ ಕೋಮುಗಲಭೆಗಳು ನಡೆದಿವೆ. ಇದಕ್ಕೆ ನಾಗಮಂಗಲದ ಘಟನೆಯೇ ಸಾಕ್ಷಿ ಎಂದು ಜಗದೀಶ ಶೆಟ್ಟರ್ ಗಂಭೀರ ಆರೋಪ ಮಾಡಿದ ಅವರು, ಮುಖ್ಯಮಂತ್ರಿ ಪಟ್ಟ ಬಿಟ್ಟು ಕೊಡಲ್ಲ ಎನ್ನುವ ಸಿದ್ದರಾಮಯ್ಯನವರ ಹಣೆಬರಹ ಕೋರ್ಟ್ ನಿರ್ಧರಿಸುತ್ತದೆ ಎಂದು ಸಂಸದ ಶೆಟ್ಟರ್ ಹೇಳಿದರು.

ಮುಖ್ಯಮಂತ್ರಿಯಾಗಿ ನಾನೇ ಮುಂದುವರೆಯುತ್ತೇನೆ ಎಂದು ಸಿದ್ದರಾಮಯ್ಯ ಹೇಳಿಕೆ ಕೊಡುತ್ತಾರೆ. ನನ್ನ ವಿರುದ್ಧ ತೀರ್ಪು ಬರುತ್ತೆ. ನಾನು ರಾಜೀನಾಮೆ ಕೊಟ್ಟು ಹೋಗುತ್ತೇನೆ ಎಂದು ಯಾವ ಮುಖ್ಯಮಂತ್ರಿಯೂ ಹೇಳುವುದಿಲ್ಲ. ಆದರೆ, ಕೊನೆಗೆ ಅವರ ಹಣೆಬರಹ ಕೋರ್ಟ್‌ನಲ್ಲಿ ಆಗುತ್ತದೆ ಎಂದು ಹೇಳಿದರು.

# ಜಾತೀಯತೆ, ಮೇಲು–ಕೀಳು, ಅಸಮಾನತೆ ಸಮಾಜಕ್ಕೆ ಕಂಟಕ: ಶಂಕರಾನಂದ


**ಬೀದರ್, ಸೆ. 15 :** ಜಾತಿಯತೆ, ಮೇಲು–ಕೀಳು, ಅಸ್ಪ್ರಶ್ಯತೆ, ಅಸಮಾನತೆ ಸ್ವಸ್ಥ ಸಮಾಜಕ್ಕೆ ಕಂಟಕವಾಗಿವೆ. ನಮ್ಮ ಮಧ್ಯೆ ಇರುವ ಸಮಾಜಘಾತುಕ ಶಕ್ತಿಗಳು ಇದರ ದುರ್ಲಾಭ ಪಡೆದುಕೊಂಡು ಸಮಾಜದಲ್ಲಿ ಜಾತಿ ವಿಷ ಬೀಜ ಬಿತ್ತಿ ಗೊಂದಲ ಸೃಷ್ಟಿಸುತ್ತಿದ್ದಾರೆ ಎಂದು ಭಾರತೀಯ ಶಿಕ್ಷಣ ಮಂಡಲದ ರಾಷ್ಟ್ರೀಯ ಸಂಘಟನಾ ಕಾರ್ಯದರ್ಶಿ ಶಂಕರಾನಂದ ಹೇಳಿದರು.

ಜಿಲ್ಲಾ ಸಾಮಾಜಿಕ ಸಾಮರಸ್ಯ ವೇದಿಕೆಯಿಂದ ಇಲ್ಲಿಯ ಗುರುನಗರ ಬಡಾವಣೆಯ ಡಾ.ಬಸವರಾಜ ಪಾಟೀಲ್ ಅಷ್ಟೂರ್ ಅವರ ನಿವಾಸದಲ್ಲಿ ಜಿಲ್ಲೆಯ ಪೂಜ್ಯರು, ಸಂತರೊಂದಿಗೆ ನಡೆದ ಸಂವಾದದಲ್ಲಿ ಅವರು ಮಾತನಾಡಿದರು.

**ಎಲ್ಲ ಧರ್ಮಗಳ ಮಹಾಪುರುಷರು, ಧರ್ಮ ಗುರುಗಳು, ಸಂತರು ಉತ್ತಮ ಸಮಾಜ ನಿರ್ಮಾಣದ ತತ್ವಗಳನ್ನೇ ಸಾರಿದ್ದಾರೆ. ಎಲ್ಲ ಧರ್ಮ ಗ್ರಂಥಗಳು ಸಹ ಮಾನವೀಯ ಮೌಲ್ಯಗಳನ್ನೇ ಎತ್ತಿ ಹಿಡಿದಿವೆ. ಹೀಗಿರುವಾಗ ಜಾತಿ ಹೆಸರಲ್ಲಿ ಬಡಿದಾಟವೇಕೆ? ನಾವೆಲ್ಲ ಎಚ್ಚರವಾಗಿ ವಸ್ತುಸ್ಥಿತಿ ಅರಿತು ಸಶಕ್ತ, ಸಮೃದ್ಧ ಭಾರತ ಕಟ್ಟಲು ಸಂಕಲ್ಪ ಮಾಡಬೇಕಿದೆ. ವಾರಕ್ಕೊಮ್ಮೆಯಾದರೂ ನಮ್ಮ ಜನರೆಲ್ಲ ಮಠ, ಮಂದಿರದಲ್ಲಿ ಕಡ್ಡಾಯವಾಗಿ ಸೇರಿ ಪರಂಪರೆ, ಸಂಸ್ಕೃತಿ ಉಳಿಸಿ ಬೆಳೆಸುವ ಜೊತೆಗೆ ಸಮಾಜದ ಚಿಂತನೆ ನಡೆಸಬೇಕು.**

**– ರಾಜೇಶ್ವರ ಶ್ರೀಗಳು.**

ಭಾರತದ ಹಿತ ಸಂಘಟನೆಯಲ್ಲೇ ಅಡಗಿದೆ. ನಾವು ಒಗ್ಗಟ್ಟು ಪ್ರದರ್ಶಿಸಿದಾಗೆಲ್ಲ ಶಕ್ತಿಶಾಲಿಯಾಗಿದ್ದೇವೆ.



**ಬೀದರನಲ್ಲಿ ಸಾಮರಸ್ಯ ವೇದಿಕೆಯಿಂದ ಹಮ್ಮಿಕೊಂಡ ಸಂತರು, ಪೂಜ್ಯರೊಂದಿಗೆ ಸಂವಾದ ಗೋಷ್ಠಿಯಲ್ಲಿ ಭಾರತೀಯ ಶಿಕ್ಷಣ ಮಂಡಲ ರಾಷ್ಟ್ರೀಯ ಸಂಘಟನಾ ಕಾರ್ಯದರ್ಶಿ ಶಂಕರಾನಂದ ಮಾತನಾಡಿದರು.**

ವಿಘಟಿತರಾದಾಗ ಅದರ ಬೆಲೆಯನ್ನೂ ತೆತ್ತಿದ್ದೇವೆ. ಇತಿಹಾಸದ ಕಠೋರ ಸತ್ಯಗಳಿಂದ ಪಾಠ ಕಲಿಯಬೇಕು. ಸಮಾಜದಲ್ಲಿ ಸಾಮರಸ್ಯ ನಿರ್ಮಾಣದ ತೀರ ಅಗತ್ಯವಿದೆ. ಇದರಲ್ಲಿ ಪೂಜ್ಯರ, ಸಂತರ, ಸ್ವಾಮೀಜಿಗಳ (ಧರ್ಮ ಗುರುಗಳ) ಪಾತ್ರ ಅತ್ಯಂತ ಹಿರಿದಾಗಿದೆ ಎಂದು ಹೇಳಿದರು.

ಡಾ.ಶಿವಾನಂದ ಸ್ವಾಮೀಜಿ ಮಾತನಾಡಿ, ಸಮಾಜದಲ್ಲಿ ಇಂದು ಶಾಂತಿ, ಸೌಹಾರ್ದ ವಾತಾವರಣ ನಿರ್ಮಾಣದ ಅಗತ್ಯವಿದೆ. ಸಾಮರಸ್ಯ ನೈಜ ಆಚರಣೆಯಲ್ಲಿ ತರಬೇಕಿದೆ. ಆಚಾರ–ವಿಚಾರ, ನಡೆ–ನುಡಿ ಒಂದಾದಾಗ ಇದೆಲ್ಲವೂ ಕಾರ್ಯರೂಪಕ್ಕೆ ತರಲು ಸಾಧ್ಯವಾಗುತ್ತದೆ. ಬಸವಾದಿ ಶರಣರೆಲ್ಲ ಸಮ ಸಮಾಜದ ನಿರ್ಮಾಣವನ್ನೇ ಬಯಸಿದ್ದರು. ಅವರ ಆಶಯದಂತೆ ಕೆಲಸ ನಡೆದಿವೆಯೇ ಎಂಬ ಬಗ್ಗೆ ಚಿಂತನೆ ನಡೆಯಬೇಕಾಗಿದೆ ಎಂದು ನುಡಿದರು.

ಸಾಮಾಜಿಕ ಸಾಮರಸ್ಯ ವಿಭಾಗ ಉತ್ತರ ಪ್ರಾಂತ ಸಂಯೋಜಕ ಶಿವಲಿಂಗ ಕುಂಬಾರ ಪ್ರಾಸ್ತಾವಿಕವಾಗಿ ಮಾತನಾಡಿದರು. ರಾಜೇಶ್ವರ ಶಿವಾಚಾರ್ಯರು, ಡಾ.ಶಿವಾನಂದ ಸ್ವಾಮೀಜಿ, ಶಿವಯೋಗೇಶ್ವರ ಸ್ವಾಮೀಜಿ, ಜಯಶಾಂತಲಿಂಗ ಶಿವಾಚಾರ್ಯರು, ಹಾವಗಿಲಿಂಗ ಶಿವಾಚಾರ್ಯರು, ಭಂತೆ ಜ್ಞಾನಸಾಗರ, ಜ್ಞಾನಿ ದರ್ಬಾರಾಸಿಂಗ್, ಗೋವಿಂದ ಮಹಾರಾಜ ಸೇರಿದಂತೆ 35ಕ್ಕೂ ಹೆಚ್ಚು ಶ್ರೀಗಳು ಉಪಸ್ಥಿತರಿದ್ದರು.

# ದರ್ಶನ್‌ಗೆ ಖಡಕ್ ಎಚ್ಚರಿಕೆ ನೀಡಿದ ಜೈಲಿನ ಅಧಿಕಾರಿಗಳು

**ಬಳ್ಳಾರಿ, ಸೆ. 15 :** ಕೊಲೆ ಪ್ರಕರಣದ ಆರೋಪ ಹೊತ್ತು ಬಳ್ಳಾರಿ ಜೈಲಿನಲ್ಲಿರುವ ನಟ ದರ್ಶನ್ ಟಿವಿಗಾಗಿ ಮಾಡುತ್ತಿರುವ ಕಿರಿಕಿರಿ, ಅಹಂಕಾರ, ದರ್ಪ ತೋರಿಸಿ ಪದೇ ಪದೇ ಅಸಭ್ಯ ವರ್ತನೆ ತೋರುತ್ತಿರುವುದಕ್ಕೆ ಜೈಲು ಅಧಿಕಾರಿಗಳು ದರ್ಶನ್‌ಗೆ ಖಡಕ್ ಎಚ್ಚರಿಕೆ ನೀಡಿದ್ದು, ಪರಪ್ಪನ ಅಗ್ರಹಾರ ಜೈಲಿನಲ್ಲಿ ರಾಜಾತಿಥ್ಯ ಅನುಭವಿಸಿದ್ದ ದರ್ಶನ್, ಬಳ್ಳಾರಿ ಜೈಲಿನಲ್ಲಿ ಸೆಲ್‌ನ ಕಸ ಗುಡಿಸಿ, ಶೌಚಾಲಯ ಸ್ವಚ್ಛಗೊಳಿಸುವ ಕೆಲಸವನ್ನು ತಾವೇ ಮಾಡಿಕೊಳ್ಳುತ್ತಿದ್ದಾರೆ ಎಂದು ಹೇಳಲಾಗಿದೆ.



ಬಳ್ಳಾರಿ ಜೈಲಿನಲ್ಲಿ ದರ್ಶನ್‌ಗೆ ನಿಜವಾದ ಸೆರೆವಾಸ ಹೇಗಿರುತ್ತದೆ ಎಂಬ ಅನುಭವ ಆಗುತ್ತಿದ್ದು, ಸೆಲ್‌ನಲ್ಲಿ ಕಸ ಗುಡಿಸುವುದು, ಬಟ್ಟೆ ತೊಳೆಯುವುದು, ಶೌಚಾಲಯ ಸ್ವಚ್ಛತೆ ಎಲ್ಲವನ್ನೂ ಅವರೇ ಮಾಡಿಕೊಳ್ಳುತ್ತಿದ್ದಾರೆ ಎಂದು ಬಲ್ಲ ಮೂಲಗಳು ಹೇಳಿವೆ. ಜೈಲಿನ ನಿಯಮದ ಪ್ರಕಾರ ಶೌಚಾಲಯವನ್ನು ವಾರಕ್ಕೊಮ್ಮೆ ಜೈಲಿನ ಸ್ವಚ್ಛತಾ ಕೆಲಸಗಾರರು ಬಂದು ಸ್ವಚ್ಛ ಮಾಡುತ್ತಾರೆ. ಉಳಿದ ದಿನ ಸೆಲ್‌ನಲ್ಲಿರುವ ಆರೋಪಿಗಳೇ ಕ್ಲೀನ್ ಮಾಡಿಕೊಳ್ಳಬೇಕು. ಹಾಗಾಗಿ ದರ್ಶನ್ ಸೆಲ್‌ನಲ್ಲಿ ತಾನೇ ಕಸ ಗುಡಿಸಿಕೊಂಡು ಸ್ವಚ್ಛತಾ ಕೆಲಸವನ್ನು ಮಾಡುತ್ತಿದ್ದಾರೆ ಎಂದು ಹೇಳಲಾಗಿದೆ.

# ಡಿ.ಜೆ ಸೌಂಡ್ ಬಳಕೆ ತಡೆ: ನ್ಯಾಯಾಂಗ ತನಿಖೆಗೆ ಆಗ್ರಹ

**ಬೀದರ್, ಸೆ. 15 :** ಸಾರ್ವಜನಿಕ ಗಣೇಶನ ಪ್ರತಿಮೆಗಳ ವಿಸರ್ಜನಾ ಮೆರವಣಿಗೆ ಸಂದರ್ಭದಲ್ಲಿ ಡಿಜೆ ಸೌಂಡ್ ಸಿಸ್ಟಮ್ ಬಳಕೆ ತಡೆದ ಪೊಲೀಸರ ಕ್ರಮ ಕುರಿತು ನ್ಯಾಯಾಂಗ ತನಿಖೆ ನಡೆಸುವಂತೆ ಗಣೇಶ ಮಹಾ ಮಂಡಳದ ಪ್ರಧಾನ ಕಾರ್ಯದರ್ಶಿ ಬಾಬು ವಾಲಿ ಮತ್ತು ಹಿಂದೂ ಪರ ಸಂಘಟನೆ ಮುಖಂಡ ಈಶ್ವರ್ ಸಿಂಗ್ ಠಾಕೂರ್ ಒತ್ತಾಯಿಸಿದರು.



ಸೋಮಶೇಖರ್ ಪಾಟೀಲ್ ಗಾದಗಿ, ಚಂದ್ರಶೇಖರ್ ಗಾದಾ ಹಾಗೂ ಸೂರ್ಯಕಾಂತ್ ಶೆಟಕಾರ್ ಸಮ್ಮುಖದಲ್ಲಿ ಇಲ್ಲಿಯ ಪತ್ರಿಕಾ ಭವನದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ, ಪೊಲೀಸರು ಯಾರನ್ನು ಓಲೈಸಲು ಡಿ.ಜೆ ಬಳಸುವುದನ್ನು ತಡೆದರು ಎಂದು ಬಾಬು ವಾಲಿ ಪ್ರಶ್ನಿಸಿದರು. ಪೊಲೀಸರ ಈ ಕ್ರಮಕ್ಕೆ ನಾವು ರಾಜಕೀಯ ಬಣ್ಣ ಬಳಿಯುವುದಿಲ್ಲ. ಆದರೆ, ಪೊಲೀಸರ ಈ ಕ್ರಮವನ್ನು ನಾವು ಜಿಲ್ಲಾ ಉಸ್ತುವಾರಿ ಮಂತ್ರಿಗಳ ಮತ್ತು ಜಿಲ್ಲಾಡಳಿತದ ಅವಗಾಹನೆಗೆ ತರುತ್ತೇವೆ. ಡಿಜೆ ಬಳಕೆಯನ್ನು ಪೊಲೀಸರು ತಡೆದುದ್ದನ್ನು ಖಂಡಿಸುತ್ತೇವೆ. ಸಂದರ್ಭದಲ್ಲಿ ಯಾವುದೇ ತೆರನಾದ ಅಹಿತಕರ ಘಟನೆ ಸಂಭವಿಸಿದ್ದರೆ ಅದಕ್ಕೆ ಯಾರು ಹೊಣೆಗಾರರಾಗುತ್ತಿದ್ದರು ಎಂದು ಅವರು ಪ್ರಶ್ನಿಸಿದರು.

ಬೀದರ್ ನಗರದಲ್ಲಿ 1980 ರಲ್ಲಿ ಗಣೇಶ ಮಹಾ ಮಂಡಳ ರಚಿಸಲಾಯಿತು. ಗಣೇಶ ಹಬ್ಬ ಆಚರಣೆ ನಿಟ್ಟಿನಲ್ಲಿ ಸಾರ್ವಜನಿಕ ಗಣೇಶ ಪ್ರತಿಮೆಗಳನ್ನು ಪ್ರತಿಷ್ಠಾಪಿಸಿ ಬಳಿಕ ಭಕ್ತಿ ಭಾವದೊಂದಿಗೆ ಮೆರವಣಿಗೆ ಮೂಲಕ ವಿಸರ್ಜಿಸುವುದು ಸಂಪ್ರದಾಯವಾಗಿದೆ ಎಂದು ಪ್ರತಿಪಾದಿಸಿದರು.

ರಾತ್ರಿ 10 ಗಂಟೆ ನಂತರ ಡಿಜೆ ಸೌಂಡ್ ಬಳಕೆ ನಿಷೇಧಿಸಿ ಸುಪ್ರೀಂ ಕೋರ್ಟ್ ಹೊರಡಿಸಿದ ಆದೇಶಕ್ಕೆ ನಾವು ಗೌರವಿಸುತ್ತೇವೆ ಮತ್ತು ಮನ್ನಣೆ ನೀಡುತ್ತೇವೆ ಎಂದು ಸ್ಪಷ್ಟಪಡಿಸಿದ ಬಾಬು ವಾಲಿ ಆದರೆ, ಕಾನೂನುಗಳನ್ನು ಮತ್ತು ನಿಯಮಾವಳಿಗಳನ್ನು ಎಲ್ಲರಿಗು ಕೂಡ ಅನ್ವಯಿಸಬೇಕು. ಮುಂಬಯಿ, ಪುಣೆ ಹಾಗೂ ಹೈದರಾಬಾದ್ ಸೇರಿದಂತೆ ರಾಷ್ಟ್ರದ ವಿವಿಧೆಡೆಗಳಲ್ಲಿ ನೆರವೇರಿಸಲಾಗುವ ಸಾರ್ವಜನಿಕ ಗಣಪನ ಪ್ರತಿಮೆಗಳ ವಿಸರ್ಜನಾ ಮೆರವಣಿಗೆ ಮಾದರಿಯಲ್ಲಿಯೇ ನಾವು ಕೂಡ ಬೀದರ್ ನಗರದಲ್ಲಿ ಸಾರ್ವಜನಿಕ ಗಣಪನ ಪ್ರತಿಮೆಗಳ ಮೆರವಣಿಗೆ ವಿಸರ್ಜನೆ ಮಾಡಿದ್ದೇವೆ. ಈ ಎಲ್ಲ ನಗರಗಳಲ್ಲಿರದ ಕಟ್ಟುಪಾಡುಗಳು ಕೇವಲ ನಮ್ಮ ಬೀದರ್ ನಗರಕ್ಕೇ ಮಾತ್ರ ಏಕೆ ಅನ್ವಯಿಸಲಾಗುತ್ತಿದೆ ಎಂದು ಪ್ರಶ್ನಿಸಿದರು. ಗಣಪನ ಪ್ರತಿಮೆಗಳ ಪ್ರತಿಷ್ಠಾಪನೆ ಹಾಗೂ ವಿಸರ್ಜನಾ ಮೆರವಣಿಗೆ ನಿಟ್ಟಿನಲ್ಲಿ ಗಣೇಶ ಮಹಾ ಮಂಡಳ ಈ ಹಿಂದಿನಿಂದಲೂ ಜಿಲ್ಲಾಡಳಿತದೊಂದಿಗೆ ಸೇತು ಬಂಧುವಾಗಿ ಕೆಲಸ ಮಾಡುತ್ತಲಿದೆ ಎಂದು ಅವರು ಪ್ರತಿಪಾದಿಸಿದರು.

ಡಿಜೆ ಬಳಕೆಗೆ ಸಂಬಂಧಿಸಿದಂತೆ ಇಲ್ಲಿಯ ಡಿಜೆ ಸೌಂಡ್ ಸಿಸ್ಟಮ್‌ಗೆ ಸಂಬಂಧಿಸಿದವರೊಂದಿಗೆ ಪೊಲೀಸರು ಕರೆದಿದ್ದ ಸಭೆಗೆ ಪೊಲೀಸರು ಗಣೇಶ ಮಹಾ ಮಂಡಳದವರನ್ನು ಆಹ್ವಾನಿಸಲಿಲ್ಲ. ಗಣೇಶ ಮಂಡಳದವರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳಲಿಲ್ಲ.

# ರಾಹುಲ್ ಗಾಂಧಿ ಸದಸ್ಯತ್ವ ರದ್ದತಿಗೆ ಆಗ್ರಹ

**ಕಲಬುರಗಿ, ಸೆ. 15 :** ಎಸ್ಸಿ ಎಸ್ಟಿಗಳ ಮೀಸಲಾತಿಯನ್ನು ರದ್ದು ಮಾಡುವುದಾಗಿ ಹೇಳಿಕೆ ನೀಡಿರುವ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಹೇಳಿಕೆ ಖಂಡಿಸಿ, ಬಿಜೆಪಿ ವತಿಯಿಂದ ನಗರದ ಸರ್ದಾರ್ ವಲ್ಲಭಬಾಯಿ ಪಟೇಲ್ ವೃತ್ತದಲ್ಲಿ ಪ್ರತಿಭಟನೆ ನಡೆಸಿ ರಾಹುಲ್ ಗಾಂಧಿ ಅವರ ಪ್ರತಿಕೃತಿ ದಹಿಸಿ ಬೊಬ್ಬೆ ಹೊಡೆದು ಆಕ್ರೋಶ ವ್ಯಕ್ತಪಡಿಸಿದರು.

ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಹಾಗೂ ತಾಂಡಾ ಅಭಿವೃದ್ಧಿ ನಿಗಮದ ಮಾಜಿ ಅಧ್ಯಕ್ಷ ಪಿ. ರಾಜೀವ್ ಮಾತನಾಡಿ, ಜವಾಬ್ದಾರಿಯುತ ಸ್ಥಾನದಲ್ಲಿರುವ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರು ವಿದೇಶಿ ನೆಲದಲ್ಲಿ ಭಾರತದ ವಿರುದ್ಧ ಹೇಳಿಕೆ ನೀಡಿ, ನಾವು ಅಧಿಕಾರಕ್ಕೆ ಬಂದರೆ ಮೀಸಲಾತಿಯನ್ನು ರದ್ದು ಮಾಡುತ್ತೇವೆ ಎಂದಿದ್ದಾರೆ. ಈ ಹೇಳಿಕೆ ಕಾಂಗ್ರೆಸ್ ಪಕ್ಷದ ಹಾಗೂ ರಾಹುಲ್ ಗಾಂಧಿ ಅವರ ನಿಜವಾದ ಬಣ್ಣವನ್ನು ಹೊರಹಾಕಿದೆ ಎಂದರು.

ಸದನದಲ್ಲಿ ಸಂವಿಧಾನದ ಪ್ರತಿಯನ್ನು ಹಿಡಿದು ಭಾಷಣ ಮಾಡುವ ರಾಹುಲ್ ಗಾಂಧಿ, ಭಾರತದ ಸಂವಿಧಾನದ ವಿರೋಧದ ಧೋರಣೆಯನ್ನು ಹೊಂದಿದ್ದು, ಕೂಡಲೇ ಶೋಷಿತ ಸಮುದಾಯಗಳಿಗೆ ಕ್ಷಮೆ ಕೇಳಬೇಕು ಮತ್ತು ಲೋಕಸಭಾ ಸದಸ್ಯತ್ವವನ್ನು ರದ್ದುಗೊಳಿಸಿ ಅವರನ್ನು ವಜಾಗೊಳಿಸಬೇಕು ಎಂದು ಆಗ್ರಹಿಸಿದರು.

ಮಾಜಿ ಶಾಸಕ ರಾಜಕುಮಾರ್ ಪಾಟೀಲ್ ತೇಲ್ಕೂರ್ ಮಾತನಾಡಿದ ಅವರು, ಮೀಸಲಾತಿ ಎಂಬುದು ಎಸ್ಸಿ ಎಸ್ಟಿಗಳ ಹಕ್ಕು. ಅದು ಕಾಂಗ್ರೆಸ್ ಪಕ್ಷದ ಭಿಕ್ಷೆಯಲ್ಲ. 1955ರಲ್ಲಿ ಕಾಕಾ ಕಾಲೇಕರ್ ಸಮಿತಿ ವರದಿ ನೀಡುವ ಸಂದರ್ಭದಲ್ಲಿ ಜವಾಹರಲಾಲ್ ನೆಹರು ಕೂಡ ಮೀಸಲಾತಿಯನ್ನು ವಿರೋಧ ಮಾಡಿದ್ದರು. ಇದೀಗ ರಾಹುಲ್ ಗಾಂಧಿ ಕೂಡ ಮೀಸಲಾತಿ ವಿರೋಧಿಯಾಗಿದ್ದಾರೆ. ಮೀಸಲಾತಿ ನೀಡಬಾರದೆಂಬ ಚಿಂತನೆ ಕಾಂಗ್ರೆಸ್ಸಿಗರ ರಕ್ತದಲ್ಲೆ ಇದೆ ಎಂದು ಟೀಕಿಸಿದರು.

ಪ್ರತಿಭಟನೆಯಲ್ಲಿ ಮಾಜಿ ಸಂಸದ ಡಾ.ಉಮೇಶ್ ಜಾಧವ್, ಶಾಸಕ ಅವಿನಾಶ್ ಜಾಧವ್, ಜಿಲ್ಲಾಧ್ಯಕ್ಷ ಶಿವರಾಜ್ ಪಾಟೀಲ್ ರದ್ದೇವಾಡಗಿ, ನಗರಾಧ್ಯಕ್ಷ ಚಂದು ಪಾಟೀಲ್, ಮಾಜಿ ಶಾಸಕ ದತ್ತಾತ್ರೇಯ ಪಾಟೀಲ್ ರೇವೂರ್, ಪ್ರಧಾನ ಕಾರ್ಯದರ್ಶಿ ಉಮೇಶ್ ಪಾಟೀಲ್, ಶಿವಯೋಗಿ ನಾಗೇನಹಳ್ಳಿ, ಮಹಾದೇವ ಬೆಳಮಗಿ, ಅವ್ವಣ್ಣಾ ಮ್ಯಾಕೇರಿ, ಶರಣಪ್ಪಾ ತಳವಾರ, ಸೇರಿದಂತೆ ಹಲವು ಮುಖಂಡರು ಮತ್ತು ನೂರಾರಾ ಕಾರ್ಯಕರ್ತರು ಭಾಗವಹಿಸಿದ್ದರು.

# ಟ್ಯಾಂಕರ್‌ನಿಂದ ಇಂಧನ ಸೋರಿಕೆ ಭಾರಿ ಸ್ಫೋಟ
## 24 ಮಂದಿ ಸಾವು, 40 ಮಂದಿ ಸುಟ್ಟು ಕರಕಲು



**ದಕ್ಷಿಣ ಪೆನಿನ್ಸುಲಾ, ಸೆ. 15 :** ಹೈಟಿಯಲ್ಲಿ ಸೋರಿಕೆಯಾಗುತ್ತಿದ್ದ ಇಂಧನ ಸಂಗ್ರಹಿಸಲು ಸ್ಥಳೀಯರು ಧಾವಿಸಿದ ನಂತರ ಗ್ಯಾಸ್ ಟ್ಯಾಂಕರ್ ಸ್ಫೋಟಗೊಂಡು 24 ಜನ ಸಾವು ಕಂಡಿದ್ದಾರೆ. 40 ಮಂದಿ ತೀವ್ರವಾಗಿ ಸುಟ್ಟು ಕರಕಲಾಗಿದ್ದಾರೆ. ಶನಿವಾರದಂದು ಹೈಟಿಯ ದಕ್ಷಿಣ ಪೆನಿನ್ಸುಲಾದ ರಸ್ತೆಯೊಂದರಲ್ಲಿ ಇಂಧನ ಟ್ರಕ್ ಸ್ಫೋಟದಲ್ಲಿ 24 ಜನರು ಸಾವನ್ನಪ್ಪಿದರು. ಗಾಯಗೊಂಡ 40 ಬದುಕುಳಿದವರಲ್ಲಿ ಅರ್ಧದಷ್ಟು ಜನರು ಮೂರನೇ ಹಂತದ ಸುಟ್ಟಗಾಯಗಳೊಂದಿಗೆ ಉಳಿದಿದ್ದಾರೆ ಎಂದು ಸರ್ಕಾರ ತಿಳಿಸಿದೆ. ಹೈಟಿ ಪ್ರಧಾನ ಮಂತ್ರಿ ಗ್ಯಾರಿ ಕೊನಿಲ್ಲೆ ಅವರು ನಿಪ್ಪೆಸ್ ಇಲಾಖೆಯ ಕರಾವಳಿ ನಗರವಾದ ಮಿರಾಗೊನೆ ಬಳಿ ಸೈಟ್‌ಗೆ ಭೇಟಿ ನೀಡಿದರು. ಕೆಲವು ಗಂಭೀರವಾಗಿ ಗಾಯಗೊಂಡ ಸಂತ್ರಸ್ತರನ್ನು ಹೆಚ್ಚಿನ ಚಿಕಿತ್ಸೆಗಾಗಿ ಹೆಲಿಕಾಪ್ಟರ್ ಮೂಲಕ ಸ್ಥಳಾಂತರಿಸಲಾಗಿದೆ ಎಂದು ಹೇಳಿದ್ದಾರೆ. ತೀವ್ರವಾದ ಸುಟ್ಟಗಾಯಗಳೊಂದಿಗೆ ಬಳಲುತ್ತಿರುವ ಜನರಿಗೆ ಚಿಕಿತ್ಸೆ ನೀಡಲು ಸ್ಥಳೀಯ ಆಸ್ಪತ್ರೆಗಳಿಗೆ ಸಾಧ್ಯವಾಗುತ್ತಿಲ್ಲ.

ಗಾಯಾಳುಗಳ ಸ್ಥಿತಿಯಂತೂ ಹೇಳತೀರದಷ್ಟು ಗಂಭೀರವಾಗಿದ್ದು, ಸಾವಿನ ಸಂಖ್ಯೆ ಏರಿಕೆಯಾಗುವ ಸಾಧ್ಯತೆ ಇದೆ. ಹೈಟಿಯ ಆಸ್ಪತ್ರೆಗಳು ತೀವ್ರವಾದ ಸುಟ್ಟಗಾಯಗಳಿಗೆ ಬಲಿಯಾದವರಿಗೆ ಚಿಕಿತ್ಸೆ ನೀಡಲು ಸರಿಯಾಗಿ ಸಜ್ಜುಗೊಂಡಿಲ್ಲ. 12 ಮಿಲಿಯನ್ ಜನರಿರುವ ರಾಷ್ಟ್ರವು ಇಂಧನ ಕೊರತೆಯೊಂದಿಗೆ ಹೋರಾಡುತ್ತಿದೆ, ಏಕೆಂದರೆ ಗ್ಯಾಂಗ್‌ಗಳು ನಡುವಿನ ಹೋರಾಟವು ದೇಶಕ್ಕೆ ಸರಕುಗಳನ್ನು ಆಮದು ಮಾಡಿಕೊಳ್ಳುವುದನ್ನು ಹೆಚ್ಚು ಕಷ್ಟಕರವಾಗಿಸಿದೆ.

# ಮಾಲ್ಡೀವ್ಸ್–ಚೀನಾ ದ್ವಿಪಕ್ಷೀಯ ಮಾತುಕತೆ: ಸೇನಾ ಸಹಕಾರ ಒಪ್ಪಂದಕ್ಕೆ ಅನುಮೋದನೆ



**ಬೀಜಿಂಗ್, ಸೆ. 15 :** ಭಾರತದ ಜೊತೆ ಸಂಬಂಧ ಹಳಸಿದ ಬಳಿಕ ಚೀನಾಕ್ಕೆ ಹತ್ತಿರವಾರುವ ಮಾಲ್ಡೀವ್ಸ್ ಇದೀಗ ಆ ದೇಶದೊಂದಿಗೆ ಸೇರಿ ಸೇನಾ ಸಹಕಾರ ಒಪ್ಪಂದಕ್ಕೆ ಅನುಮೋದನೆ ನೀಡಿದೆ. ಮಾಲ್ಡೀವ್ಸ್ ಮತ್ತು ಚೀನಾ ದ್ವಿಪಕ್ಷೀಯ ಮಾತುಕತೆ ನಡೆಸಿದ್ದು, ಉಭಯ ದೇಶಗಳ ನಡುವಿನ ರಕ್ಷಣಾ ಸಹಕಾರವನ್ನು ಬಲಪಡಿಸುವ ಮಾರ್ಗಗಳನ್ನು ಚರ್ಚಿಸಿದವು ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ.

ಈ ಕುರಿತು ಸಿಂಘೈನಲ್ಲಿನ ಪೋಸ್ಟ್ ಮಾಡಲಾಗಿದ್ದು, ಮಾಲ್ಡೀವ್ಸ್ನ ರಕ್ಷಣಾ ಸಚಿವಾಲಯವು 11 ನೇ ಬೀಜಿಂಗ್ ಕ್ಸಿಯಾಂಗ್ಶಾನ್ ಫೋರಮ್‌ನಲ್ಲಿ ಮಾಲ್ಡೀವ್ಸ್ ರಕ್ಷಣಾ ಸಚಿವ ಘಾಸನ್ ಮೌಮೂನ್ ಮತ್ತು ಚೀನಾ ಸಹವರ್ತಿ ಅಡ್ಮಿರಲ್ ಡಾಂಗ್ ಜುನ್ ಅವರನ್ನು ಭೇಟಿ ಮಾಡಿ ಚರ್ಚೆ ನಡೆಸಿದರು ಎಂದು ಪೋಸ್ಟ್ ಮಾಡಿದೆ. ಅಲ್ಲದೆ ಸಭೆಯಲ್ಲಿ ಉಭಯ ದೇಶಗಳ ನಡುವೆ ರಕ್ಷಣಾ ಸಹಕಾರವನ್ನು ಬಲಪಡಿಸುವ ಮಾರ್ಗಗಳ ಕುರಿತು ಉಭಯ ಸಚಿವರು ಚರ್ಚಿಸಿದರು. ಚೀನಾದ ಮಾಲ್ಡೀವ್ಸ್‌ನ್ ರಾಯಭಾರಿ ಡಾ.ಫಜೀಲ್ ನಜೀಬ್ ಕೂಡ ಸಭೆಯಲ್ಲಿ ಉಪಸ್ಥಿತರಿದ್ದರು. ಎಂದು ಚರ್ಚೆಯ ವಿವರಗಳನ್ನು ಬಹಿರಂಗಪಡಿಸದೆ ಸಭೆ ಕುರಿತು ಮಾಹಿತಿ ನೀಡಿದೆ.

ಮಾಲ್ಡೀವ್ಸ್ ಮತ್ತು ಚೀನಾ ಈ ಹಿಂದೆ ಮಿಲಿಟರಿ ಸಂಬಂಧಗಳನ್ನು ಬಲಪಡಿಸಲು ಮಾತುಕತೆ ನಡೆಸಿದ್ದವು. ಮಾರ್ಚ್‌ನಲ್ಲಿ, ಮಾಲ್ಡೀವ್ಸ್ ಮತ್ತು ಚೀನಾ ಮಾಲ್ಡೀವ್ಸ್ ಮಿಲಿಟರಿ ಮತ್ತು ಭದ್ರತಾ ಸೇವೆಗಳಿಗೆ ಮಿಲಿಟರಿ ನೆರವು ನೀಡುವ ಒಪ್ಪಂದಕ್ಕೆ ಸಹಿ ಹಾಕಿದವು ಹೇಳಲಾಗಿದೆ. ಈ ಒಪ್ಪಂದದ ಅಡಿಯಲ್ಲಿ, ಚೀನಾ ಮಾಲ್ಡೀವ್ಸ್‌ಗೆ ಮಿಲಿಟರಿ ಉಪಕರಣಗಳು ಮತ್ತು ತರಬೇತಿಯನ್ನು ನೀಡುತ್ತದೆ ಎಂದು ಅಧ್ಯಕ್ಷ ಮೊಹಮ್ಮದ್ ಮುಯಿಝು ಹೇಳಿದ್ದಾರೆ.

# ವಿದ್ಯಾರ್ಥಿಯ ಕೊಲೆ ಯತ್ನ: ಶೇಖ್ ಹಸೀನಾ ವಿರುದ್ಧ ಮತ್ತೊಂದು ಪ್ರಕರಣ



**ಢಾಕಾ, ಸೆ. 15 :** ಬಾಂಗ್ಲಾದೇಶದ ಪದಚ್ಯುತ ಪ್ರಧಾನಿ ಶೇಖ್ ಹಸೀನಾ ಮತ್ತು ಇತರ 58 ಮಂದಿ ವಿರುದ್ಧ ವಿದ್ಯಾರ್ಥಿಯ ಕೊಲೆ ಯತ್ನ ಪ್ರಕರಣ ದಾಖಲಾಗಿದೆ. 22 ವರ್ಷದ ಫಾಹಿಮ್ ಫೈಸಲ್ ಅವರು ದೂರು ದಾಖಲಿಸಿದ್ದಾರೆ. ಆಗಸ್ಟ್ 4 ರಂದು ನಡೆದ ಸರ್ಕಾರ ವಿರೋಧಿ ಪ್ರತಿಭಟನೆ ವೇಳೆ ತಮ್ಮ ಮೇಲೆ ಗುಂಡಿನ ದಾಳಿ ನಡೆದು ಗಾಯಗೊಂಡಿದ್ದಾಗಿ ಅವರು ತಿಳಿಸಿದ್ದಾರೆ.

ಇದರೊಂದಿಗೆ ಹಸೀನಾ ಅವರ ವಿರುದ್ಧ 136 ಕೊಲೆ ಪ್ರಕರಣ ಸೇರಿದಂತೆ ಒಟ್ಟು 155 ಪ್ರಕರಣಗಳು ದಾಖಲಾದಂತಾಗಿದೆ ಎಂದೂ ಉಲ್ಲೇಖಿಸಿದೆ.

# ಕರಾಚಿ ವಿಮಾನ ನಿಲ್ದಾಣದಲ್ಲಿ ಮತ್ತೊಂದು ಮಂಕಿಪಾಕ್ಸ್ ಪ್ರಕರಣ ಪತ್ತೆ




**ಪಾಕಿಸ್ತಾನ, ಸೆ. 15 :** ಕರಾಚಿಯ ಜಿನ್ನಾ ಅಂತರಾಷ್ಟ್ರೀಯ ವಿಮಾನ ನಿಲ್ದಾಣದ ಮತ್ತೊಂದು ಶಂಕಿತ ಮಂಕಿಪಾಕ್ಸ್ ಪ್ರಕರಣ ವರದಿಯಾಗಿದೆ. ಜಿದ್ದಾದಿಂದ ಬಂದ PIA ವಿಮಾನವೊಂದರಲ್ಲಿ ಆಗಮಿಸಿದ ವ್ಯಕ್ತಿಯೊಬ್ಬರಲ್ಲಿ ಮಂಕಿಪಾಕ್ಸ್ ಕಾಯಿಲೆಯ ಲಕ್ಷಣಗಳು ಪತ್ತೆಯಾಗಿರುವುದಾಗಿ ಅಧಿಕಾರಿಗಳು ಹೇಳಿರುವುದಾಗಿ ತಿಳಿಸಿದ್ದಾರೆ. ಮಂಕಿಪಾಕ್ಸ್ ಕಾಯಿಲೆ ಇರುವ ಲಕ್ಷಣಗಳು ಪತ್ತೆಯಾದ ಹಿನ್ನೆಲೆಯಲ್ಲಿ ವ್ಯಕ್ತಿಯನ್ನು ಹೆಚ್ಚುವರಿ ಪರೀಕ್ಷೆ ಮತ್ತು ಆರೈಕೆಗಾಗಿ ಸಿಂಧ್‌ನ ಸರ್ಕಾರಿ ಆಸ್ಪತ್ರೆಯೊಂದರ ಪ್ರತ್ಯೇಕ ವಾರ್ಡ್‌ಗೆ ಕರೆದೊಯ್ಯಲಾಯಿತು. ಈ ವಾರದ ಆರಂಭದಲ್ಲಿ ಪಾಕಿಸ್ತಾನದ ಖೈಬರ್ ಪಖ್ತುಂಖ್ವಾ ಪ್ರಾಂತ್ಯದಲ್ಲಿ ಮಂಕಿ ಪಾಕ್ಸ್ ನ ಐದನೇ ಪ್ರಕರಣ ವರದಿಯಾಗಿತ್ತು 33 ವರ್ಷದ ಸಂತ್ರಸ್ತ ಖೈಬರ್ ಪಖ್ತುಂಖ್ವಾದ ಪೇಶಾವರ ನಿವಾಸಿ ಎಂದು ಅಧಿಕಾರಿಗಳು ಹೇಳಿದ್ದಾರೆ. ಈತ ಸೆಪ್ಟೆಂಬರ್ 7 ರಂದು ಸೌದಿ ಅರೇಬಿಯಾದಿಂದ ಪಾಕಿಸ್ತಾನಕ್ಕೆ ಹಿಂದಿರುಗಿದ ನಂತರ ಆತನಿಗೆ ಮಂಕಿಪಾಕ್ಸ್ ಇರುವುದಾಗಿ ಖೈಬರ್ ಆಸ್ಪತ್ರೆ ದೃಢಪಡಿಸಿತ್ತು ಎಂದು ಅಧಿಕಾರಿ ತಿಳಿಸಿದ್ದಾರೆ.




ಮಿಲನ್‌ನ ಯೂಸೌಫ್ ಫೋಫಾನಾ ಶನಿವಾರರಂದು ಇಟಲಿಯ ಮಿಲನ್‌ನಲ್ಲಿ ಮತ್ತು ವೆನೆಜಿಯಾ ನಡುವಿನ ಸರಣಿ ಫುಟ್‌ಬಾಲ್ ಪಂದ್ಯದ ಸಂದರ್ಭದಲ್ಲಿ ಹೆಡರ್‌ಗಾಗಿ ಸ್ಪರ್ಧಿಸಿದರು.



ರಷ್ಯಾದ ವ್ಲಾಡಿವೋಸ್ಟಾಕ್‌ನಲ್ಲಿ ಭಾನುವಾರ ಮೋಟಾರ್‌ಸೈಕಲ್ ಎಂಡ್ಯೂರೋ ರೇಸ್‌ನಲ್ಲಿ ಭಾಗವಹಿಸಿದ್ದ ಸ್ಪರ್ಧಿಗಳ ದೃಶ್ಯ.

# ಝುಂಫ ನದಿಯಲ್ಲಿ ದೋಣಿ ಮುಳುಗಿ 64 ರೈತರ ಜಲಸಮಾಧಿ



**ನೈಜೀರಿಯಾ, ಸೆ.15:** ನೈಜೀರಿಯಾದ ಝುಂಫರಾ ನದಿಯಲ್ಲಿ ಭೀಕರ ದುರಂತ ಸಂಭವಿಸಿದೆ. ದೋಣಿಮುಳುಗಿ ಕನಿಷ್ಠ 64 ರೈತರು ಸಾವನ್ನಪ್ಪಿದ್ದಾರೆ. ರೈತರು ಹೊಲಗಳಿಗೆ ಹೋಗುತ್ತಿದ್ದಾಗ ಈ ಘಟನೆ ನಡೆದಿದೆ.

ವಾಯವ್ಯ ನೈಜೀರಿಯಾದ ಝುಂಫರಾ ರಾಜ್ಯದ ಗುಮ್ಮಿ ಪಟ್ಟಣದ ಬಳಿ ಭಾನುವಾರ ಬೆಳಗ್ಗೆ 70 ರೈತರನ್ನು ತಮ್ಮ ಹೊಲಗಳಿಗೆ ಸಾಗಿಸುತ್ತಿದ್ದ ಮರದ ದೋಣಿಯೊಂದು ಹಠಾತ್ ಪಲ್ಟಿಯಾಗಿದೆ.

ಘಟನೆ ಬಗ್ಗೆ ಮಾಹಿತಿ ಬಂದ ತಕ್ಷಣ ಸ್ಥಳೀಯ ಅಧಿಕಾರಿಗಳು ರಕ್ಷಣಾ ಕಾರ್ಯಾಚರಣೆ ಆರಂಭಿಸಿದ್ದಾರೆ. ಮೂರು ಗಂಟೆಗಳ ನಂತರ, ಆರು ಮಂದಿಯಲ್ಲಿ ರಕ್ಷಣೆ ಮಾಡಲಾಗಿದೆ. ಗುಮ್ಮಿ ಸ್ಥಳೀಯ ಸರ್ಕಾರಿ ಪ್ರದೇಶದಲ್ಲಿ ಇದು ಎರಡನೇ ಘಟನೆಯಾಗಿದೆ ಎಂದು ಪರಿಹಾರ ಕಾರ್ಯಗಳ ನೇತೃತ್ವ ವಹಿಸಿದ್ದ ಸ್ಥಳೀಯ ಆಡಳಿತಾಧಿಕಾರಿ ಅಮಿನು ನುಹು ಫಲಾಲೆ ವಿವರಿಸಿದರು.

900ಕ್ಕೂ ಹೆಚ್ಚು ರೈತರು ನಿತ್ಯ ನದಿ ದಾಟಿ ತಮ್ಮ ಹೊಲಗಳಿಗೆ ಹೋಗುತ್ತಾರೆ. ಆದರೆ ಎರಡು ದೋಣಿಗಳು ಮಾತ್ರ ಲಭ್ಯವಿವೆ. ಇದರಿಂದ ಆಗಾಗ ಸಂಚಾರ ದಟ್ಟಣೆ ಹೆಚ್ಚುತ್ತಿದ್ದು, ಮರದ ದೋಣಿಗಳೂ ಆಗಿರುವುದರಿಂದ ಅಪಘಾತಗಳು ಸಂಭವಿಸುತ್ತಿವೆ ಎಂದು ಸ್ಥಳೀಯರು ವಿವರಿಸುತ್ತಾರೆ. ಖನಿಜ ಸಂಪನ್ಮೂಲಗಳ ಮೇಲೆ ಹಿಡಿತ ಸಾಧಿಸುವ ಕ್ರಿಮಿನಲ್ ಗ್ಯಾಂಗ್‌ಗಳಿಂದ ಈಗಾಗಲೇ ಮುತ್ತಿಕೊಂಡಿರುವ ಝುಂಫರಾ ರಾಜ್ಯವು ಭಾರೀ ಮಳೆಯಿಂದ ಉಂಟಾದ ಪ್ರವಾಹದಿಂದ ತೀವ್ರವಾಗಿ ಹಾನಿಗೊಳಗಾಗಿದೆ. ಎರಡು ವಾರಗಳ ಹಿಂದೆ ಪ್ರವಾಹದಿಂದಾಗಿ 10,000 ಕ್ಕೂ ಹೆಚ್ಚು ನಿವಾಸಿಗಳು ಸ್ಥಳಾಂತರಗೊಂಡಿದ್ದಾರೆ ಎಂದು ಸ್ಥಳೀಯ ಅಧಿಕಾರಿಗಳು ತಿಳಿಸಿದ್ದಾರೆ.

# ದಕ್ಷಿಣ ಅಮೆರಿಕದ ಕಾಡುಗಳಲ್ಲಿ ಕಾಡ್ಗಿಚ್ಚು: ಕಿಡಿಗೇಡಿಗಳ ಸಂಚು



**ಸಾವೊ ಪೌಲೊ, ಸೆ. 15 :** ದಕ್ಷಿಣ ಅಮೇರಿಕಾದ ಬ್ರೆಜಿಲ್‌ನ ಅಮೆಜಾನ್ ಸಮೀಪದ ಜೌಗು ಪ್ರದೇಶ ಸೇರಿ ಬೊಲಿವಿಯಾದ ಕಾಡುಗಳವರೆಗೆ ಕಾಡ್ಗಿಚ್ಚು ಹತ್ತುಕೊಂಡಿದೆ. ಇದು ಈ ವರ್ಷದಲ್ಲಿ ಕಂಡುಬಂದ ಅತೀ ದೊಡ್ಡ ಕಾಡ್ಗಿಚ್ಚು ಎಂದು ಹೇಳಲಾಗುತ್ತಿದೆ.


ಹವಾಮಾನ 32 ಡಿಗ್ರಿ ಸೆಲಿಯಸ್ ಇರುವ ಕಾರಣ ಕಾಡ್ಗಿಚ್ಚು ಹಬ್ಬಲು ಸಹಾಯವಾಗಿದೆ.

ಬ್ರೆಜಿಲ್‌ನ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ ಇನ್ಪೆ ಪ್ರಕಾರ, ದಕ್ಷಿಣ ಅಮೆರಿಕಾದ 13 ದೇಶಗಳಲ್ಲಿ ಈ ವರ್ಷ ಇಲ್ಲಿಯವರೆಗೆ 346,112 ಅಗ್ನಿಶಾಮಕ ಹಾಟಾಸ್ಪಾಟ್‌ಗಳನ್ನು ಗುರುತಿಸಲಾಗಿದೆ. ಇದು ಹಿಂದಿನ 2007 ರ ದಾಖಲೆಯ 345,322 ಹಾಟಾಸ್ಪಾಟ್‌ಗಳು 1998 ರ ಡೇಟಾ ಅನ್ವಯ ಅಗ್ರಸ್ಥಾನದಲ್ಲಿದೆ ಎಂದು ಹೇಳಿದೆ.

ಈ ಅವಘಡವನ್ನು ರಾಯಿಟರ್ಸ್ ಛಾಯಾಗ್ರಾಹಕನೊಬ್ಬ ತನ್ನ ಕ್ಯಾಮರಾದಲ್ಲಿ ಸೆರೆ ಹಿಡಿದಿದ್ದಾನೆ. ಕೊಲಂಬಿಯಾದಿಂದ ಉರುಗ್ವೆಯವರೆಗೆ ಬೆಂಕಿ ಹತ್ತುಕೊಂಡಿದೆ.

ಇದರಲ್ಲಿ ಕಿಡಿಗೇಡಿಗಳ ಸಂಚು ಇದೆ ಎಂದು ಅನುಮಾನ ಬರುತ್ತಿದೆ ಎಂದು ಪೊಲೀಸರು ಹೇಳಿದ್ದಾರೆ. ಬ್ರೆಜಿಲ್ ಮತ್ತು ಬೊಲಿವಿಯಾವು ಬೆಂಕಿಯನ್ನು ನಿಯಂತ್ರಿಸಲು ಸಾವಿರಾರು ಅಗ್ನಿಶಾಮಕ ದಳಗಳನ್ನು ಕಳುಹಿಸಿದೆ. ಬಿಸಿಲು ವಾತಾವರಣದಿಂದ ಬೆಂಕಿಯು ಹೆಚ್ಚು ವೇಗವಾಗಿ ಹರಡಲು ಸಹಾಯ ಮಾಡುತ್ತಿದೆ. ಕಳೆದ ವರ್ಷದಿಂದ ದಕ್ಷಿಣ ಅಮೆರಿಕಾವು ಶಾಖದ ಅಲೆಗಳಿಗೆ ತುತ್ತಾಗುತ್ತಿದೆ ಎಂದು ತಜ್ಞರು ಹೇಳಿದ್ದಾರೆ.

# ಈಜಿಪ್ಟ್‌ನಲ್ಲಿ ಎರಡು ಪ್ರಯಾಣಿಕ ರೈಲುಗಳು ಡಿಕ್ಕಿ: ಭೀಕರ ದುರಂತದಲ್ಲಿ ಕನಿಷ್ಠ 3 ಮಂದಿ ಸಾವು, 50 ಮಂದಿ ಗಾಯ



**ಕೈರೋ, ಸೆ. 15 :** ಈಜಿಪ್ಟ್‌ನ ನೈಲ್ ಡೆಲ್ಟಾದಲ್ಲಿ ಶನಿವಾರ ಎರಡು ಪ್ರಯಾಣಿಕ ರೈಲುಗಳು ಡಿಕ್ಕಿ ಹೊಡೆದು ಕನಿಷ್ಠ ಮೂವರು ಸಾವನ್ನಪ್ಪಿದ್ದಾರೆ. ಸುಮಾರು 50 ಮಂದಿ ಗಾಯಗೊಂಡಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಶರ್ಕಿಯಾ ಪ್ರಾಂತ್ಯದ ರಾಜಧಾನಿ ಝುಗಾಜಿಗ್ ನಗರದಲ್ಲಿ ಈ ಅಪಘಾತ ಸಂಭವಿಸಿದೆ ಎಂದು ದೇಶದ ರೈಲ್ವೆ ಪ್ರಾಧಿಕಾರ ಹೇಳಿಕೆಯಲ್ಲಿ ತಿಳಿಸಿದೆ.

ಘರ್ಷಣೆಯಲ್ಲಿ ಕನಿಷ್ಠ 49 ಮಂದಿ ಗಾಯಗೊಂಡಿದ್ದಾರೆ ಎಂದು ಈಜಿಪ್ಟ್‌ನ ಆರೋಗ್ಯ ಸಚಿವಾಲಯ ತಿಳಿಸಿದೆ. ಅಪಘಾತದಲ್ಲಿ ಒಂದು ರೈಲು ಕಾರ್ ನಜ್ಜುಗುಜ್ಜಾಗಿರುವುದು ಜನ ಸೇರಿರುವುದು ಕಂಡು ಬಂದಿದೆ. ಗಾಯಾಳುಗಳನ್ನು ಬೋಗಿ ಕಿಟಕಿಗಳ ಮೂಲಕ ಮೇಲಕ್ಕೆತ್ತಲು ಪುರುಷರು ಪ್ರಯತ್ನಿಸಿದ್ದಾರೆ.

ಈಜಿಪ್ಟ್‌ನಲ್ಲಿ ರೈಲು ಹಳಿತಪ್ಪುವಿಕೆಗಳು ಮತ್ತು ಅಪಘಾತಗಳು ಸಾಮಾನ್ಯವಾಗಿದೆ, ಅಲ್ಲಿ ಹಳೆಯದಾದ ರೈಲ್ವೇ ವ್ಯವಸ್ಥೆಯು ಸಹ ತಪ್ಪು ನಿರ್ವಹಣೆಯಿಂದ ಪೀಡಿತವಾಗಿದೆ. ಇತ್ತೀಚಿನ ವರ್ಷಗಳಲ್ಲಿ, ಸರ್ಕಾರವು ತನ್ನ ರೈಲ್ವೆಯನ್ನು ಸುಧಾರಿಸಲು ಉಪಕ್ರಮಗಳನ್ನು ಘೋಷಿಸಿದೆ.

# ರಷ್ಯಾ–ಉಕ್ರೇನ್ ನಡುವೆ ಕೈದಿಗಳ ವಿನಿಮಯ ಒಪ್ಪಂದ

ರಷ್ಯಾ ಮತ್ತು ಉಕ್ರೇನ್ 206 ಯುದ್ಧ ಕೈದಿಗಳನ್ನು ವಿನಿಮಯ ಮಾಡಿಕೊಂಡಿವೆ ಎಂದು ರಷ್ಯಾದ ರಕ್ಷಣಾ ಸಚಿವಾಲಯ ತಿಳಿಸಿದೆ. ಕುರ್ಸ್ಕ್ ಪ್ರದೇಶದಲ್ಲಿ ಸೆರೆಯಾಳಾಗಿದ್ದ ಒಟ್ಟು 103 ರಷ್ಯಾದ ಸೈನಿಕರನ್ನು ಬಿಡುಗಡೆ ಮಾಡಲಾಗಿದೆ.

ಇದಕ್ಕೆ ಪ್ರತಿಯಾಗಿ, 103 ಉಕ್ರೇನ್ ಯುದ್ಧ ಕೈದಿಗಳನ್ನು ವರ್ಗಾಯಿಸಲಾಗಿದೆ ಎಂದು ರಷ್ಯಾದ ರಕ್ಷಣಾ ಸಚಿವಾಲಯ ಶನಿವಾರ ಹೇಳಿಕೆಯಲ್ಲಿ ತಿಳಿಸಿದೆ.

ವಿನಿಮಯಗೊಂಡ ಎಲ್ಲಾ ರಷ್ಯಾದ ಸೈನಿಕರು ಬೆಲಾರಸ್ನಲ್ಲಿದ್ದಾರೆ, ಅಲ್ಲಿ ಅವರಿಗೆ ಅಗತ್ಯ ನೆರವು ನೀಡಲಾಗುತ್ತಿದೆ ಎಂದು ಕ್ಸಿನ್ಹುವಾ ಸುದ್ದಿ ಸಂಸ್ಥೆ ವರದಿ ಮಾಡಿದೆ.

ವಿನಿಮಯಕ್ಕಾಗಿ ಯುಎಇ ಮಾನವೀಯ ಮಧ್ಯಸ್ಥಿಕೆ ಪ್ರಯತ್ನಗಳನ್ನು ಮಾಡಿದೆ ಎಂದು ಅದು ಹೇಳಿದೆ. ಈ ವಿನಿಮಯವು ಎರಡು ದಿನಗಳಲ್ಲಿ ಎರಡನೆಯದಾಗಿದೆ ಎಂದು ಉಕ್ರೇನ್ ಅಧಿಕಾರಿಗಳು ಭಾನುವಾರ ತಿಳಿಸಿದ್ದಾರೆ.

21 ಅಧಿಕಾರಿಗಳು ಸೇರಿದಂತೆ ಒಟ್ಟು 103 ಉಕ್ರೇನ್ ಮಿಲಿಟರಿ ಪಡೆಗಳನ್ನು ಬಿಡುಗಡೆ ಮಾಡಲಾಗಿದೆ ಎಂದು ಉಕ್ರೇನ್ ಅಧ್ಯಕ್ಷ ವೊಲೊಡಿಮಿರ್ ಜೆಲೆನ್ಸ್ಕಿ ಟೆಲಿಗ್ರಾಮ್‌ನಲ್ಲಿ ಪೋಸ್ಟ್‌ನಲ್ಲಿ ಬರೆದಿದ್ದಾರೆ.

ನಮ್ಮ ಜನರು ಮನೆಯಲ್ಲಿದ್ದಾರೆ. ನಾವು ರಷ್ಯಾದ ಸೆರೆಯಿಂದ ಇನ್ನೂ 103 ಯೋಧರನ್ನು ಉಕ್ರೇನ್‌ಗೆ ಯಶಸ್ವಿಯಾಗಿ ಮರಳಿ ಕರೆತಂದಿದ್ದೇವೆ. ಎಂಭತ್ತೆರಡು ಖಾಸಗಿ ಮತ್ತು ಸಾರ್ಜೆಂಟ್‌ಗಳು. 21 ಅಧಿಕಾರಿಗಳು. ಕೈವ್ ಮತ್ತು ಡೊನೆಟ್ಸ್ಕ್ ಪ್ರದೇಶಗಳು, ಮಾರಿಯುಪೋಲ್ ಮತ್ತು ಅಜೋವ್‌ಸ್ಟಾಲ್, ಲುಹಾನ್ಸ್ಕ್, ಜಪೊರಿಝಿಯಾ ಮತ್ತು ಖಾರ್ಕಿವ್ ಪ್ರದೇಶಗಳ ರಕ್ಷಕರು. ಉಕ್ರೇನ್‌ನ ಸಶಸ್ತ್ರ ಪಡೆಗಳ ಯೋಧರು, ಉಕ್ರೇನ್ ರಾಷ್ಟ್ರೀಯ ಗಾರ್ಡ್, ಗಡಿ ಕಾವಲುಗಾರರು ಮತ್ತು ಪೊಲೀಸ್ ಅಧಿಕಾರಿಗಳು ಎಂದು ಜೆಲೆನ್ಸ್ಕಿ ಸಾಮಾಜಿಕ ಮಾಧ್ಯಮ ಪ್ಲಾಟ್‌ಫಾರ್ಮ್ ಎಕ್ಸ್‌ನಲ್ಲಿ ಬರೆದಿದ್ದಾರೆ.

# ಚೆಸ್ ಒಲಿಂಪಿಯಾಡ್: ಭಾರತ ತಂಡಗಳ ಗೆಲುವಿನ ಓಟ ಅಬಾಧಿತ



**ಬುಡಾಪೆಸ್ಟ್, ಸೆ. 15 :** ಯಶಸ್ಸಿನ ಓಟ ಮುಂದುವರಿಸಿರುವ ಗ್ರ್ಯಾಂಡ್ಮಾಸ್ಟರ್ ಅರ್ಜುನ್ ಇರಿಗೇಶಿ ಸತತ ನಾಲ್ಕನೇ ಜಯ ಪಡೆದರು. 45ನೇ ಚೆಸ್ ಒಲಿಂಪಿಯಾಡ್‌ನಲ್ಲಿ ಅವರ ಉತ್ತಮ ಆಟದ ಬಲದಿಂದ ಭಾರತ 3.5–0.5 ಅಂತರದಿಂದ ಶನಿವಾರ ರಾತ್ರಿ ಸರ್ಬಿಯಾ ತಂಡವನ್ನು ಮಣಿಸಿತು.

ಪ್ರಜ್ಞಾನಂದ ಅವರು ಅಲೆಕ್ಸಿ ಸರನ ಅವರೊಂದಿಗೆ ಪಾಯಿಂಟ್ ಹಂಚಿಕೊಂಡ ಮೇಲೆ ಅರ್ಜುನ್ ಅವರ ಆಟ ಭಾರತದ ಪಾಲಿಗೆ ನಿರ್ಣಾಯಕವಾಗಿತ್ತು.

ವಿಶ್ವದ ನಾಲ್ಕನೇ ಕ್ರಮಾಂಕದ ಅರ್ಜುನ್ ನಿರಾಸೆ ಮೂಡಿಸದೇ, ಪರಿಪೂರ್ಣ ಪ್ರತಿದಾಳಿಯ ಆಟದಲ್ಲಿ ಎದುರಾಳಿ ಇಂಡ್ಯಿಕ್ ಅಲೆಕ್ಸಾಂಡರ್ ಅವರನ್ನು ಸೋಲಿಸಿದರು. ಮಾತ್ರವಲ್ಲ, ತಮ್ಮ ರೇಟಿಂಗನ್ನು 2800ರ ಸಮೀಪಕ್ಕೆ ತಲುಪಿಸಿದರು.


ಗ್ರ್ಯಾಂಡ್‌ಮಾಸ್ಟರ್‌ಗಳಾದ ವಿದಿತ್ ಗುಜರಾತಿ ಮತ್ತು ಡಿ. ಗುಕೇಶ್ ಅವರು ಕ್ರಮವಾಗಿ ಎವಿಕ್ ವೆಲಿಮಿರ್ ಮತ್ತು ಅಲೆಕ್ಸಾಂಡರ್ ಪ್ರೆಡ್ಕೆ ಅರನ್ನು ಸೋಲಿಸಿದರು.

ಮಹಿಳೆಯರ ವಿಭಾಗದಲ್ಲಿ ಭಾರತ ತಂಡ 3.5–0.5 ರಿಂದ ಫ್ರಾನ್ಸ್ ತಂಡವನ್ನು ಮಣಿಸಿ ಅಜೇಯ ಓಟ ಮುಂದುವರಿಸಿತು.

ಇನ್ನು ಏಳೂ ಸುತ್ತಿನ ಪಂದ್ಯಗಳು ಬಾಕಿವುಳಿದಿವೆ. ಅಗ್ರ ಬೋರ್ಡ್‌ನಲ್ಲಿ ಡಿ.ಹಾರಿಕ ತಮ್ಮೆಲ್ಲ ಅನುಭವ ಬಳಸಿಕೊಂಡು ಫ್ರೆಂಚ್ ಆಟಗಾರ್ತಿ ಡೀಮೆಂಟೆ ದೊಲಿಟ್ ಕಾರ್ನೆಟ್ ಅವರನ್ನು ಸೋಲಿಸಿದರು. ತಾನಿಯಾ ಸಚದೇವ್ ಅವರು ಬೆನ್ಬೆಸ್ಮಿಯಾ ನತಾಶ ಅವರ ವಿರುದ್ಧ ಗೆಲುವಿಗೆ ಹೋರಾಡಬೇಕಾಯಿತು. ಫ್ರಾನ್ಸ್‌ನ ಆಟಗಾರ್ತಿ ಸಮಯದ ಒತ್ತಡಕ್ಕೆ ಸಿಲುಕಿದ್ದರಿಂದ ತಾನಿಯಾ ಗೆಲುವು ಸುಲಭವಾಯಿತು. ದಿವ್ಯಾ ದೇಶಮುಖ್, ಹೆರ್ಝಾಜಿಪೊರ್ ಮಿತ್ರಾ ವಿರುದ್ಧ ಜಯಗಳಿಸಿದರೆ, ವೈಶಾಲಿ ಮತ್ತು ಸೋಫಿ ಮಿಲಿಟ್ ಪಾಯಿಂಟ್ ಹಂಚಿಕೊಂಡರು.

# ಐಸಿಸಿಯಲ್ಲಿ ಸ್ಥಾನ ಪಡೆದ ಪಾಕಿಸ್ತಾನದ ಮೊದಲ ಮಹಿಳಾ ಅಂಪೈರ್

**ಪಾಕಿಸ್ತಾನಿ, ಸೆ. 15 :** ಐಸಿಸಿ ಇಂಟರ್ನ್ಯಾಶನಲ್ ಪ್ಯಾನೆಲ್ ಆಫ್ ಡೆವಲಪ್ಮೆಂಟ್ ಅಂಪೈರ್‌ಗಳಲ್ಲಿ ಸ್ಥಾನ ಪಡೆದ ಮೊದಲ ಪಾಕಿಸ್ತಾನಿ ಮಹಿಳೆಯಾಗಿ ಸಲೀಮಾ ಇಮ್ತಿಯಾಜ್ ಹೊರಹೊಮ್ಮಿದ್ದಾರೆ. ಈ ಮಾಹಿತಿಯನ್ನು ಪಾಕಿಸ್ತಾನ ಕ್ರಿಕೆಟ್ ಮಂಡಳಿ ಭಾನುವಾರ (ಸೆಪ್ಟೆಂಬರ್ 15) ಹಂಚಿಕೊಂಡಿದೆ.



ಸಲೀಮಾ ಇಮ್ತಿಯಾಜ್ ಅವರು ಐಸಿಸಿ ಅಂಪೈರ್ ಆಗಿ ಆಯ್ಕೆಯಾದ ಕಾರಣ ಇನ್ಮುಂದೆ ಅವರು ಮಹಿಳಾ ದ್ವಿಪಕ್ಷೀಯ ಅಂತರರಾಷ್ಟ್ರೀಯ ಪಂದ್ಯಗಳು ಮತ್ತು ಐಸಿಸಿ ಮಹಿಳಾ ಈವೆಂಟ್‌ಗಳಲ್ಲಿ ಅಫಿಶಿಯೇಟ್ ಮಾಡಲು ಅರ್ಹರಾಗಿದ್ದಾರೆ. ಸಲೀಮಾ ಇಮ್ತಿಯಾಜ್ ಮಾತನಾಡುತ್ತಿರುವ ವಿಡಿಯೋವನ್ನು ಪಾಕಿಸ್ತಾನ ಕ್ರಿಕೆಟ್ ಮಂಡಳಿ ಹಂಚಿಕೊಂಡಿದೆ. ಇದು ಕೇವಲ ನನ್ನ ಗೆಲುವಲ್ಲ, ಇದು ಪಾಕಿಸ್ತಾನದ ಪ್ರತಿಯೊಬ್ಬ ಮಹಿಳಾ ಕ್ರಿಕೆಟಿಗರು ಮತ್ತು ಅಂಪೈರ್‌ಗಳ ವಿಜಯವಾಗಿದೆ. ನನ್ನ ಯಶಸ್ಸು ಆಟದಲ್ಲಿ ತಮ್ಮ ಛಾಪು ಮೂಡಿಸುವ ಕನಸು ಕಾಣುವ ಅಸಂಖ್ಯಾತ ಮಹಿಳೆಯರನ್ನು ಪ್ರೇರೇಪಿಸುತ್ತದೆ ಎಂದು ನಾನು ಭಾವಿಸುತ್ತೇನೆ ಎಂದು ಸಲೀಮಾ ಹೇಳಿದ್ದಾರೆ.

ಈ ಬಗ್ಗೆ ಮಾತನಾಡಿರುವ ಸಲೀಮಾ ಇಮ್ತಿಯಾಜ್, ಅಂತರಾಷ್ಟ್ರೀಯ ಮಟ್ಟದಲ್ಲಿ ನನ್ನ ದೇಶವನ್ನು ಪ್ರತಿನಿಧಿಸುವುದು ನನ್ನ ಸ್ವಂತ ಕನಸಾಗಿತ್ತು, ಏಷ್ಯನ್ ಕ್ರಿಕೆಟ್ ಕೌನ್ಸಿಲ್‌ನಲ್ಲಿ ನನಗೆ ಅವಕಾಶಗಳು ಬಂದವು, ಆದರೆ ಉನ್ನತ ಮಟ್ಟದಲ್ಲಿ ಕೆಲಸ ಮಾಡುವುದು ಯಾವಾಗಲೂ ಅಂತಿಮ ಗುರಿಯಾಗಿದೆ ಎಂದು ಹೇಳಿದರು. ವೃತ್ತಿಯಲ್ಲಿ ವೇಗದ ಬೌಲರ್ ಆಗಿರುವ ಸಲೀಮಾ ಇಮ್ತಿಯಾಜ್ ಅವರ ಪುತ್ರಿ ಕೈನಾತ್, 16 ಏಕದಿನ ಇನ್ನಿಂಗ್ಸ್‌ನಲ್ಲಿ 10 ವಿಕೆಟ್ ಪಡೆದಿದ್ದಾರೆ. ಇದಲ್ಲದೇ, ಕೈನಾಟ್ ಟಿ20 ಅಂತರಾಷ್ಟ್ರೀಯ 12 ಇನ್ನಿಂಗ್ಸ್‌ನಲ್ಲಿ 8 ವಿಕೆಟ್‌ಗಳನ್ನು ಕಬಳಿಸಿದ್ದಾರೆ.